ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೭೫

# ಪಟ್ಟಿ – ೧೮

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಶುಕ್ರವಾರ, ದಿನಾಂಕ : ೦೯ನೇ ಜೂನ್, ೨೦೧೭

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ವಸತಿ ಸಚಿವರು.

೫. ಸಣ್ಣ ಕೈಗಾರಿಕೆ ಸಚಿವರು.

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೭. ಸಾರಿಗೆ ಸಚಿವರು.

೮. ಗಣಿ ಮತ್ತು ಭೂವಿಜ್ಞಾನ ಸಚಿವರು.

---

# ಸರ್ಕಾರಿ ಪ್ರಾಥಮಿಕ ಹಿರಿಯ ಪ್ರಾಥಮಿಕ/ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೧೭೦ (೨೪೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಹಿರಿಯ ಪ್ರಾಥಮಿಕ ಪ್ರೌಢ ಶಾಲೆಗಳಲ್ಲಿ, ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ನೀಡುವ ಕುರಿತು ಸರ್ಕಾರದ ನಿಲುವೇನು; ಈ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಆ) ಈ ವಿಷಯವನ್ನು ಬೋಧಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ/ ಉಪನ್ಯಾಸಕರ ಸಂಖ್ಯೆ ಎಷ್ಟು;

(ಇ) ಅವಶ್ಯಕತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; ಖಾಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು ; ಖಾಲಿ ಇರುವ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಯಾವಾಗ ಮಾಡಲಾಗುವುದು; ಈ ಹಿಂದೆ ಯಾವಾಗ ನೇಮಕ ಮಾಡಿಕೊಳ್ಳಲಾಗಿತ್ತು.

(ಈ) ಎಷ್ಟು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಒಬ್ಬ ಶಿಕ್ಷಕರ ನೇಮಕಾತಿ ಮಾಡಲಾಗುತ್ತಿದೆ; (ವಿದ್ಯಾರ್ಥಿ/ಶಿಕ್ಷಕರ ಅನುಪಾತ ವಿವರ ನೀಡುವುದು)

(ಉ) ಸದರಿ ದೈಹಿಕ ಶಿಕ್ಷಣ ಶಿಕ್ಷಕರ/ ಉಪನ್ಯಾಸಕರ ವೃಂದ ಮತ್ತು ನೇಮಕಾತಿಯು ತಿದ್ದುಪಡಿ ಕಾರ್ಯ ಯಾವ ಹಂತದಲ್ಲಿದೆ; ಯಾವ ಕಾಲಮಿತಿಯೊಳಗೆ ಇದನ್ನು ಪೂರ್ಣಗೊಳಿಸಲಾಗುವುದು;

(ಊ) ಪ್ರಸ್ತುತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು ಖಾಲಿ ಇದ್ದಲ್ಲಿ, ಆ ವಿಷಯವನ್ನು ಬೋಧನೆ ಮಾಡುತ್ತಿರುವ ಬೋಧಕರು ಯಾರು; ಹೇಗೆ ನಿರ್ವಹಣೆ ಮಾಡಲಾಗುತ್ತಿದೆ?

## ರಾಜ್ಯದ ಸರ್ಕಾರಿ/ಅನುದಾನಿತ ಪ್ರೌಢ ಶಾಲೆಗಳಲ್ಲಿನ ವಿಷಯವಾರು ಹುದ್ದೆಗಳ ಸಂಪೂರ್ಣ ಮಾಹಿತಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೧೭೧ (೨೪೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ/ ಅನುದಾನಿತ ಪ್ರೌಢ ಶಾಲೆಗಳಲ್ಲಿ ವಿಷಯವಾರು ಮಂಜೂರಾತಿ ಹುದ್ದೆಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ವಿಷಯವಾರು ಶಿಕ್ಷಕರ (ಕನ್ನಡ, ಇಂಗ್ಲೀಷ್, ಹಿಂದಿ, ಸಂಸ್ಕೃತ, ಉರ್ದು, ತಮಿಳು, ತೆಲಗು ಮಲಯಾಳಂ, ಗಣಿತ, ವಿಜ್ಞಾನ ಸಮಾಜ ವಿಜ್ಞಾನ, ದೈಹಿಕ ಶಿಕ್ಷಣ, ವೃತ್ತಿ ಶಿಕ್ಷಣ, ಸಂಗೀತ, ಮುಂತಾದವು) ಹುದ್ದೆಗಳ ಮಾಹಿತಿಯನ್ನು ನೀಡುವುದು;

(ಆ) ಖಾಲಿ ಇರುವ ವಿಷಯವಾರು ಶಿಕ್ಷಕರ ಸಂಖ್ಯೆ ಎಷ್ಟು; (ವಿಷಯವಾರು ಮಾಹಿತಿ ನೀಡುವುದು) ಯಾವ ಕಾಲಮಿತಿಯೊಳಗೆ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು? (ವಿಷಯವಾರು ಮಾಹಿತಿ ನೀಡುವುದು)

# ಅಮಾನತ್ತುಗೊಂಡಿರುವ ಶಿಕ್ಷಕರು ಹಾಗೂ ಹಾಜರಾದ ಶಿಕ್ಷಕರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೧೭೨ (೨೪೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿ ಕಳೆದ ೦೨ ವರ್ಷಗಳಲ್ಲಿ ಅಮಾನತ್ತಾದ ಶಿಕ್ಷಕರು ಯಾರು ಯಾರು; (ಹೆಸರು, ಅವರು ಕಾರ್ಯ ನಿರ್ವಹಿಸುತ್ತಿರುವ ಶಾಲೆಯ ಹೆಸರು ಮತ್ತು ವಿಳಾಸ, ಅವರ ಅಮಾನತ್ತಿಗೆ ಕಾರಣ, ಅಮಾನತ್ತನ್ನು ಮಾಡಿರುವ ದಿನಾಂಕ ಹಾಗೂ ವಾಪಸ್ ಪಡೆದಿರುವ ಪ್ರಕರಣಗಳ ದಿನಾಂಕ ಹಾಗೂ ಕರ್ತವ್ಯಕ್ಕೆ ಹಾಜರಾದ ದಿನಾಂಕ ಮತ್ತು ಅಮಾನತ್ತಾಗಿರುವ ಪ್ರಕರಣಗಳ ವಿವರ ನೀಡುವುದು; ಇತ್ಯರ್ಥವಾದ ಪ್ರಕರಣಗಳ ಸಂಖ್ಯೆ ಎಷ್ಟು; ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಪ್ರತಿಯೊಂದರ ಸಂಪೂರ್ಣ ವಿವರ ನೀಡುವುದು)

(ಆ) ಅಮಾನತ್ತು ರದ್ದು ಮಾಡಲು ಕಾರಣಗಳೇನು; ಅಮಾನತ್ತು ರದ್ದುಪಡಿಸಿ ಮರು ನಿಯುಕ್ತಿಗೊಳಿಸಿ ನೀಡಲಾಗಿರುವ ಸ್ಥಳ "ಅ" ವಲಯದಲ್ಲಿದೆಯೋ; "ಬ" ವಲಯದಲ್ಲಿದೆಯೋ ಅಥವಾ "ಸಿ" ವಲಯದಲ್ಲಿದೆಯೋ ಎಂಬುದರ ಮಾಹಿತಿ ನೀಡುವುದು? (ಪ್ರತಿಯೊಬ್ಬರ ಪ್ರತಿಯೊಂದರ ಮಾಹಿತಿ ನೀಡುವುದು)

## ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಹಂತದಲ್ಲಿ ಆಂಗ್ಲ ಮಾಧ್ಯಮ ತರಗತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೧೭೩ (೨೪೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಪ್ರೌಢಶಾಲಾ ಹಂತದಲ್ಲಿ ಆಂಗ್ಲ ಮಾಧ್ಯಮದಲ್ಲಿ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗುತ್ತಿದೆಯೇ; ಸರ್ಕಾರಿ ಪ್ರಾಥಮಿಕ ಪ್ರೌಢ ಶಾಲೆಗಳಲ್ಲಿ ಇಲ್ಲಿಯವರೆಗೆ ಎಷ್ಟು ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲಾಗಿದೆ; ಆಂಗ್ಲ ಭಾಷೆಯನ್ನು ಬೋಧನೆ ಮಾಡುವ ಬೋಧಕರು ಯಾರು; ಈ ನಿಟ್ಟಿನಲ್ಲಿ ಸರ್ಕಾರದ ಸ್ಪಷ್ಟ ನೀತಿ ಏನು?

## ಅಂಕಪಟ್ಟಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೭೪ (೨೬೧೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ವಿಶ್ವವಿದ್ಯಾನಿಲಯಗಳಿಗೆ ಏಕಾಏಕಿ MSIL ನಿಂದ ಅಂಕಪಟ್ಟಿಗಳನ್ನು ಪಡೆದುಕೊಳ್ಳಲು ಸೂಚಿಸಿರುವುದು ನಿಜವೇ;

(ಆ) MSIL ನಿಂದ ವಿಶ್ವವಿದ್ಯಾನಿಲಯಗಳು ಪಡೆಯುವ ಅಂಕಪಟ್ಟಿಗಳಿಗೆ ಬೆಲೆ ಎಷ್ಟು; ಮತ್ತು ಇದಕ್ಕೆ ಪೂರಕವಾಗಿ ವಿಶ್ವವಿದ್ಯಾನಿಲಯಗಳು ಪಡೆಯುತ್ತಿದ್ದ ಅಂಕಪಟ್ಟಿಗಳ ಬೆಲೆ ಎಷ್ಟು; (ಪೂರ್ಣ ಮಾಹಿತಿ ನೀಡುವುದು)

(ಇ) MSIL ನಿಂದ ಅವರಿಗೆ ಅವರದೇ ಆದ ಅಂಕಪಟ್ಟಿಗಳನ್ನು ತಯಾರಿಸುವ ಪ್ರಿಂಟಿಂಗ್ ಪ್ರೆಸ್ ಇದೆಯೇ; ಅಥವಾ ಇವರು ಮೂರನೇ ವ್ಯಕ್ತಿಯಿಂದ ಈ ಅಂಕಪಟ್ಟಿಗಳನ್ನು ಪಡೆಯುತ್ತಿದ್ದಾರೆಯೇ? (ವಿವರಿಸುವುದು)

## ಸರ್ಕಾರಿ ಶಿಕ್ಷಕರಿಗೆ ಅನ್ಯ ಕಾರ್ಯ, ಕರ್ತವ್ಯಕ್ಕೆ ನಿಯೋಜಿಸಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೧೭೫ (೨೫೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಶಿಕ್ಷಕರಿಗೆ ಶಾಲೆಯ ಪಾಠ ಶೈಕ್ಷಣಿಕ ಚಟುವಟಿಕೆಗಳನ್ನು ಹೊರತುಪಡಿಸಿ ಅನ್ಯ ಕರ್ತವ್ಯ/ಕಾರ್ಯಗಳಿಗೆ ನಿಯೋಜಿಸಲಾಗಿದೆಯೇ; ಇದ್ದರೆ, ಯಾವ ಯಾವ ಕೆಲಸ ಕಾರ್ಯಗಳಿಗೆ ನಿಯೋಜಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಕೆಲಸ ಕಾರ್ಯಗಳಿಗೆ ಶಿಕ್ಷಕರನ್ನು ನಿಯೋಜಿಸುವುದರಿಂದ ಶೈಕ್ಷಣಿಕ ಪ್ರಗತಿ ಮೇಲೆ ಪರಿಣಾಮ ಬೀರಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಕುಸಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಶಿಕ್ಷಕರನ್ನು ಅನ್ಯ ಕರ್ತವ್ಯ, ಕಾರ್ಯಗಳಿಗೆ ನಿಯೋಜಿಸುವುದನ್ನು ರದ್ದುಪಡಿಸಲು ಸರ್ಕಾರ ಮುಂದಾಗುವುದೇ? (ಮಾಹಿತಿ ನೀಡುವುದು)

## ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ೪ ಸಾರಿಗೆ ಸಂಸ್ಥೆಗಳ ಮಾಹಿತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೧೭೬ (೨೫೯೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು ಮಹಾನಗರ ರಸ್ತೆ ಸಾರಿಗೆ ಸಂಸ್ಥೆ, ವಾಯುವ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಗಳು ಯಾವ ದಿನಾಂಕಗಳಿಂದ ಸ್ವಾಯತ್ತ ರಸ್ತೆ ಸಾರಿಗೆ ಸಂಸ್ಥೆಗಳಾಗಿವೆ; (ಸಂಪೂರ್ಣ ಮಾಹಿತಿಯನ್ನು ದಾಖಲೆಯೊಂದಿಗೆ ಒದಗಿಸುವುದು)

(ಆ) ಈ ಸಂಸ್ಥೆಗಳು ಯಾವ ಕಾಯಿದೆ ಅಡಿಯಲ್ಲಿ ಪರಿಚ್ಛೇದಡಿಯಲ್ಲಿ ಸ್ವತಂತ್ರ ರಸ್ತೆ ಸಾರಿಗೆ ಸಂಸ್ಥೆಗಳಾಗಿವೆ; (ಸಂಪೂರ್ಣ ಮಾಹಿತಿಯನ್ನು ಕಾಯಿದೆಯ ಪ್ರತಿಯೊಂದಿಗೆ ನೀಡುವುದು)

(ಇ) ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಅಡಿಯಲ್ಲಿ ಯಾವ ಕಾಯಿದೆ ಮತ್ತು ಪರಿಚ್ಛೇದ ಪ್ರಕಾರ ಕಾರ್ಯ ನಿರ್ವಹಿಸಲು ಅವಕಾಶ ಇದೆ? (ಆದೇಶಗಳೊಂದಿಗೆ ಮಾಹಿತಿ ನೀಡುವುದು)

## ಕಲಬುರಗಿಯಲ್ಲಿರುವ ಅಪರ ಶಿಕ್ಷಣ ಆಯುಕ್ತರ ಕಛೇರಿಯಲ್ಲಿ ಮಂಜೂರಾದ ಭರ್ತಿಯಾದ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೧೭೭ (೨೫೯೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಛೇರಿಯಲ್ಲಿ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು ಮತ್ತು ಸದರಿ ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ; (ವೃಂದವಾರು, ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡದೆ ಇರುವುದಕ್ಕೆ ಕಾರಣವೇನು; ಇದರಿಂದಾಗಿ ಸಮಯಕ್ಕೆ ಸರಿಯಾಗಿ ಕಛೇರಿ ಕಾರ್ಯಗಳು ಆಗದೆ ಹೈದ್ರಬಾದ್–ಕರ್ನಾಟಕ ಭಾಗದ ಜಿಲ್ಲೆಗಳ ಶಿಕ್ಷಕರು ಪರದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ, ಯಾವ ಕಾಲ ಮಿತಿಯೊಳಗೆ ಭರ್ತಿ ಮಾಡಲಾಗುವುದು? (ಮಾಹಿತಿ ನೀಡುವುದು)

## ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ನೇಮಕಾತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೧೭೮ (೨೫೯೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯು ೨೦೦೦ ವರ್ಷದಲ್ಲಿ ಸ್ವತಂತ್ರವಾಗಿ ಸ್ಥಾಪನೆ ಆದಾಗ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸಲು ಅಗತ್ಯ ಮೇಲ್ವಿಚಾರಕರನ್ನು ಅಧಿಕಾರಿಗಳನ್ನು ಮತ್ತು ಸಿಬ್ಬಂದಿಗಳನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವೃಂದಗಳಿಂದ

ನೇಮಿಸಿರುವುದು ನಿಜವೇ; ಹಾಗಿದ್ದರೆ, ಸದರಿ ಅಧಿಕಾರಿಗಳ/ ಸಿಬ್ಬಂದಿಗಳ ಇಚ್ಛೆ ಪಡೆದು ಈ ಸಂಸ್ಥೆಯ ಮಂಜೂರಾತಿ ಹುದ್ದೆಗಳಿಗೆ ವಿಲೀನ ಮಾಡಿಕೊಳ್ಳಲಾಗಿದೆಯೇ; ಇದ್ದರೆ, ವೃಂದವಾರು, ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು;

(ಆ) ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯುಲ್ಲಿ ಮಂಜುರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಮೇಲ್ವಿಚಾರಕರ ಮತ್ತು ಅಧಿಕಾರಿಗಳ (Supervisors and Officeṛ) ಹುದ್ದೆಗಳ ಸಂಖ್ಯೆ ಎಷ್ಟು; ೨೦೦೦ನೇ ವರ್ಷದಿಂದ ಮಾಹಿತಿ ನೀಡುವುದು;

(ಇ) ಖಾಲಿ ಇರುವ ಮೇಲ್ವಿಚಾರಕರ ಮತ್ತು ಅಧಿಕಾರಿಗಳ (Supervisors and Officeṛ) ಗಳ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳದೆ ರಾಜ್ಯದ ವಿವಿಧ ಬಾಗಗಳಿಂದ ನಿಯೋಜನೆ ಮಾಡಿರುವುದು ನಿಜವೇ; ಹಾಗಿದ್ದರೆ, ಪ್ರಸ್ತುತ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಮೇಲ್ವಿಚಾರಕರ ಮತ್ತು ಅಧಿಕಾರಿಗಳ ಸಂಖ್ಯೆ ಎಷ್ಟು; ಮಾಹಿತಿ ನೀಡುವುದು;

(ಈ) ಸದರಿ ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುವ ಬಗ್ಗೆ ಮೇಲ್ವಿಚಾರಕರಿಂದ, ಅಧಿಕಾರಿಗಳಿಂದ ಹಾಗೂ ಸಿಬ್ಬಂದಿಗಳಿಂದ ಇಚ್ಛೆ ಪಡೆದಿದ್ದಲ್ಲಿ, ಈ ಭಾಗದ ಜನಗಳಿಗೆ ಅಥವಾ ಈ ಭಾಗದಲ್ಲಿ ಕೆಲಸ ನಿರ್ವಹಿಸಲು ಇಚ್ಛಿಸುವ ವ್ಯಕ್ತಿಗಳಿಗೆ ಪದೋನ್ನತಿಗಳಲ್ಲಿ ಪ್ರಾತಿನಿಧ್ಯ ದೊರೆಯುತ್ತಿದೆಯೇ; ಇದ್ದರೆ, ಎಲ್ಲಿಯವರೆಗೆ ಎಷ್ಟು ಜನರಿಗೆ ಪದೋನ್ನತಿ ನೀಡಲಾಗಿದೆ. ಇಲ್ಲದಿದ್ದಲ್ಲಿ, ಈ ನ್ಯೂನತೆಯನ್ನು ಸರಿಪಡಿಸಲು ಸರ್ಕಾರದ ಮುಂದಿರುವ ಕ್ರಮವೇನು?

## ರೈತರಿಂದ ಖರೀದಿಸಲಾದ ಜಮೀನಿನ ವಿವರ ಒದಗಿಸುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೯(೨೫೬೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ, ರಾಯಚೂರಿನಲ್ಲಿ ಹಾಗೂ ದೇವದುರ್ಗ ಪಟ್ಟಣದಲ್ಲಿ KIADB ವತಿಯಿಂದ ಎಷ್ಟು ಜಮೀನನ್ನು ರೈತರಿಂದ ಖರೀದಿಸಲಾಗಿದೆ, ಯಾವ ಯಾವ ವರ್ಷಗಳಲ್ಲಿ ಖರೀದಿಸಲಾಗಿದೆ;

(ಆ) KIADB ಯಿಂದ ಎಷ್ಟು ಉದ್ದಿಮೆದಾರರಿಗೆ (Enterprenurs) ಜಮೀನು ಹಂಚಲಾಗಿದೆ; (Industrial Growth Centre Yermous Raichur);

(ಇ) ಯಾವ ಉದ್ದಿಮೆದಾರರಿಗೆ ಹಂಚಿಕೆ ಮಾಡಲಾಗಿದೆ; ಒಬ್ಬರಿಗೆ ಎಷ್ಟು ಎಕರೆ ಹಂಚಿಕೆಯಾಗಿದೆ; ಬಾಕಿ ಉಳಿದ ಜಮೀನು ಎಷ್ಟು? (ಉದ್ದಿಮೆದಾರರ ಹೆಸರು ಸಹಿತ ಮಾಹಿತಿ ನೀಡುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೮೦ (೨೪೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಮಂಜೂರಾಗಿರುವ ಶುದ್ಧ ನೀರಿನ ಘಟಕಗಳ ಸಂಖ್ಯೆ ಎಷ್ಟು; (ಗ್ರಾಮ ಪಂಚಾಯತಿವಾರು ವಿವರ ನೀಡುವುದು)

(ಆ) ಇವುಗಳ ಚಾಲ್ತಿಯಲ್ಲಿರುವ ಮತ್ತು ಸ್ಥಗಿತಗೊಂಡಿರುವ ಶುದ್ಧ ನೀರಿನ ಘಟಕಗಳು ಎಷ್ಟು;

(ಇ) ಈ ಶುದ್ಧ ನೀರಿನ ಘಟಕಗಳನ್ನು ನಿರ್ವಹಣೆ ಮಾಡುವ ಇಲಾಖೆ ಅಥವಾ ಸಂಸ್ಥೆ ಯಾವುದು; ಇವುಗಳನ್ನು ಸರಿಯಾಗಿ ನಿರ್ವಹಣೆ ಮಾಡದೇ ಸ್ಥಗಿತಗೊಂಡರೂ ಸರ್ಕಾರವು ಯಾವುದೇ ಕ್ರಮ ತೆಗೆದುಕೊಳ್ಳುತ್ತಿಲ್ಲವೆಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಬಗ್ಗೆ ಸರ್ಕಾರವು ತೆಗೆದುಕೊಂಡ ದಿಟ್ಟ ಕ್ರಮಗಳೇನು? (ವಿವರ ನೀಡುವುದು)

## ವಿಜಯಪುರ ಮಹಾನಗರ ಪಾಲಿಕೆಗೆ ಮಂಜೂರಾದ ಆಶ್ರಯ ಮನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೮೧ (೨೪೬೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮಹಾನಗರ ಪಾಲಿಕೆಯಿಂದ ೧೦ ವರ್ಷಗಳ ಹಿಂದಿನ ಅವಧಿಯಲ್ಲಿ ಆಶ್ರಯ ಯೋಜನೆ ಅಡಿಯಲ್ಲಿ ಹಂಚಿಕೆಯಾದ ಮನೆಗಳ ಸಂಖ್ಯೆ ಎಷ್ಟು; ಸದರಿ ಅವಧಿಯಲ್ಲಿ ಖಾಲಿ ಉಳಿದ ಮನೆಗಳ ಸಂಖ್ಯೆ ಎಷ್ಟು;

(ಆ) ಫಲಾನುಭವಿಗಳಿಗೆ ಹಂಚಿಕೆ ಮಾಡಿದ ನಂತರ ಖಾಲಿ ಉಳಿದ ಮನೆಗಳನ್ನು ಬೇರೆಯವರಿಗೆ ಯಾವ ಮಾರ್ಗಸೂಚಿಯನ್ವಯ ಹಸ್ತಾಂತರ ಮಾಡಲಾಗಿದೆ ಹಾಗೂ ಸಾಮಾಜಿಕ ನ್ಯಾಯವನ್ನು ಪಾಲನೆ ಮಾಡಲಾಗಿದೆಯೇ; (ಖಾಲಿ ಮನೆಗಳನ್ನು ಪಡೆದ ಫಲಾನುಭವಿಗಳ ಹೆಸರು ಮತ್ತು ವಿಳಾಸದೊಂದಿಗೆ ವಿವರ ಸಲ್ಲಿಸುವುದು)

(ಇ) ಹೀಗೆ ಹಸ್ತಾಂತರಿಸುವಾಗ ಒಂದೇ ಮನೆಯನ್ನು ಅನೇಕ ಕುಟುಂಬಗಳಿಗೆ ಹಂಚಿಕೆಯಾಗಿರುವ ಕುರಿತು ಕೇಳಿ ಬಂದಿರುವ ಆರೋಪಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ;

(ಈ) ಮೂಲ ಹಕ್ಕು ಪತ್ರ ಪಡೆದವರ ಮನೆಗಳನ್ನು ಬೇರೆ ಬೇರೆಯವರಿಗೆ ಹಂಚಿಕೆ ಮಾಡಿದ್ದು, ಸರ್ಕಾರವು ಹಂಚಿಕೆ ಮಾಡಿರುವವರ ವಿರುದ್ಧ ಕ್ರಮಕೈಗೊಳ್ಳಲು ಸೂಕ್ತ ನಿರ್ದೇಶನ ನೀಡುವುದೇ?

## ಶಾಲಾ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೮೨ (೨೪೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿರುವ ಶಾಲಾ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು ಮತ್ತು ಶೌಚಾಲಯಗಳು, ಶಾಲಾ ಕೊಠಡಿ ರಿಪೇರಿ, ವಿದ್ಯುತ್

ಸಂಪರ್ಕ, ಸ್ವಂತ ಕಟ್ಟಡಗಳು ಹಾಗೂ ಕೌಂಪೌಂಡ್ ಗೋಡೆಗಳು ಇಲ್ಲದಿರುವ ಶಾಲಾ ಕಾಲೇಜುಗಳೆಷ್ಟು; (ಗ್ರಾಮವಾರು, ಶಾಲೆವಾರು ವಿವರ ನೀಡುವುದು)

(ಆ) ಶೈಕ್ಷಣಿಕ ವರ್ಷದಲ್ಲಿ ಎಷ್ಟು ಶಾಲೆ ಕಾಲೇಜುಗಳಲ್ಲಿ ಮೇಲ್ಕಾಣಿಸಿದ ಮೂಲಭೂತ ಸೌಕರ್ಯ ಒದಗಿಸಲು ಗುರಿ ಹಾಕಿಕೊಳ್ಳಲಾಗಿದೆ ; ಮತ್ತು ಅವುಗಳಿಗೆ ವಿವಿಧ ಯೋಜನೆಯಲ್ಲಿ ನಿಗಧಿಪಡಿಸಲಾಗಿರುವ ಅನುದಾನವೆಷ್ಟು; (ವಿವರ ನೀಡುವುದು)

(ಇ) ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿರುವ ಶಾಲಾ ಕಾಲೇಜುಗಳಲ್ಲಿ ಈ ಮೇಲ್ಕಾಣಿಸಿದ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕಾಲಮಿತಿಯನ್ನು ನಿಗಧಿಪಡಿಸಲಾಗಿದೆಯೇ?

## ಕೊಳಚೆ ನಿರ್ಮೂಲನಾ ಮಂಡಳಿಗೆ ಬಿಡಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೮೩ (೨೪೬೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೧೦ ವರ್ಷಗಳಲ್ಲಿ ಕೊಳಚೆ ನಿರ್ಮೂಲನಾ ಮಂಡಳಿಗೆ ಒಟ್ಟಾರೆಯಾಗಿ ಬಿಡುಗಡೆ ಮಾಡಲಾದ ಹಣವೆಷ್ಟು; ಸದರಿ ಹಣದಲ್ಲಿ ವಿಜಯಪುರ ಜಿಲ್ಲೆಯ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಅದರಲ್ಲಿ

ಈಗ ಖರ್ಚು ಮಾಡಿರುವ ಹಣವೆಷ್ಟು; ಖರ್ಚು ಮಾಡದೆ ಬಾಕಿ ಉಳಿದಿರುವ ಮೊತ್ತವೆಷ್ಟು; (ಕಾಮಗಾರಿವಾರು, ವರ್ಗಾವಾರು ವಿವರವಾದ ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೊಳಚೆ ನಿರ್ಮೂಲನಾ ಮಂಡಳಿಗೆ ಸರ್ಕಾರದಿಂದ ಪ್ರತಿ ವರ್ಷ ಮಂಜೂರಾಗುವ ಅನುದಾನ ಎಷ್ಟು; ಸದರಿ ಹಣವನ್ನು ಯಾವ ಯಾವ ಕಾಮಗಾರಿಗಳ ಅನುಷ್ಠಾನಕ್ಕಾಗಿ ಬಿಡುಗಡೆ ಮಾಡಲಾಗುವುದು ಹಾಗೂ ಸದರಿ ಯೋಜನೆಗಳಿಗೆ ಪ್ರಸಕ್ತ ವರ್ಷದಲ್ಲಿ ಮೀಸಲಿಟ್ಟಿರುವ ಹಣವೆಷ್ಟು? (ವಿವರವಾದ ಮಾಹಿತಿ ನೀಡುವುದು)

## ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿರುವ ಅನುದಾನದ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೮೪ (೨೬೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಜಿಲ್ಲಾ ಪಂಚಾಯತ್‌ಗಳಿಗೆ ಕುಡಿಯುವ ನೀರಿನ ಪೂರೈಕೆಗಾಗಿ ಬಿಡುಗಡೆ ಮಾಡಿರುವ ವಿಶೇಷ ಅನುದಾನವೆಷ್ಟು ; (ಜಿಲ್ಲಾಪಂಚಾಯತಿವಾರು ಮಾಹಿತಿ ನೀಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ಪ್ರತಿ ಜಿಲ್ಲಾ ಪಂಚಾಯತ್‌ಗೂ ರಸ್ತೆ ಅಭಿವೃದ್ಧಿ ಮತ್ತು ಕುಡಿಯುವ ನೀರಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ; (ಜಿಲ್ಲಾ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಇ) ಬಿಡುಗಡೆ ಮಾಡಿರುವ ಅನುದಾನದಲ್ಲಿ ಖರ್ಚು ಮಾಡಿರುವ ಹಣವೆಷ್ಟು ? (ಜಿಲ್ಲಾ ಪಂಚಾಯತ್‌ವಾರು ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೮೫ (೨೬೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷವಾರು, ಯೋಜನಾವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಖರ್ಚಾದ ಅನುದಾನವೆಷ್ಟು ? (ವರ್ಷವಾರು, ಯೋಜನೆವಾರು ಮಾಹಿತಿ ನೀಡುವುದು)

## ಗ್ರಾಮ ಪಂಚಾಯತಿಗಳಲ್ಲಿ ವಸೂಲಿ ಮಾಡುತ್ತಿರುವ ಕರಗಳ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೮೬ (೨೬೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಯಾವ ಯಾವ ಕರಗಳನ್ನು ವಸೂಲಿ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ವಸೂಲಿಯಾದ ಕರಗಳ ಮೊತ್ತವೆಷ್ಟು ; (ವರ್ಷವಾರು, ಕರವಾರು ಮಾಹಿತಿ ನೀಡುವುದು)

(ಇ) ವಸೂಲಿಯಾದ ಕರವನ್ನು ಸಂಬಂಧಿಸಿದ ಇಲಾಖೆಗೆ ಜಮಾ ಮಾಡಲಾಗಿದೆಯೇ ? ಹಾಗಿದ್ದಲ್ಲಿ, ಅವುಗಳ ಮಾಹಿತಿ ವರ್ಷವಾರು ನೀಡುವುದು ?

## ಶಿಕ್ಷಣ ಇಲಾಖೆಯಲ್ಲಿನ ಸಂಘಟನೆಗಳ ಕುರಿತು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೮೭ (೨೫೭೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಇಲಾಖೆಯಡಿ ಎಷ್ಟು ಶಿಕ್ಷಕರ ಸಂಘಟನೆಗಳು ಕಾರ್ಯನಿರ್ವಹಿಸುತ್ತಿವೆ ; (ಪ್ರಾಥಮಿಕ / ಪ್ರೌಢ, ಪದವಿ ಪೂರ್ವ ಸಂಘಗಳವಾರು) ಸಂಪೂರ್ಣ ವಿವರ ನೀಡುವುದು ;

(ಆ) ಕೆಲವು ಸಂಘಟನೆಗಳಿಗೆ ಮಾತ್ರ ಸರ್ಕಾರ ಮಾನ್ಯತೆ ನೀಡಿದೆಯೇ ; ಅಥವಾ ನೀಡುತ್ತಿದೆಯೇ ;

(ಇ) ಈ ರೀತಿ ಮಾನ್ಯತೆ ನೀಡಿದ ಶಿಕ್ಷಕ ಸಂಘಟನೆಗಳಿಗೆ ಒದಗಿಸಿರುವ ಸೌಲಭ್ಯಗಳು, ವಿಶೇಷ ಸ್ಥಾನಮಾನಗಳೇನು ; (ರಿಯಾಯಿತಿ ಮತ್ತು ವಿನಾಯಿತಿಗಳ ವಿವರ ನೀಡುವುದು)

(ಈ) ಪ್ರತಿಯೊಂದು ಮಾನ್ಯತೆ ಪಡೆದ ಶಿಕ್ಷಕ ಸಂಘಟನೆಯ ಚುನಾಯಿತ ಪದಾಧಿಕಾರಿಗಳ ಹೆಸರು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕ / ಉಪನ್ಯಾಸಕರ ವಿವರವನ್ನು ಹಾಗೂ ಅವರು ಕಾರ್ಯ ನಿರ್ವಹಿಸುತ್ತಿರುವ ಶಾಲಾ ಕಾಲೇಜುಗಳ ವಿವರ ನೀಡುವುದು ;

(ಉ) ಇವರೆಲ್ಲರಿಗೂ ವರ್ಗಾವಣೆ ಕಾಯ್ದೆಯಲ್ಲಿ ವಿನಾಯಿತಿ ನೀಡಲಾಗಿರುವುದು ನಿಜವೇ ; ಈ ಎಲ್ಲಾ ಶಿಕ್ಷಕ ಸಂಘಟನೆಗಳ ವಾರ್ಷಿಕ ಸದಸ್ಯತ್ವ ಶುಲ್ಕ ಇಲಾಖೆಯ ಹೆಚ್.ಆರ್.ಎಂ.ಎಸ್. ವ್ಯವಸ್ಥೆಯ ಮೂಲಕವೇ ಆಗುತ್ತಿದೆಯೇ ; ಹಾಗಾದರೆ ಪ್ರತಿ ಮಾನ್ಯತೆ ಪಡೆದ ಶಿಕ್ಷಕ ಸಂಘಟನೆಯ ಅಧಿಕೃತ ಕಡಿತಗೊಂಡ ಹಣದ ಒಟ್ಟು ಮೊತ್ತವೆಷ್ಟು ;

(ಊ) ಮಾನ್ಯತೆ ಪಡೆದ ಶಿಕ್ಷಕ ಸಂಘಟನೆ ಪದಾಧಿಕಾರಿಗಳಾಗಿ ಅನುದಾನಿತ ಹಾಗೂ ಅನುದಾನ ರಹಿತರು ಇರಲು ಅವಕಾಶವಿದೆಯೇ ; (ಪದಾಧಿಕಾರಿಗಳಾಗಲು ಅವಕಾಶವಿದೆಯೇ)

(ಋ) ಸರ್ಕಾರದಿಂದ ಮಾನ್ಯತೆ ಪಡೆಯದೇ ಇರುವ ಆದರೆ ಶಿಕ್ಷಕರ ಸಂಘಟನೆಗಳಾಗಿ ಕಾರ್ಯ ನಿರ್ವಹಿಸುತ್ತಿರುವ ಸಂಘಟನೆಯ ಕುರಿತು ಸರ್ಕಾರದ ಸ್ಪಷ್ಟ ನೀತಿ, ನಿಲುವುಗಳೇನು ?

## ಟಿ.ಜಿ.ಟಿ / ಬಿ.ಆರ್.ಪಿ / ಇ.ಸಿ.ಓ.ಗಳಿಗೆ ವಿಶೇಷ ವೇತನ ಬಡ್ತಿ ಮಂಜೂರು ಮಾಡದಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೨೧೮೮ (೨೫೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಹಶಿಕ್ಷಕರು ಗ್ರೇಡ್–೨ ಹುದ್ದೆ ಹಾಗೂ ಸಮಾನಾಂತರ ಹುದ್ದೆಗಳಲ್ಲಿ ಕೆಲಸ ಮಾಡುತ್ತಿರುವವರಿಗೆ ಒಂದು ವಿಶೇಷ ವೇತನ ಬಡ್ತಿಯನ್ನು ಯಾವ ದಿನಾಂಕದಿಂದ ಮಂಜೂರು ಮಾಡಲಾಗಿದೆ ;

(ಆ) ಈ ವಿಶೇಷ ವೇತನ ಶ್ರೇಣಿಯನ್ನು ಯಾವ ಯಾವ ವೃಂದದ ಶಿಕ್ಷಕರಿಗೆ ಮಂಜೂರು ಮಾಡಲಾಗಿದೆ ;

(ಇ) ಸಹಶಿಕ್ಷಕರ ಸಮಾನಾಂತರ ಹುದ್ದೆಗಳು ಟಿ.ಜಿ.ಟಿ. ಶಿಕ್ಷಕರು/ ಬಿ.ಆರ್.ಪಿ./ಇ.ಸಿ.ಓಗಳಿಗೆ ವಿಶೇಷ ವೇತನ ಬಡ್ತಿ ಮಂಜೂರು ಮಾಡದಿರಲು ಕಾರಣಗಳೇನು :

(ಈ) ಟಿ.ಜಿ.ಟಿ. ಶಿಕ್ಷಕರು/ಬಿ.ಆರ್.ಪಿ./ಇ.ಸಿ.ಓ.ಗಳಿಗೆ ವಿಶೇಷ ವೇತನ ಬಡ್ತಿ ಮಂಜೂರು ಮಾಡದಿರಲು ಕಾರಣಗಳೇನು ;

(ಉ) ಸಮಾನಾಂತರ ಹುದ್ದೆಗಳಲ್ಲಿ ಕೆಲಸ ಮಾಡುತ್ತಿರುವ ಸದರಿ ಶಿಕ್ಷಕರಿಗೆ ವಿಶೇಷ ಬಡ್ತಿಯನ್ನು ಯಾವಾಗ ಮಂಜೂರು ಮಾಡಲಾಗುವುದು ?

## ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಡಿಸೆಂಬರ್ ೨೦೧೫ರ ಅಂತ್ಯದವರೆಗೆ ಖಾಲಿಯಾಗಿರುವ ಶಿಕ್ಷಕರ ಭರ್ತಿಗೆ ಅನುಮತಿ ನೀಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೨೧೮೯ (೨೫೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಡಿಸೆಂಬರ್ ೨೦೧೫ರ ಅಂತ್ಯದವರೆಗೆ ಖಾಲಿಯಾಗಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಹುದ್ದೆಗಳ ಭರ್ತಿ ಸರ್ಕಾರ ಯಾವಾಗ ಅನುಮತಿ ನೀಡಲಿದೆ ;

(ಇ) ಸದರಿ ಪೂರ್ವ ಉಪನ್ಯಾಸಕರ ಖಾಲಿ ಹುದ್ದೆಗಳ ಭರ್ತಿಗೆ ಅನುಮತಿ ನೀಡಿ ಆದೇಶ ಹೊರಡಿಸಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಮೂಲಭೂತ ಶಿಕ್ಷಣ ನೀಡುವ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ನಿವೃತ್ತಿ, ಬಡ್ತಿ ಹಾಗೂ ರಾಜೀನಾಮೆಯಿಂದ ಡಿಸೆಂಬರ್, ೨೦೧೫ರ ಅಂತ್ಯದವರೆಗೆ ಖಾಲಿ ಆಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವ ದಿನಾಂಕದೊಳಗೆ ಅನುಮತಿ ನೀಡಲಾಗುವುದು ?

## ರಾಜ್ಯದಲ್ಲಿ ಕುಡಿಯುವ ನೀರಿನ ಪ್ರಯೋಗಾಲಯಗಳನ್ನು ಸ್ಥಾಪಿಸಿರುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೨೧೯೦ (೨೫೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ತಾಲ್ಲೂಕು (NRDWP) ಘಟಕದಡಿ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕುಡಿಯುವ ನೀರಿನ ಪ್ರಯೋಗಾಲಯ ಸ್ಥಾಪಿಸಲು ಮತ್ತು ಪರೀಕ್ಷಾ ಉಪಕರಣಗಳನ್ನು ಖರೀದಿಸಲು SLSSC (State Level Scheme Sanctioning Committee) ಸಭೆಯನ್ನು ಯಾವ ದಿನಾಂಕಕ್ಕೆ ನಿಗದಿಪಡಿಸಲಾಗಿತ್ತು ;

(ಇ) SLSSC ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಹೆಸರುಗಳೇನು ;

(ಈ) SLEC ಯಾವ ದಿನಾಂಕದಂದು ರಚನೆಯಾಗಿದೆ ; ರಾಜ್ಯಪಾಲರು ಯಾವ ದಿನಾಂಕದಂದು ಈ ಸಮಿತಿಯ ರಚನೆಗೆ ಅಂಕಿತ ಹಾಕಿದ್ದಾರೆ ;

(ಉ) ಕುಡಿಯುವ ನೀರಿನ ಪ್ರಯೋಗಾಲಯಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಎಸ್.ಎಲ್.ಇ.ಸಿ. ಸಮಿತಿಗೆ ಅಧಿಕಾರವಿದೆಯೇ ;

(ಊ) ಕುಡಿಯುವ ನೀರಿನ ಪ್ರಯೋಗಾಲಯಗಳ ಸ್ಥಾಪನೆ ಮತ್ತು ಪರೀಕ್ಷಾ ಉಪಕರಣ ಖರೀದಿಗೆ ಸಂಬಂಧಿಸಿದಂತೆ ಟೆಂಡರ್ ಡಾಕ್ಯೂಮೆಂಟ್ ಸಮಿತಿ ಅಥವಾ ಟೆಂಡರ್ ಗೌರ್ವನಿಂಗ್ ಕಮಿಟಿ ಸಭೆಯಲ್ಲಿ ಕೈಗೊಂಡ ನಿರ್ಣಯಗಳೇನು ?

## ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ವಶಪಡಿಸಿಕೊಂಡ ರೈತರ ಭೂಮಿಯ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೨೯೯೧ (೨೧೭೬) ಮಾನ್ಯ ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಇಲ್ಲಿಯವರೆಗೆ ರೈತರ ಎಷ್ಟು ಜಮೀನನ್ನು ಸರ್ಕಾರ ವಶಪಡಿಸಿಕೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಜಮೀನುಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿದ ಪ್ರದೇಶ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೈಗಾರಿಕೆಗಳನ್ನು ಸ್ಥಾಪಿಸದೇ ಇರುವ ಖಾಲಿ ಉಳಿದ ಜಮೀನು ಎಷ್ಟು ;

(ಈ) ಖಾಲಿ ಉಳಿದ ಜಮೀನುಗಳ ಭೂಸ್ವಾಧೀನವನ್ನು ರದ್ದುಪಡಿಸಿ ಮರಳಿ ರೈತರಿಗೆ ಕೊಡಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ?

## ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೨೯೨ (೨೫೨೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳು ಎಷ್ಟು ;

(ಆ) ಈ ಹುದ್ದೆಗಳನ್ನು ಯಾವ ಯಾವ ವಿಧಾನದ ಮೂಲಕ ಭರ್ತಿ ಮಾಡಲಾಗುವುದು ;

(ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಗಳನ್ನು ರೂಪಿಸುವುದು ಯಾವ ಹಂತದಲ್ಲಿದೆ ;

(ಈ) ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ನಿಗಧಿಪಡಿಸಿದ ಕಾಲಮಿತಿ ಯಾವುದು ?

## ರಾಯಚೂರು ವಿಶ್ವವಿದ್ಯಾಲಯ ಪ್ರಾರಂಭ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೯೩ (೨೪೯೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ರಲ್ಲಿ ರಾಯುಚೂರಿನಲ್ಲಿ ವಿಶ್ವವಿದ್ಯಾಲಯು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಆ) ಮಾನ್ವಿ ತಾಲ್ಲೂಕಿನ ಕವಿತಾಳದಲ್ಲಿ ಪದವಿ ಕಾಲೇಜು ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಇ) ರಾಯಚೂರಿನಲ್ಲಿರುವ ಇಂಜಿನಿಯರಿಂಗ್ ಕಾಲೇಜು ಕಟ್ಟಡ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ; ಇಲ್ಲಿಯವರೆಗೆ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಖರ್ಚಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ಪ್ರಸ್ತುತ ಕಟ್ಟಡ ನಿರ್ಮಾಣ ಯಾವ ಹಂತದಲ್ಲಿದೆ ?

## ಮರಳು (ಸ್ಯಾಂಡ್) ಸರಬರಾಜು ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೯೪ (೨೪೯೨) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮರಳು (ಸ್ಯಾಂಡ್) ಸರಬರಾಜು ಮಾಡಲು ಸರ್ಕಾರ ರೂಪಿಸಿರುವ ಮಾನದಂಡಗಳೇನು ;

(ಆ) ೨೦೧೭ನೇ ಜನವರಿಯಿಂದ ಇಲ್ಲಿಯವರೆಗೆ ಮರಳು (ಸ್ಯಾಂಡ್) ಸರಬರಾಜಿನಲ್ಲಿ ಸಾರ್ವಜನಿಕರಿಗೆ ಆಗುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ಎಂ.ಇ.ಎಸ್. ಯೋಜನೆಯಡಿ ಕೆರೆ ನಿರ್ಮಾಣ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೯೫ (೨೪೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಎಂ.ಇ.ಎಸ್. ಯೋಜನೆಯಡಿಯಲ್ಲಿ ರಾಯಚೂರು ಜಿಲ್ಲೆಯಲ್ಲಿ ಕೆರೆ ಸಂಜೀವಿನಿ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಮಾನ್ವಿ ತಾಲ್ಲೂಕಿನ ಮಲ್ಲಟ ಗ್ರಾಮದ ಹತ್ತಿರ ಕುಡಿಯುವ ನೀರಿಗಾಗಿ ಕೆರೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಇ) ಪೊತ್ನಾಳ ಗ್ರಾಮದ ಹತ್ತಿರ ಹಾಗೂ ಕವಿತಾಳ ಗ್ರಾಮದ ಹತ್ತಿರ ಕೆರೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ಶುದ್ಧ ಕುಡಿಯುವ ನೀರಿನ ಘಟಕಗಳು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೯೬ (೨೪೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲೆ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು;

(ಆ) ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು;

(ಇ) ಸದರಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ವಹಣೆ ಹೇಗೆ ನಿರ್ವಹಿಸಲಾಗುತ್ತಿದೆ; ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಬೃಹತ್ ಕೈಗಾರಿಕೆಗಳ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೯೭ (೨೪೮೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು;

(ಆ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ರಾಯಚೂರು ನಗರದಲ್ಲಿ ವಸತಿ ಸಂಕೀರ್ಣಗಳನ್ನು ಹಂಚಿಕೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು;

(ಇ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಸಂಕೀರ್ಣಗಳಿಗೆ ಖರ್ಚಾದ ಅನುದಾನ ಎಷ್ಟು;

(ಈ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ನಿವೇಶನ ಹಂಚಿಕೆ ಮಾಡಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು;

(ಉ) ರಾಯಚೂರು ಗ್ರೌತ್, ಸೆಂಟರ್‌ನಲ್ಲಿ ಮೂಲಸೌಲಭ್ಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಊ) ಕೈಗಾರಿಕೆ ಇಲಾಖೆಯಲ್ಲಿ ವಿಮಾನ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ರಾಜ್ಯದಲ್ಲಿ ಹೊಸ ಶೈಕ್ಷಣಿಕ ಮಾದರಿಯನ್ನು ಜಾರಿ ಮಾಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೯೮ (೨೬೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧–೫, ೬–೮, ೯–೧೨ ಈ ಹೊಸ ಶೈಕ್ಷಣಿಕ ಮಾದರಿಯನ್ನು ರಾಜ್ಯ ಸರ್ಕಾರ ಒಪ್ಪಿಕೊಂಡಿದೆಯೇ ;

(ಆ) ಈ ಮಾದರಿಯನ್ನು ಯಾವಾಗ ಅಳವಡಿಸಲಾಗುವುದು ;

(ಇ) ಈ ಮಾದರಿಯ ಅನುಷ್ಠಾನಕ್ಕೆ ಪೂರಕವಾಗಿ ಸರ್ಕಾರ ಏನು ತಯಾರಿ ಮಾಡಿಕೊಂಡಿದೆ ?

## ರಾಜ್ಯದ ಪ್ರತಿಯೊಂದು ಶಾಲೆಯಲ್ಲಿ "ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ನೀತಿ" ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೯೯ (೨೬೧೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರತಿಯೊಂದು ಶಾಲೆಯಲ್ಲೂ "ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ನೀತಿ ೨೦೧೬" ಜಾರಿಯಲ್ಲಿದೆಯೇ;

(ಆ) ಶಿಕ್ಷಣ ಇಲಾಖೆ ಈ ನೀತಿಯನ್ನು ಕುರಿತು ಸರ್ಕಾರಿ/ಸರ್ಕಾರೇತರ ಶಾಲೆಗಳ ಶಿಕ್ಷಕರಿಗೆ ತರಬೇತಿ ನೀಡಿದೆಯೇ;

(ಇ) ಶಾಲೆಗಳಲ್ಲಿ ಶಿಕ್ಷಕರು/ಶಾಲಾ ಸಿಬ್ಬಂದಿ ಮಕ್ಕಳ ರಕ್ಷಣಾ ನೀತಿಗೆ ಸಹಿ ಮಾಡಿ ಮಕ್ಕಳ ರಕ್ಷಣೆಗೆ ಬದ್ಧರಾಗಿರುವುದರ ಬಗ್ಗೆ ಉಸ್ತುವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು? (ವಿವರ ನೀಡುವುದು)

## ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಇರುವ ದೈಹಿಕ ಶಿಕ್ಷಕರ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೨೦೦ (೨೬೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಕಳೆದ ಯಾವ ವರ್ಷದಲ್ಲಿ ದೈಹಿಕ ಶಿಕ್ಷಕರ ನೇಮಕಾತಿಯನ್ನು ಮಾಡಲಾಗಿದೆ;

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರಕ್ಕೆ ಇರುವ ಸಮಸ್ಯೆಗಳೇನು;

(ಈ) ಕಾಲ ಮಿತಿಯೊಳಗೆ ದೈಹಿಕ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

## ಎನ್.ಸಿ.ಸಿ.ಯಲ್ಲಿ ಭಾಗವಹಿಸುವ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ನೀಡುವ ಉಪಹಾರ ಭತ್ಯೆದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೨೦೧ (೨೬೧೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯಾರ್ಥಿಗಳಲ್ಲಿ ರಾಷ್ಟ್ರಾಭಿಮಾನ, ರಾಷ್ಟ್ರ ಭಕ್ತಿಯನ್ನು ಮೂಡಿಸುವ ಎನ್.ಸಿ.ಸಿ.ಯಲ್ಲಿ ಭಾಗವಹಿಸುವ ಶಾಲಾ ಕಾಲೇಜು ವಿದ್ಯಾರ್ಥಿಗಳ ಉಪಹಾರ ಭತ್ಯೆಗಾಗಿ ಎಷ್ಟು ಹಣವನ್ನು ಕೊಡಲಾಗುತ್ತಿದೆ;

(ಆ) ಈ ಭತ್ಯೆಯನ್ನು ಯಾವ ವರ್ಷದಲ್ಲಿ ನಿಗಧಿಪಡಿಸಲಾಗಿದೆ;

(ಇ) ವಿದ್ಯಾರ್ಥಿಗಳಿಗೆ ಕೊಡುವ ಈ ಭತ್ಯೆಯನ್ನು ಹೆಚ್ಚಳ ಮಾಡುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದರೆ ಇದನ್ನು ಯಾವಾಗ ಜಾರಿಗೆ ತರಲಾಗುವುದು?

## ತುಮಕೂರು ಜಿಲ್ಲೆಯ NGO ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೨೦೨ (೨೫೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) NRDWD ಯೋಜನೆಯ Support Activity ಕಾರ್ಯಕ್ರಮದಡಿ ರಾಜ್ಯದಲ್ಲಿ ೨೦೧೫–೧೬ ಮತ್ತು ೨೦೧೬–೧೭ ರಲ್ಲಿ ಜಿಲ್ಲಾವಾರು ಎಷ್ಟು NGO ಗಳಿಗೆ ಕುಡಿಯುವ ನೀರು ಪರೀಕ್ಷೆ ಸಂಬಂಧ ಕರಾರು ಮಾಡಿಕೊಂಡು

ಕಾಮಗಾರಿ ಆದೇಶ ನೀಡಲಾಗಿದೆ; (ಸಂಸ್ಥೆಯ ಹೆಸರು ಕಾಮಗಾರಿ ಆದೇಶ ನೀಡಿದ ದಿನಾಂಕ, ಹಾಗೂ ಅನುಮೋದನೆಗೊಂಡ ಮೊತ್ತದೊಂದಿಗೆ ವಿವರವಾದ ಮಾಹಿತಿ ಒದಗಿಸುವುದು)

(ಆ) ಸದರಿ NGO ಗಳು ನೀರು ಪರೀಕ್ಷೆ ಮಾಡಲು ನೇಮಕಾತಿ ಮಾಡಿಕೊಂಡ ಸಿಬ್ಬಂದಿಗಳು ಯಾರು ಯಾರು, ಅವರಿಗೆ ನೀಡಿರುವ ವೇತನ ಎಷ್ಟು; (ವಿವರವಾದ ಮಾಹಿತಿ ಒದಗಿಸುವುದು)

(ಇ) ಸದರಿ NGO ಗಳು ನೀರು ಪರೀಕ್ಷೆ ಮಾಡದೆ ನಕಲಿ ಸಿಬ್ಬಂದಿಗಳ ಹೆಸರಿನಲ್ಲಿ ಬಿಲ್ಲು ಸೃಷ್ಟಿಸಿ ಹಣ ಪಡೆದಿರುವುದು ನಿಜವೇ;

(ಈ) ತುಮಕೂರು ಜಿಲ್ಲೆಯ NGO ಸಂಸ್ಥೆಯವರು ಕಾಮಗಾರಿ ಆದೇಶ ನೀಡಿದ ದಿನಾಂಕದಿಂದ ಇಲ್ಲಿಯವರೆಗೂ ಯಾರೊಬ್ಬರನ್ನು ನೇಮಕ ಮಾಡದೇ ಇರುವುದು ನಿಜವೇ; ಹಾಗಾದರೆ ಈ NGO ಮೇಲೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ; ಇವರನ್ನು ಏಕೆ ಕಪ್ಪು ಪಟ್ಟಿಗೆ ಸೇರಿಸಬಾರದು?

## ವಿಶ್ವವಿದ್ಯಾಲಯ ಆದಾಯ ತೆರಿಗೆ ವ್ಯಾಪ್ತಿಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೨೦೩ (೨೫೮೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯದ ಎಷ್ಟು ಹಣವನ್ನು ಕೇಂದ್ರ ಸರ್ಕಾರದ ಆದಾಯ ತೆರಿಗೆ ಇಲಾಖೆಯುವರು ಮುಟ್ಟುಗೋಲು ಹಾಕಿಕೊಂಡಿರುತ್ತಾರೆ; ಈ ರೀತಿ ಮಾಡಲು ಕಾರಣಗಳೇನು;

(ಆ) ವಿಶ್ವವಿದ್ಯಾಲಯಗಳು ಆದಾಯ ತೆರಿಗೆಯ ವ್ಯಾಪ್ತಿಗೆ ಬರುತ್ತವೆಯೇ; ಇವುಗಳನ್ನು ಸೇವಾ ಉದ್ದೇಶದಿಂದ ಸ್ಥಾಪಿಸಲಾಗಿದೆಯೇ; ಅಥವಾ ವಾಣಿಜ್ಯ ಉದ್ದೇಶದಿಂದ ಸ್ಥಾಪಿಸಲಾಗಿದೆಯೇ; (ವಿವರ ನೀಡುವುದು)

(ಇ) ಮುಟ್ಟುಗೋಲು ಹಾಕಿಕೊಂಡಿರುವ ಹಣವನ್ನು ಸರ್ಕಾರವು ಹಿಂಪಡೆಯಲು ಏನಾದರೂ ಪ್ರಯತ್ನ ನಡೆಸಿದೆಯೇ; ನಡೆಸಿದ್ದರೆ, ಯಾವ ಕಾಲಮಿತಿಯೊಳಗೆ ಹಣವನ್ನು ಹಿಂಪಡೆಯಲಾಗುವುದು;

(ಈ) ಅನುದಾನದ ಕೊರತೆಯಿಂದ ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗುವುದು?

## ಕಂಪ್ಯೂಟರ್ ಶಿಕ್ಷಕರ ಸಮಸ್ಯೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೨೦೪ (೨೫೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ಥಗಿತಗೊಂಡಿರುವ ಐ.ಟಿ.ಸಿ. ಫೇಸ್–೨ ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ; ಮುಂದುವರಿಸದಿದ್ದರೆ, ಆ ಶಾಲಾ ಕಾಲೇಜು ವಿದ್ಯಾರ್ಥಿಗಳ ಕಂಪ್ಯೂಟರ್ ಶಿಕ್ಷಣ ಕಲಿಕೆ ಮತ್ತು ಲಕ್ಷಾಂತರ ಮೌಲ್ಯದ ಲ್ಯಾಬ್ ಸ್ಥಿತಿಗತಿಗಳೇನು;

(ಆ) ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಹೊಸದಾಗಿ ಐಟಿ@ ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಯಾವ ಯಾವ ಶಾಲಾ ಕಾಲೇಜುಗಳಲ್ಲಿ ನೀಡಲಾಗುತ್ತದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಐಟಿ@ ಶಾಲಾ ಕಾಲೇಜುಗಳಲ್ಲಿ ವಿಷಯ ಬೋಧಕರೇ ಕಂಪ್ಯೂಟರ್ ಶಿಕ್ಷಣ ಬೋಧಿಸುವಂತೆ ಸರ್ಕಾರ ತಿಳಿಸಿರುವುದರಿಂದ ವಿಷಯ ಬೋಧಕರಿಗೆ ಆಗುತ್ತಿರುವ ತೊಂದರೆ (ಎರಡು ವಿಷಯಗಳಲ್ಲಿ ಬೋಧಿಸಲು ಕಷ್ಟಸಾಧ್ಯ) ಮತ್ತು ಇದರಿಂದ ಕ್ರಮಬದ್ಧವಾದ ಕಂಪ್ಯೂಟರ ಶಿಕ್ಷಣದ ಪ್ರಯೋಜನ ವಿದ್ಯಾರ್ಥಿಗಳಿಗೆ ಸಿಗುತ್ತಿದೆಯೇ;

(ಈ) ಐ.ಟಿ.ಸಿ. ಫೇಸ್–೨ ಕಂಪ್ಯೂಟರ್ ಶಿಕ್ಷಣ ಯೋಜನೆಯಲ್ಲಿ ೫ ವರ್ಷ ಕಂಪ್ಯೂಟರ್ ಶಿಕ್ಷಣ ಬೋಧಿಸಿ ಅನುಭವ ಇರುವ ಮತ್ತು ಈಗ ನಿರುದ್ಯೋಗಿಗಳಾಗಿ ಕಷ್ಟದ ಜೀವನ ನಡೆಸುತ್ತಿರುವ ಈ ಶಿಕ್ಷಕರನ್ನೇ ಅತಿಥಿ ಶಿಕ್ಷಕರನ್ನಾಗಿ ಮಾನವೀಯತೆಯ ದೃಷ್ಟಿಯಿಂದ ಪರಿಗಣಿಸಿ ಕ್ರಮಬದ್ಧವಾಗಿ ಕಂಪ್ಯೂಟರ್ ಶಿಕ್ಷಣ ನೀಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

## NRDWP ಯೋಜನೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೨೦೫ (೨೫೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೧–೧೨ನೇ ಸಾಲಿನ NRDWP ಯೋಜನೆಯ Support Activity ಕಾರ್ಯಕ್ರಮದಡಿ ಎಷ್ಟು ಜನ ಗ್ರಾಮೀಣ ಪದವೀಧರರನ್ನು ಇಲಾಖಾ ಪರೀಕ್ಷೆ ನಡೆಸಿ, ಆಯ್ಕೆ ಮಾಡಿಕೊಳ್ಳಲಾಯಿತು; (ಜಿಲ್ಲಾವಾರು, ಮಾಹಿತಿ ನೀಡುವುದು)

(ಆ) ಆಯ್ಕೆಗೊಂಡ ಅಭ್ಯರ್ಥಿಗಳ ತಾಲ್ಲೂಕುವಾರು, ಆಯ್ಕೆ ಪಟ್ಟಿ ಪ್ರತಿಯೊಂದಿಗೆ ಹಾಗೂ ವಿಳಾಸದೊಂದಿಗೆ ಸಂಪೂರ್ಣವಾದ ಜಿಲ್ಲಾವಾರು, ತಾಲ್ಲೂಕುವಾರು, ಹೋಬಳಿವಾರು ಮಾಹಿತಿ ನೀಡುವುದು;

(ಇ) ಹಾಲಿ ರಾಜ್ಯದಲ್ಲಿ ನೀರಿನ ಗುಣಮಟ್ಟ ಪರೀಕ್ಷಿಸುವ ಎಷ್ಟು ಸರ್ಕಾರ ಲ್ಯಾಬೋರೇಟರಿಗಳಿವೆ; ಹೊಸದಾಗಿ ಎಷ್ಟು ಲ್ಯಾಬೋರೇಟರಿಗಳನ್ನು ಪ್ರಾರಂಭಿಸಲು ಸರ್ಕಾರ ಆದೇಶ ನೀಡಿದೆ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹೊಸದಾಗಿ ಸ್ಥಾಪಿಸಿದ ಲ್ಯಾಬೋರೇಟರಿಗಳ ಕಾಮಗಾರಿಗಳು ಯಾವ ಹಂತದಲ್ಲಿವೆ; ಇಲ್ಲಿಯವರೆಗೆ ಪಾವತಿ ಮಾಡಲಾದ ಹಣವೆಷ್ಟು; ಬಾಕಿ ಇರುವ ಹಣವೆಷ್ಟು;

(ಉ) ಗುತ್ತಿಗೆದಾರರಿಗೆ ಬಾಕಿ ಇರುವ ಹಣವನ್ನು ಯಾವ ಕಾಲಮಿತಿಯೊಳಗೆ ಪಾವತಿ ಮಾಡಲಾಗುವುದು; ಹಾಗೂ ಇಲ್ಲಿಯವರೆಗೆ ಪಾವತಿ ಮಾಡದಿರಲು ಕಾರಣಗಳೇನು?

## ಶಾಲಾ ವಾಹನಗಳ ನಿರ್ವಹಣೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೬ (೨೫೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ವಿದ್ಯಾ ಸಂಸ್ಥೆಗಳು ವಿದ್ಯಾರ್ಥಿಗಳನ್ನು ಕರೆತರಲು ಶಾಲಾ ವಾಹನಗಳನ್ನು ಉಪಯೋಗಿಸುತ್ತಿದ್ದು, ಅದರಲ್ಲಿ ನಿಗಧಿತ ಸಂಖ್ಯೆಗಿಂತ ಹೆಚ್ಚು ಮಕ್ಕಳನ್ನು ತುಂಬುತ್ತಿರುವುದರಿಂದ ಮಕ್ಕಳಿಗೆ

ಹಿಂಸೆಯಾಗುತ್ತಿರುವುದಲ್ಲದೆ ಅಪಘಾತಗಳಿಂದ ಮಕ್ಕಳಿಗೆ ತೊಂದರೆಯಾಗುತ್ತಿದ್ದರೂ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳದಿರಲು ಕಾರಣವೇನು;

(ಆ) ಶಾಲಾ ವಾಹನಗಳ ಬಗ್ಗೆ ಮತ್ತು ಚಾಲಕ ನಿರ್ವಾಹಕರ ಬಗ್ಗೆ ಸರ್ಕಾರ ನೀತಿ ನಿಯಮಗಳನ್ನು ರೂಪಿಸಿಲ್ಲವೇ; ನಿಯಮಾವಳಿ ರಚಿಸಿದ್ದರೆ ಅದನ್ನು ಉಲ್ಲಂಘಿಸುವ ಶಾಲಾ ಆಡಳಿತ ಮಂಡಳಿ ವಿರುದ್ಧ ಕೈಗೊಳ್ಳಲಾಗಿರುವ ಕ್ರಮವೇನು?

**ಸಾರಿಗೆ ಸಂಸ್ಥೆ ಬಸ್ಸುಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಕೆ**

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೭ (೨೫೫೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆ ದೃಷ್ಟಿಯಿಂದ ಸಿ.ಸಿ. ಕ್ಯಾಮರಾ ಅಳವಡಿಸುವ ವ್ಯವಸ್ಥೆ ಇದೆಯೇ; ಇದ್ದರೆ, ಅಳವಡಿಸಲಾಗಿರುವ ಬಸ್ಸುಗಳ ಸಂಖ್ಯೆ ಎಷ್ಟು;

(ಆ) ಎಲ್ಲಾ ಬಸ್ಸುಗಳಲ್ಲಿ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಲು ಬೇಕಾಗುವ ಕಾಲಾವಕಾಶವೆಷ್ಟು; ಕಾಲಮಿತಿಯನ್ನು ಹಾಕಿಕೊಳ್ಳಲಾಗುವುದೇ;

(ಇ) ಸಾರಿಗೆ ಸಂಸ್ಥೆ ಬಸ್ಸುಗಳಲ್ಲಿ ಪ್ರಯಾಣಿಕರೊಡನೆ ಗೌರವ ಮತ್ತು ಸೌಜನ್ಯದಿಂದ ವರ್ತಿಸುವಂತೆ ಸಿಬ್ಬಂದಿಗೆ ತರಬೇತಿ ನೀಡಲಾಗುವುದೇ; ಅಥವಾ ಸುತ್ತೋಲೆ ಹೊರಡಿಸಲಾಗಿದೆಯೇ?

## ಗ್ರಾಮಾಂತರ ಪ್ರದೇಶಗಳಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೮ (೨೫೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ಎಷ್ಟು ಕಡೆ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಲಾಗಿದೆ; ಎಷ್ಟು ಕಡೆಗಳಲ್ಲಿ ನಿರ್ಮಾಣ ಮಾಡಲು ಬೇಡಿಕೆಗಳು ಬಂದಿವೆ; ಇದಕ್ಕಾಗಿ ಮೀಸಲಿಟ್ಟಿರುವ ಅನುದಾನ ಎಷ್ಟು; ಖರ್ಚಾಗಿರುವುದೆಷ್ಟು;

(ಆ) ಈ ಜಿಲ್ಲೆಗಳ ಗ್ರಾಮಾಂತರ ಪ್ರದೇಶಗಳಲ್ಲಿ ರಸ್ತೆಗಳು ತೀರಾ ಹದಗೆಟ್ಟಿದ್ದು ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಲು ಚರಂಡಿ ನಿರ್ಮಾಣ ಮಾಡಲು ಸಾರ್ವಜನಿಕರು ಒತ್ತಾಯಿಸುತ್ತಿರುವುದರಿಂದ ಈ ಬಗ್ಗೆ ಕಾಲಮಿತಿ ಕಾರ್ಯಕ್ರಮವನ್ನು ಹಾಕಿಕೊಂಡು ಕೆಲಸ ಮಾಡಿಸಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಆದ್ಯತೆಯ ಮೇಲೆ ಹಣ ಒದಗಿಸಿ ಈ ಮೇಲ್ಕಂಡ ಕೆಲಸಗಳನ್ನು ಶೀಘ್ರವಾಗಿ ಮಾಡುವಂತೆ ಜಿಲ್ಲಾ ಪಂಚಾಯ್ತಿಗಳಿಗೆ ಆದೇಶ ನೀಡಲಾಗುವುದೇ?

## ಅಕ್ಷರ ದಾಸೋಹ ಮುಖಾಂತರ ನೀಡುವ ಹಾಲಿನ ಪುಡಿ ಸಂಬಂಧಿಸಿದ ಗುತ್ತಿಗೆದಾರ ದುರುಪಯೋಗ ಮಾಡಿಕೊಳ್ಳುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೧೯ (೨೪೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಕುಮಟಾ ತಾಲ್ಲೂಕಿನ ಅಕ್ಷರ ದಾಸೋಹ ಮುಖಾಂತರ ಶಾಲಾ ಮಕ್ಕಳಿಗೆ ವಿತರಿಸಲು ನೀಡಲಾದ ಹಾಲಿನ ಪುಡಿಯನ್ನು ಅಕ್ಷರ ದಾಸೋಹ ಆಹಾರ ವಿತರಣೆ ಗುತ್ತಿಗೆ ಪಡೆದಿರುವ ವ್ಯಕ್ತಿಯೇ ಕಿರಾಣಿ ಅಂಗಡಿಯೊಂದಕ್ಕೆ ಅಕ್ರಮವಾಗಿ ಮಾರಾಟ ಮಾಡುತ್ತಿರುವಾಗ ಸಿಕ್ಕಿಬಿದ್ದ ಘಟನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಪದೇ ಪದೇ ಈ ರೀತಿ ಸರ್ಕಾರದಿಂದ ಬಂದಿರುವ ಸವಲತ್ತನ್ನು ಅಲ್ಲಿನ ಅಧಿಕಾರಿಗಳು ಗುತ್ತಿಗೆದಾರರೊಂದಿಗೆ ಶಾಮೀಲಾಗಿ ಅವ್ಯವಹಾರದಲ್ಲಿ ಭಾಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದರೆ ಈ ವಿಷಯದಲ್ಲಿ ತನಿಖೆ ಮಾಡದಿರಲು ಕಾರಣವೇನು? (ವಿವರ ನೀಡುವುದು)

## ನಿರ್ಮಲ ಭಾರತ ಯೋಜನೆಯಡಿ ಮಂಜೂರಾಗಿರುವ ಶೌಚಾಲಯ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೧೦ (೨೪೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಗೆ ನಿರ್ಮಲ ಭಾರತ ಅಭಿಯಾನ ಯೋಜನೆಯಡಿ ಮಂಜೂರಾಗಿರುವ ಶೌಚಾಲಯಗಳೆಷ್ಟು; (ತಾಲ್ಲೂಕು ಮತ್ತು ಗ್ರಾಮ ಪಂಚಾಯತ್‌ಗಳವಾರು ವಿವರ ನೀಡುವುದು)

(ಆ) ಮಂಜೂರಾದ ಶೌಚಾಲಯಗಳನ್ನು ಸಮರ್ಪಕವಾಗಿ ಬಳಕೆ ಮಾಡಲಾಗಿದೆಯೇ; ಯಾವ ಮಾನದಂಡದಡಿಯಲ್ಲಿ ಶೌಚಾಲಯಗಳನ್ನು ಹಂಚಿಕೆ ಮಾಡಲಾಗಿದೆ; ಹಂಚಿಕೆ ಮಾಡಿದ್ದಲ್ಲಿ ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು; (ತಾಲ್ಲೂಕುವಾರು ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಯೋಜನೆಯಡಿ ಶೌಚಾಲಯಗಳನ್ನು ನಿರ್ಮಿಸಲು ಇರುವ ಮಾನದಂಡಗಳೇನು;

(ಈ) ಜಿಲ್ಲೆಯಲ್ಲಿ ಪ್ರಸ್ತುತ ನಿರ್ಮಲ ಭಾರತ ಯೋಜನೆಯಡಿ ಶೌಚಾಲಯ ನಿರ್ಮಿಸಿಕೊಳ್ಳಲು ವಿಧಿಸಿರುವ ವಾರ್ಷಿಕ ಗುರಿ ಎಷ್ಟು? (ವಿವರ ನೀಡುವುದು)

## ವಸತಿ ಇಲಾಖೆಯಿಂದ ಮನೆ ಹಂಚಿಕೆ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೧೧ (೨೪೭೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ವಸತಿ ರಹಿತರ ಸಮೀಕ್ಷೆಯನ್ನು ನಡೆಸಲಾಗಿದೆಯೇ; (ಗ್ರಾಮ ಪಂಚಾಯತಿಗಳವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಸತಿ ಇಲಾಖೆಯಿಂದ ಎಷ್ಟು ನಿರಾಶ್ರಿತರಿಗೆ ಸರ್ಕಾರದ ವಿವಿಧ ಯೋಜನೆಗಳಲ್ಲಿ ಮನೆಗಳನ್ನು ನೀಡಲಾಗಿದೆ; ನೀಡಿದ್ದಲ್ಲಿ, ಫಲಾನುಭವಿಗಳ ಹೆಸರುಗಳೊಂದಿಗೆ ಗ್ರಾಮ ಪಂಚಾಯತಿಗಳವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು;

(ಇ) ಸರ್ಕಾರದ ಮುಂದಿರುವ ಕಾರ್ಯ ಯೋಜನೆಗಳು ಯಾವುವು? (ಸಂಪೂರ್ಣ ವಿವರಗಳನ್ನು ನೀಡುವುದು)

## ಬೆಂಗಳೂರು ನಗರದ ಸಾರಿಗೆ ವ್ಯವಸ್ಥೆ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೨೧೨ (೨೫೨೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಾದ್ಯಂತ ಇರುವ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳ ಸಂಖ್ಯೆ ಎಷ್ಟು;

(ಆ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಇರುವ ಹೈಟೆಕ್ ಬಸ್ಸುಗಳ ಸಂಖ್ಯೆ ಎಷ್ಟು;

(ಇ) ಹೈಟೆಕ್ ಬಸ್ಸುಗಳ ದರಗಳನ್ನು ಕಡಿಮೆ ಮಾಡಿ ಸಾಮಾನ್ಯ ಜನರಿಗೆ ಅನುಕೂಲ ಮಾಡಿಕೊಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಈ) ಇದ್ದಲ್ಲಿ ಯಾವಾಗಿನಿಂದ ಜಾರಿಗೊಳಿಸಲಾಗುವುದು?

## ಪದವಿ ಪೂರ್ವ ಕಾಲೇಜುಗಳ ಮೂಲಭೂತ ಸೌಕರ್ಯ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೨೧೩ (೨೫೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ೦೪ ವರ್ಷಗಳಿಂದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳಿಗೆ ಹಾಗೂ ಕಟ್ಟಡ ನಿರ್ಮಾಣ ಕಾರ್ಯಗಳಿಗೆ ನೀಡಿರುವ ಅನುದಾನದ ಮೊತ್ತವೆಷ್ಟು;

(ಇ) ಸ್ವಂತ ಕಟ್ಟಡ ಇಲ್ಲದೇ ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ ಕಾಲೇಜುಗಳಿಗೆ ಕಳೆದ ನಾಲ್ಕು ವರ್ಷಗಳಿಂದ ನೀಡಿದ ಬಾಡಿಗೆಯ ಮೊತ್ತವೆಷ್ಟು?

## ಶುದ್ಧ ಕುಡಿಯುವ ನೀರು ಘಟಕಗಳ ವಿವರ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೨೧೪ (೨೫೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ವಿವಿಧ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಸಂಬಂಧಿಸಿದಂತೆ ೨೦೧೬–೧೭ ಹಾಗೂ ೨೦೧೭–೧೮ನೇ ಸಾಲುಗಳ ಎಷ್ಟು ಶುದ್ಧ ಕುಡಿಯುವ ನೀರು ಘಟಕಗಳಿಗೆ ಮಂಜೂರಾತಿ ನೀಡಲಾಗಿದೆ ;

(ಆ) ಪ್ರಸ್ತುತ ಸ್ಥಾಪಿಸಲಾಗಿರುವ ಶುದ್ಧ ನೀರಿನ ಘಟಕಗಳ ಪೈಕಿ ಎಷ್ಟು ಘಟಕಗಳು ಕಾರ್ಯನಿರ್ವಹಿಸುತ್ತಿದೆ ಹಾಗೂ ಸ್ಥಗಿತಗೊಂಡಿದೆ; ಸ್ಥಗಿತಗೊಳ್ಳಲು ಕಾರಣಗಳೇನು ?

## ಮಹಾತ್ಮಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೨೧೫ (೨೫೮೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಅಡಿಯಲ್ಲಿ ಸಾಧಿಸಿರುವ ಗುರಿಗಳೇನು ; ಹಾಗೂ ಈ ಉದ್ದೇಶಕ್ಕಾಗಿ ಬಿಡುಗಡೆ ಮಾಡಿರುವ ಹಣವೆಷ್ಟು ;

(ಆ) ೨೦೧೬–೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಈ ಉದ್ಯೋಗ ಖಾತ್ರಿ ಯೋಜನೆಯ ಅಡಿಯಲ್ಲಿ ಎಷ್ಟು ಕುಟುಂಬಗಳಿಗೆ ಉದ್ಯೋಗವನ್ನು ನೀಡಲಾಗಿದೆ ;

(ಇ) ೨೦೧೬-೧೭ನೇ ಸಾಲಿನಲ್ಲಿ ಈ ಯೋಜನೆಗೆ ಸಂಬಂಧಿಸಿದ ಕಾರ್ಯಕ್ರಮಗಳ ಅಡಿಯಲ್ಲಿ ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ?

## ೧೯೯೫ರ ಪೂರ್ವದ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೨೨೧೬ (೨೪೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೧೯೮೭ರಿಂದ ೧೯೯೫ರವರೆಗಿನ ಅನುದಾನಕ್ಕೆ ಒಳಪಟ್ಟಿರುವ ಖಾಸಗಿ ಪ್ರಥಮ ದರ್ಜೆ (ಪದವಿ) ಕಾಲೇಜುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಈ ಕಾಲೇಜುಗಳು ಯಾವ ವರ್ಗದ ಆಡಳಿತ ಮಂಡಳಿಗೆ ಸೇರಿದ ಕಾಲೇಜುಗಳಾಗಿವೆ ;

(ಇ) ಈ ಕಾಲೇಜುಗಳನ್ನು ಹೊರತುಪಡಿಸಿ ಉಳಿದ ಸಾಮಾನ್ಯ ಆಡಳಿತ ಮಂಡಳಿಯ-೧೯೯೫ರ ಮೊದಲು ಆರಂಭಗೊಂಡ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಸಾಮಾನ್ಯ ವರ್ಗದ ಆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗುವುದೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೧೭ (೨೪೭೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದಲ್ಲಿನ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ತೆರವಾಗಿರುವ ಬೋಧಕ–ಭೋಧಕೇತರ ಹುದ್ದೆಗಳೆಷ್ಟು ; ಯಾವಾಗಿನಿಂದ ಈ ಹುದ್ದೆಗಳು ಖಾಲಿ ಇವೆ ;

(ಆ) ಈ ಹುದ್ದೆಗಳನ್ನು ದೀರ್ಘ ಕಾಲದಿಂದ ನೇಮಕಾತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಹುದ್ದೆಗಳನ್ನು ತ್ವರಿತಗತಿಯಲ್ಲಿ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೧೮ (೨೪೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೇಡ್ 'ಬಿ' ಹುದ್ದೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ಪ್ರಸ್ತಾವನೆ ಆರ್ಥಿಕ ಇಲಾಖೆಯಿಂದ ತಿರಸ್ಕೃತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಮುಂದಿನ ಕ್ರಮ ಏನು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೧೯ (೨೪೭೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ (ಪದವಿ) ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳೆಷ್ಟು ; (ವಿಷಯವಾರು ವಿವರ ನೀಡುವುದು)

(ಆ) ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ನೇಮಕಾತಿ ಹೊಂದಲು ನಿಗಧಿಪಡಿಸಿರುವ ವಿದ್ಯಾರ್ಹತೆ ಏನು ;

(ಇ) ೨೦೦೯ರ ಮೊದಲು ಎಂ.ಫಿಲ್ (M.Phil) ಪದವಿ ಪಡೆದವರು ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಕವಾಗಲು ಅರ್ಹರೇ;

(ಈ) ಅರ್ಹರಾದಲ್ಲಿ ಈ ಬಗ್ಗೆ ಯು.ಜಿ.ಸಿ. ಹೊರಡಿಸಿದ ಆದೇಶದ ಪ್ರತಿ ನೀಡುವುದು ;

(ಉ) ಈ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

## ಅನುದಾನ ರಹಿತ (ಖಾಸಗಿ) ಶಿಕ್ಷಣ ಸಂಸ್ಥೆಯ ಸಿಬ್ಬಂದಿಗಳ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೨೦ (೨೪೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಖಾಸಗಿ ಅನುದಾನ ರಹಿತ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕ ಮತ್ತು ಶಿಕ್ಷಕೇತರ ನೌಕರರು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳಿಗೆ ಚೆಕ್ ಮೂಲಕ ವೇತನವನ್ನು ನೀಡಲಾಗುತ್ತಿದೆಯೇ; ಇದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಈ ಖಾಸಗಿ ಶಿಕ್ಷಣ ಸಂಸ್ಥೆಗಳ ನೌಕರರ ಹಿತ ಕಾಪಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ತುಮಕೂರು ಜಿಲ್ಲೆ, ಗುಬ್ಬಿ ಹತ್ತಿರ ಕೇಂದ್ರಿಯ ವಿದ್ಯಾಲಯದ ಸ್ಥಾಪನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೧ (೨೪೮೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ, ಗುಬ್ಬಿ ಬಳಿಯುಲ್ಲಿ ಕೇಂದ್ರಿಯು ವಿದ್ಯಾಲಯುಗಳನ್ನು ಸ್ಥಾಪನೆ ವಾಾಡಲಾಗುತ್ತಿದೆಯೇ ; (ತಿಳಿಸುವುದು)

(ಆ) ಹಾಗಿದ್ದಲ್ಲಿ, ಈ ವಿದ್ಯಾಲಯವನ್ನು ಸ್ಥಾಪನೆ ಮಾಡಲು ಯಾವ ಸ್ಥಳದಲ್ಲಿ ಜಮೀನು ಗುರುತಿಸಲಾಗಿದೆ ; ಒದಗಿಸಲು ಉದ್ದೇಶಿಸಿರುವ ಜಮೀನು ಎಷ್ಟು ;

(ಇ) ಈ ಬಗ್ಗೆ ಜಿಲ್ಲಾಡಳಿತವು ಯಾವ ಯಾವ ರೀತಿಯ ಕ್ರಮಗಳನ್ನು ತೆಗೆದುಕೊಂಡಿದೆ ; (ವಿವರ ನೀಡುವುದು)

(ಈ) ಈ ವಿದ್ಯಾಲಯವನ್ನು ಹಿಂದುಳಿದ ಜಿಲ್ಲೆ ತುಮಕೂರಿನಲ್ಲಿ ಸ್ಥಾಪನೆ ಮಾಡದೇ ಆರ್.ಟಿ.ಇ. ಅಡಿ ಜಿಲ್ಲೆಯ ಹಳ್ಳಿಗಳ ಮಕ್ಕಳಿಗೆ ಅನುಕೂಲವಾಗುವುದರಿಂದ ರಾಜ್ಯ ಸರ್ಕಾರ ಎಲ್ಲಾ ರೀತಿಯ ಮೂಲಭೂತ ಸೌಕರ್ಯವನ್ನು ನೀಡಿ ಈ ಕೇಂದ್ರಿಯ ವಿದ್ಯಾಲಯವನ್ನು ಸ್ಥಾಪಿಸಲು ಸರ್ಕಾರ ತಕ್ಷಣ ಕ್ರಮ ವಹಿಸುವುದೇ? (ತಿಳಿಸುವುದು)

## ಸ್ವಚ್ಛ ಭಾರತ್ ಮಿಷನ್ ಮಾದರಿಯಲ್ಲಿ ಯೋಜನೆ ರೂಪಿಸುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೨ (೨೪೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ವಚ್ಛ ಭಾರತ್ ಮಿಷನ್ ಮಾದರಿಯಲ್ಲಿ ಹಳ್ಳಿಗಳಲ್ಲಿನ ಘನತ್ಯಾಜ್ಯವನ್ನು ವಿಲೇವಾರಿ ಮಾಡಲು ರಾಜ್ಯ ಸರ್ಕಾರವೇ ಒಂದು ಹೊಸ ಯೋಜನೆಯನ್ನು ರೂಪಿಸಲು ಸರ್ಕಾರಕ್ಕಿರುವ ತೊಂದರೆ ಏನು; (ವಿವರ ನೀಡುವುದು)

(ಆ) ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಅನುದಾನವನ್ನು ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಇ) ಹಳ್ಳಿಗಳಲ್ಲಿನ ಘನತ್ಯಾಜ್ಯ ವಿಲೇವಾರಿಗಾಗಿ ಕನಿಷ್ಟ ಪಕ್ಷ ಗ್ರಾಮ ಪಂಚಾಯಿತಿ ಇರುವ ಕೇಂದ್ರ ಸ್ಥಳದಲ್ಲಿ ಮೊದಲನೆ ಹಂತದ ಯೋಜನೆಯನ್ನು ಕೈಗೊಳ್ಳಲಾಗುವುದೇ ;

(ಈ) ಗ್ರಾಮ ಪಂಚಾಯಿತಿಗಳಲ್ಲಿ ಸ್ಥಳ ಗುರುತಿಸಿ, ಘನತ್ಯಾಜ್ಯ ವಿಲೇವಾರಿಗಾಗಿ ಎಷ್ಟು ದಿನಗಳಲ್ಲಿ ಈ ಯೋಜನೆ ಜಾರಿಗೆ ತರಲಾಗುವುದು ? (ವಿವರ ನೀಡುವುದು)

## ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಗೆ ಮಂಜೂರಾಗಿರುವ ಅನುದಾನದ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೩ (೨೪೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ಅಲ್ಪಸಂಖ್ಯಾತರ ಇಲಾಖೆ ಮತ್ತು ಇಲಾಖೆಯಡಿಯಲ್ಲಿ ಬರುವ ನಿಗಮ/ಸಂಸ್ಥೆಗಳಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಲ್ಲಿ ಅಭಿವೃದ್ಧಿ ಯೋಜನೆಗಳಿಗೆ ಮಂಜೂರಾಗಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಂಜೂರಾಗಿರುವ ಅನುದಾನವನ್ನು ಸಂಪೂರ್ಣವಾಗಿ ಬಳಕೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಆಯಾ ಜಿಲ್ಲೆಯ ಭೌತಿಕ ಗುರಿಯನ್ನು ವಿವರವಾಗಿ ನೀಡುವುದು ;

(ಇ) ಕಳೆದ ೩ ವರ್ಷದಲ್ಲಿ ಯೋಜನೆವಾರು ಮಂಜೂರಾದ ಹಣದಲ್ಲಿ ಖರ್ಚು ಮಾಡದೆ ಸರ್ಕಾರಕ್ಕೆ ಹಿಂತಿರುಗಿಸಿದ ಒಟ್ಟು ಮೊತ್ತವೆಷ್ಟು;

(ಈ) ೨೦೧೭–೧೮ನೇ ಸಾಲಿನ ಆಯವ್ಯಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗೆ ಮೀಸಲಿಟ್ಟ ಅನುದಾನವೆಷ್ಟು ; ಈ ಅನುದಾನವನ್ನು ಜಿಲ್ಲಾವಾರು ಹಂಚಿಕೆ ಮಾಡಲಾಗಿದೆಯೇ ; (ಹಾಗಿದ್ದಲ್ಲಿ, ಜಿಲ್ಲಾವಾರು, ಯೋಜನೆವಾರು ಮಾಹಿತಿ ನೀಡುವುದು)

(ಉ) ೨೦೧೭–೧೮ನೇ ಸಾಲಿನಲ್ಲಿ ಶಾದಿಮಹಲ್, ಸಮುದಾಯ ಭವನ ನಿರ್ಮಿಸಲು ಜಿಲ್ಲಾವಾರು ನಿಗದಿ ಮಾಡಿರುವ ಅನುದಾನವೆಷ್ಟು; (ವಿವರ ನೀಡುವುದು)

(ಊ) ಪ್ರತಿ ಶಾದಿಮಹಲ್‌ಗೆ ನೀಡುತ್ತಿರುವ ಅನುದಾನವೆಷ್ಟು ; ನಿರ್ಮಾಣವಾದ ನಂತರ ಈ ಶಾದಿಮಹಲ್‌ನ ನಿರ್ವಹಣೆಯ ಜವಾಬ್ದಾರಿಯನ್ನು ಯಾರಿಗೆ ವಹಿಸಲಾಗುವುದು ? (ವಿವರ ನೀಡುವುದು)

## ನರ್ಮ್ ಯೋಜನೆಯಡಿ ಮಂಜೂರಾದ ಅನುದಾನ ಮತ್ತು ಬಸ್ಸುಗಳ ಸಂಖ್ಯೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೪ (೨೫೪೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಸಾರಿಗೆ ಇಲಾಖೆಗೆ ವಿವಿಧ ಯೋಜನೆಗಳಿಗೆ ಕೇಂದ್ರ ಸರ್ಕಾರ ಮತ್ತು ವಿಶ್ವ ಬ್ಯಾಂಕ್ ನೀಡಿದ ಅನುದಾನವೆಷ್ಟು;

(ಆ) ರಾಜ್ಯದ ಯಾವ ಯಾವ ಜಿಲ್ಲೆ ಮತ್ತು ನಗರಗಳಲ್ಲಿ ನರ್ಮ್ ಯೋಜನೆ ಜಾರಿಯಲ್ಲಿದೆ ; ಒಟ್ಟು ಎಷ್ಟು ಬಸ್ಸುಗಳು ಸದರಿ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿವೆ ;

(ಇ) ಕಳೆದ ೩ ವರ್ಷಗಳಲ್ಲಿ ನರ್ಮ್ ಯೋಜನೆಯಡಿ ಮಂಜೂರಾದ ಅನುದಾನವೆಷ್ಟು ; ಇದರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನರ್ಮ್ ಯೋಜನೆ ಯಾವಾಗ ಪ್ರಾರಂಭವಾಯಿತು ; ನರ್ಮ್ ಯೋಜನೆಯಡಿ ಮಂಜೂರಾದ ಒಟ್ಟು ಬಸ್ಸುಗಳ ಸಂಖ್ಯೆ ಎಷ್ಟು ; ಮಂಜೂರಾದ ಅನುದಾನ ಎಷ್ಟು ?

## ಗ್ರಾಮ ಪಂಚಾಯತ್‌ಗಳಲ್ಲಿ ಸಾವಿರಾರು ಕೋಟಿ ತೆರಿಗೆ ಬಾಕಿ ಇರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೫ (೨೫೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಗ್ರಾಮ ಪಂಚಾಯತ್‌ಗಳಲ್ಲಿ ಸಾವಿರಾರು ಕೋಟಿ ತೆರಿಗೆ ವಸೂಲಿಗೆ ಬಾಕಿ ಇರುವುದು ನಿಜವೇ ; ಕಳೆದ ೩ ವರ್ಷದ ಒಟ್ಟಾರೆ ಬೇಡಿಕೆ ವಸೂಲಿ ಮತ್ತು ಬಾಕಿಯ ಒಟ್ಟು ಮೊತ್ತವೆಷ್ಟು ;

(ಆ) ಗ್ರಾಮ ಪಂಚಾಯತ್‌ಗಳಲ್ಲಿ ತೆರಿಗೆ ನಿರ್ಧರಣೆಯಲ್ಲಿ ಪಕ್ಷಪಾತ ಮತ್ತು ಅವೈಜ್ಞಾನಿಕ ಮಾನದಂಡಗಳಿಂದ ಲಕ್ಷಾಂತರ ತೆರಿಗೆ ಹಣ ಖೋತವಾಗುತ್ತಿದ್ದು, ಸಂಪನ್ಮೂಲ ಕ್ರೂಢೀಕರಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಮೊಬೈಲ್ ಟವರ್, ವಿಂಡ್ ಮಿಲ್, ಓ.ಎಫ್.ಸಿ. ಕೇಬಲ್, ಖಾಸಗಿ ವಿದ್ಯಾಸಂಸ್ಥೆಗಳು,

ವಿಮಾನ ನಿಲ್ದಾಣ, ಎಸ್.ಇ.ಝಡ್‌ಗಳ ಸಂಖ್ಯೆ ಎಷ್ಟು ; ಒಟ್ಟು ಎಷ್ಟು ಗ್ರಾಮ ಪಂಚಾಯತಿ ತೆರಿಗೆ ವಿಧಿಸುತ್ತಿದೆ ; ತೆರಿಗೆ ವಿಧಿಸದಿರುವ ಪಂಚಾಯತ್‌ಗಳ ಸಂಖ್ಯೆ ಎಷ್ಟು ;

(ಈ) ಮರಳುಗಾರಿಕೆಯಿಂದ ವಸೂಲಾಗುವ ರಾಜಧನದ ಶೇಕಡಾ ೨೫ರಷ್ಟನ್ನು ಕಳೆದ ೫-೬ ವರ್ಷಗಳಿಂದ ಗ್ರಾಮ ಪಂಚಾಯತ್‌ಗಳಿಗೆ ಲೋಕೋಪಯೋಗಿ ಮತ್ತು ಗಣಿ ಇಲಾಖೆಗಳು ಬಿಡುಗಡೆ ಮಾಡದೇ ಉಳಿಸಿಕೊಂಡಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಪ್ರತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಎಲ್ಲಾ ರೀತಿಯ ಆಸ್ತಿಗಳಿಗೆ ತೆರಿಗೆಗಳನ್ನು ವಿಧಿಸಿ ವಸೂಲಿ ಮಾಡಲು ಸಮಗ್ರ ಸಮೀಕ್ಷೆ (total station survey) ನಡೆಸಲು ಹಾಗೂ ಸಾವಿರಾರು ಕೋಟಿ ಬಾಕಿ ಇರುವ ತೆರಿಗೆ ವಸೂಲಿ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳಾವುವು ?

## ಖಾಸಗಿ ಲಾಭಿಗೆ ಸರ್ಕಾರಿ ಕಾಲೇಜುಗಳನ್ನು ಮುಚ್ಚುತ್ತಿರುವುದರ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೬ (೨೫೪೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಖಾಸಗಿ ಲಾಭಿಗೆ ಮಣಿದು ಸರ್ಕಾರಿ ಕಾಲೇಜುಗಳನ್ನು ಮುಚ್ಚುತ್ತಿರುವುದು ನಿಜವೇ ;

(ಆ) ಕಳೆದ ನಾಲ್ಕು ವರ್ಷದಲ್ಲಿ ಮುಚ್ಚಲಾದ ಸರ್ಕಾರಿ ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ;

(ಇ) ಹೊಸ ಪದವಿ ಪೂರ್ವ ಮತ್ತು ಪದವಿ ಕಾಲೇಜು ಪ್ರಾರಂಭಿಸಿರುವ ನಿಯಮ ಮತ್ತು ಮಾರ್ಗಸೂಚಿಗಳೇನು ; (ಪ್ರತಿ ಒದಗಿಸುವುದು)

(ಈ) ಕಳೆದ ನಾಲ್ಕು ವರ್ಷದಲ್ಲಿ ಹೊಸದಾಗಿ ಪ್ರಾರಂಭಿಸಿರುವ ಖಾಸಗಿ ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳ (ಡಿಗ್ರಿ) ಸಂಖ್ಯೆ ಎಷ್ಟು ;

(ಉ) ನಿಯಮ ಮೀರಿ ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡಿರುವುದು ನಿಜವೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್‌ನಲ್ಲಿ ದೂರುಗಳಿಂದ ಪ್ರಕರಣಗಳನ್ನು ಲೋಕಾಯುಕ್ತಕ್ಕೆ ವಹಿಸಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೭ (೨೫೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅಮಾನತ್ತು ಮಾಡಲಾದ ಮತ್ತು ವಜಾ ಮಾಡಲಾದ ನೌಕರರ ಸಂಖ್ಯೆ ಎಷ್ಟು ; ಅವರ ಮೇಲಿನ ಆಪಾದನೆಗಳೇನು ;

(ಆ) ಅಮಾನತ್ತು ಮಾಡಲಾದ ನೌಕರರಲ್ಲಿ ಎಷ್ಟು ಮಂದಿಯನ್ನು ಯಾವ ಹುದ್ದೆಯಲ್ಲಿ ಮುಂದುವರಿಸಲಾಗಿದೆ ;

(ಇ) ಅನೇಕ ಗಂಭೀರವಲ್ಲದ ಸಣ್ಣ ಪ್ರಕರಣಗಳಲ್ಲಿ ನೌಕರರನ್ನು ಸೇವೆಯಿಂದ ವಜಾದಂತಹ ಗಂಭೀರ ಶಿಕ್ಷೆಗೆ ಒಳಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇಲ್ಲಿಯವರೆಗೆ ಲೋಕಾಯುಕ್ತ ತನಿಖೆಗೆ/ಇಲಾಖಾ ವಿಚಾರಣೆಗೆ ವಹಿಸಿದ ಪ್ರಕರಣಗಳ ಸಂಖ್ಯೆ ಎಷ್ಟು ;

(ಉ) ಕೆಲವು ದುರುದ್ದೇಶ ಪ್ರಕರಣಗಳಲ್ಲಿ ಹಾಗೂ ಯಾವುದೇ ದೂರುಗಳು ಇಲ್ಲದೆಯೇ ಕೆಲವೊಂದು ಪ್ರಕರಣಗಳು ಲೋಕಾಯುಕ್ತ ತನಿಖೆಗೆ ವಹಿಸಿ, ತನಿಖೆಯ ನೆಪದಲ್ಲಿ ನೌಕರರಲ್ಲಿ ಮಾನಸಿಕ ಒತ್ತಡ ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಿಯಮ ಮೀರಿ ಪದೋನ್ನತಿ ನೀಡುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೮ (೨೫೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 3 ಸ್ಥರಗಳಲ್ಲಿ ಮಂಜೂರಾದ ಸರ್ಕಾರಿ ಹುದ್ದೆಗಳೆಷ್ಟು ; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅನ್ಯ ಇಲಾಖೆಯಿಂದ ನಿಯೋಜನೆಗೊಂಡ ಅಧಿಕಾರಿ ಮತ್ತು ನೌಕರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮೂಲ ಹುದ್ದೆ–ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಯ ವಿವರ ನೀಡುವುದು) ನಿಯಮ ಮೀರಿ ಅರ್ಹತೆ ಇಲ್ಲದವರಿಗೆ ಉನ್ನತ ಹುದ್ದೆಯ ಪ್ರಭಾರ ನೀಡಿರುವುದು ನಿಜವೇ ;

(ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅನ್ಯ ಇಲಾಖೆಯಿಂದ ವಿಲೀನಗೊಂಡ ಅಧಿಕಾರಿ ಮತ್ತು ನೌಕರರ ಸಂಖ್ಯೆ ಎಷ್ಟು ; (ಈ ಸಂಬಂಧ ಆದೇಶ ಮತ್ತು ಸುತ್ತೋಲೆಗಳಿದ್ದಲ್ಲಿ ಪ್ರತಿ ನೀಡುವುದು)

(ಈ) ನಿಯಮ ೩೨ರ ಅಡಿ ಗ್ರಾಮ ಪಂಚಾಯತ್ ಕಾರ್ಯದರ್ಶಿ ಹುದ್ದೆಯಿಂದ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಪದೋನ್ನತಿ ಪಡೆದ ನೌಕರರ ಸಂಖ್ಯೆ ಎಷ್ಟು ;

(ಉ) ಗ್ರಾಮ ಪಂಚಾಯತ್ ನೌಕರರಿಗೆ ನಿಯಮ ಮೀರಿ, ಅರ್ಹತೆ ಇಲ್ಲದವರಿಗೆ ೩-೪ ಪದೋನ್ನತಿ ನೀಡಿರುವುದು ನಿಜವೇ ; ಸಂಬಂಧಿತ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಪದೋನ್ನತಿ, ನಿಯಮ ಮೀರಿ ಅನರ್ಹರಿಗೆ ಉನ್ನತ ಹುದ್ದೆಯ ಪ್ರಭಾರದ ಕುರಿತು ತನಿಖೆ ನಡೆಸಲಾಗಿದೆಯೇ ;

(ಊ) ಪದೋನ್ನತಿ, ಉನ್ನತ ಹುದ್ದೆಯ ಪ್ರಭಾರದ ಕುರಿತು ಸಮಗ್ರ ಉನ್ನತಮಟ್ಟದ ತನಿಖೆ ನಡೆಸುವ ಕುರಿತು ಸರ್ಕಾರದ ನಿಲುವೇನು; ಈ ಕುರಿತು ಯಾವ ಹಂತದಲ್ಲಿ ಕ್ರಮ ಕೈಗೊಳ್ಳಲಾಗುವುದು ?

## ಬೆಳಗಾವಿಯ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಶಿಕ್ಷಕರ ಕೊರತೆ ಎದುರಿಸುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

*೨೨೨೯* (೨೬೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿಯ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಸಾವಿರಾರು ಶಿಕ್ಷಕರ ಹುದ್ದೆಗಳು ಖಾಲಿಯಿದ್ದು, ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಶಿಕ್ಷಕರ ಕೊರತೆ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಯಾವ ಕಾಲಮಿತಿಯಲ್ಲಿ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಆರಂಭಗೊಂಡು ಶಿಕ್ಷಕರ ಕೊರತೆ ನೀಗಲಿದೆ; ಈ ವಿಚಾರದಲ್ಲಿ ಸರ್ಕಾರವು ತೆಗೆದುಕೊಂಡ ಕ್ರಮಗಳು ಯಾವ ಹಂತದಲ್ಲಿವೆ? (ವಿವರ ಒದಗಿಸುವುದು)

(ಇ) ಬೆಳಗಾವಿ ಜಿಲ್ಲೆಗೆ ಒಟ್ಟು ಮಂಜುರಾದ ಶಿಕ್ಷಕರ ಹುದ್ದೆಗಳೆಷ್ಟು? ಈಗ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಈ) ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಶಾಲೆಗಳು ಆರಂಭಗೊಂಡು ತರಗತಿಗಳು ನಡೆಯಲು ಸರ್ಕಾರ ತೆಗೆದುಕೊಂಡ ತಕ್ಷಣದ ಕ್ರಮಗಳೇನು; ಹೇಗೆ ಶಿಕ್ಷಕರ ಕೊರತೆಯನ್ನು ತುಂಬಲಾಗುತ್ತದೆ? (ವಿವರ ನೀಡುವುದು)

## ಅಕ್ರಮ ಮರಳು ಮಾಫಿಯಾ ಸರ್ಕಾರಿ ಅಧಿಕಾರಿಗಳ ಮೇಲೆ ಹಲ್ಲೆಗೆ ಮುಂದಾಗುತ್ತಿರುವ ಕುರಿತು.

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೩೦ (೨೬೧೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನೇಕ ಕಡೆ ಅಕ್ರಮ ಮರುಳು ಮಾಫಿಯಾ ಅವ್ಯಾಹತವಾಗಿ ನಡೆಯುತ್ತಿದ್ದು, ಅದನ್ನು ತಡೆಯಲು ಹೊರಟ ಸರ್ಕಾರಿ ಹಿರಿಯ ಅಧಿಕಾರಿಗಳ ಮೇಲೆ ಮರುಳು ಮಾಫಿಯಾ ತಿರುಗಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅಕ್ರಮ ಮರಳು ಮಾಫಿಯಾವನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ದಿಟ್ಟ ಕ್ರಮಗಳೇನು; ಸರ್ಕಾರಿ ಅಧಿಕಾರಿಗಳ ಮೇಲೆಯೇ ಹಲ್ಲೆಗೆ ಯತ್ನಿಸಿದ ಮರಳು ದಂಧೆಕೋರರ ವಿರುದ್ಧ ಸರ್ಕಾರ ಏನು ಕ್ರಮಗಳನ್ನು ತೆಗೆದುಕೊಂಡಿದೆ;

(ಇ) ಕಳೆದ ಮೂರು ವರ್ಷಗಳಿಂದ ಅಕ್ರಮ ಮರುಳು ಕಳ್ಳ ಸಾಗಾಣಿಕೆದಾರರ ವಿರುದ್ಧ ಎಷ್ಟು ಪ್ರಕರಣಗಳು ದಾಖಲಾಗಿವೆ; ಎಷ್ಟು ಮಂದಿ ಅಪರಾಧಿಗಳಿಗೆ ಶಿಕ್ಷೆ ವಿಧಿಸಲಾಗಿದೆ; (ಜಿಲ್ಲಾ ವಾರು ವಿವರ ನೀಡುವುದು)

(ಈ) ಅಕ್ರಮ ಮರುಳು ದಂಧೆಕೋರರ ಜೊತೆ ಕೈ ಜೋಡಿಸಿ ಸಹಾಯ ಮಾಡುವ ಸರ್ಕಾರಿ ಅಧಿಕಾರಿಗಳ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ; ಎಷ್ಟು ಕೇಸು ದಾಖಲಾಗಿವೆ? (ಜಿಲ್ಲಾವಾರು ವಿವರ ನೀಡುವುದು)

## ವಸತಿ ರಹಿತ ಬಡವರಿಗೆ ಸೂರು ಕಲ್ಪಿಸುವ ವಸತಿ ಯೋಜನೆಗಳು ವಾರ್ಷಿಕ ಗುರಿ ನಿಗಧಿಪಡಿಸಲು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೨೩೧ (೨೬೧೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವಸತಿ ರಹಿತರಿಗೆ ಸೂರು ಕಲ್ಪಿಸುವ ಸರ್ಕಾರದ "ವಸತಿ ಯೋಜನೆಗಳು" ವಾರ್ಷಿಕ ಗುರಿ ನಿಗಧಿಪಡಿಸಲು ವಿಳಂಬವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ವರ್ಷದಲ್ಲಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು; ಇವು ಯಾವಾಗ ಜಾರಿಗೆ ಬರುತ್ತವೆ;

(ಇ) ಕಳೆದ ೩ ವರ್ಷದಲ್ಲಿ ರಾಜ್ಯ ಸರಕಾರವು ವಿವಿಧ ವಸತಿ ಯೋಜನೆಗಳಡಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿ ಹಾಕಿಕೊಂಡಿತ್ತು; ಎಷ್ಟು ಮನೆಗಳನ್ನು ನಿರ್ಮಿಸಿ ಅರ್ಹರಿಗೆ ಹಂಚಿಕೆ ಮಾಡಲಾಗಿದೆ; ಎಷ್ಟು ಬಾಕಿ ಉಳಿದಿವೆ; (ವರ್ಷವಾರು ಹಾಗೂ ಯೋಜನೆವಾರು ವಿವರ ನೀಡುವುದು)

(ಈ) ಅದರಲ್ಲಿ ಮನೆಗಳನ್ನು ನಿರ್ಮಿಸಿಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು; ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು; ಮನೆಗಳನ್ನು ನಿರ್ಮಿಸಿಕೊಳ್ಳದ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಸದರಿ ಯೋಜನೆಯಡಿ ಮನೆ ನಿರ್ಮಿಸುವ ಗುರಿ ತಲುಪುವಲ್ಲಿ ವಿಳಂಬವಾಗಲು ಕಾರಣಗಳೇನು; ಸರ್ಕಾರವು ಹಾಕಿಕೊಂಡ ಗುರಿ ತಲುಪಲು ಯಾವ ಕ್ರಮಗಳನ್ನು ಕೈಗೊಂಡಿದೆ;

(ಊ) ಜಿಲ್ಲಾಧಿಕಾರಿಗಳ ವಸತಿ ಸಮಿತಿಯು ಆಯ್ಕೆ ಮಾಡಿದ ವಿಶೇಷ ವರ್ಗದ ಫಲಾನುಭವಿಗಳು (ಅಂಗವಿಕಲರು ಹಾಗೂ ವಿಧವೆಯರು) ಜಿ.ಪಿ.ಎಸ್ ಮಾಡಲು ವಿಳಂಬವಾಗಿ, ಗುರಿ ಪಡೆದಿದ್ದರೂ ಯೋಜನೆಯ ಫಲ ಸಿಗದೇ, ಅತಂತ್ರ ಸ್ಥಿತಿಯಲ್ಲಿರುವ ಇವರಿಗೆ ನ್ಯಾಯ ಒದಗಿಸಲು ಸರ್ಕಾರವು ಏನು ಕ್ರಮಗಳನ್ನು ಕೈಗೊಳ್ಳುವುದು?

## ಶಾಲಾ ಪಠ್ಯ ಪುಸ್ತಕ ಮುದ್ರಣ ಕಾರ್ಯ ವಿಳಂಬವಾಗಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೩೨ (೨೬೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬರಗಾಲದ ಹಿನ್ನಲೆಯಲ್ಲಿ ಕಾಗದ ಪೂರೈಕೆಯಲ್ಲಿ ವ್ಯತ್ಯಯವುಂಟಾಗಿ ಶಾಲಾ ಪಠ್ಯ ಪುಸ್ತಕ ಮುದ್ರಣ ಕಾರ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸಕಾಲದಲ್ಲಿ ಶಾಲಾ ಪಠ್ಯ ಪುಸ್ತಕ ವಿತರಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಈಗಾಗಲೇ ಎಷ್ಟು ಪ್ರಮಾಣದ ಪಠ್ಯಪುಸ್ತಕಗಳು ವಿತರಣೆಗೆ ಸಿದ್ದವಾಗಿ ಯಾವ ಕಾಲಮಿತಿಯಲ್ಲಿ ಪೂರ್ಣ ಪ್ರಮಾಣದ ಪಠ್ಯ ಪುಸ್ತಕಗಳು ಶಾಲಾ ಮಕ್ಕಳಿಗೆ ವಿತರಣೆಯಾಗಲಿವೆ;

(ಈ) ಪಠ್ಯ ಪುಸ್ತಕ ಮುದ್ರಣದ ಟೆಂಡರ್ ಪಡೆದ ಮುದ್ರಕರು ಯಾರು, ಯಾವ ದರದಲ್ಲಿ ಪಠ್ಯಪುಸ್ತಕಗಳು ಮುದ್ರಣಗೊಳ್ಳುತ್ತಿವೆ; (ವಿವರ ನೀಡುವುದು)

(ಉ) ಇದಕ್ಕಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಬಾಕಿ ಇರುವ ಅನುದಾನವೆಷ್ಟು;

(ಊ) ೨೦೧೪–೧೫, ೨೦೧೫–೧೬ನೇ ಸಾಲುಗಳಲ್ಲಿ ಶಾಲಾ ಪಠ್ಯಪುಸ್ತಕಗಳಿಗೆ ಸರ್ಕಾರ ಮೀಸಲಿರಿಸಿದ್ದ ಹಣವೆಷ್ಟು; ಬಿಡುಗಡೆ ಮಾಡಿರುವ ಹಣವೆಷ್ಟು? (ವಿವರ ನೀಡುವುದು)

## ಬೆಳಗಾವಿಯಲ್ಲಿ ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ಶಾಶ್ವತ ವಸ್ತು ಪ್ರದರ್ಶನ ಸಂಕೀರ್ಣ ಪಾಳು ಬಿದ್ದಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೩೩ (೨೬೧೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿಯಲ್ಲಿ ಕೈಗಾರಿಕೋದ್ಯಮಿಗಳಿಗೆ ಉತ್ತೇಜನ ನೀಡುವ ಸಲುವಾಗಿ ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡ ಶಾಶ್ವತ ವಸ್ತು ಪ್ರದರ್ಶನ ಸಂಕೀರ್ಣ ಚಟುವಟಿಕೆಯಿಲ್ಲದೇ ಪಾಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ ನಿರ್ಮಿಸಿದ ಸಂಕೀರ್ಣ ಉದ್ದೇಶಿತ ಬೆಳವಣಿಗೆ ಕಾಣದಿರಲು ಕಾರಣಗಳೇನು; (ವಿವರ ನೀಡುವುದು)

(ಇ) ಸದರಿ ವಸ್ತು ಪ್ರದರ್ಶನದ ಮೂಲೋದ್ದೇಶ ಈಡೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಕೈಗಾರಿಕೋದ್ಯಮಿಗಳಿಗೆ ಇಲ್ಲಿ ಏನೇನು ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ; (ವಿವರ ನೀಡುವುದು)

(ಈ) ಇದರ ನಿರ್ವಹಣೆಯ ಹೊಣೆ ಯಾರದ್ದು; ಇದರ ನಿರ್ವಹಣೆಗೆ ಸರ್ಕಾರ ವಾರ್ಷಿಕ ಎಷ್ಟು ಅನುದಾನ ನೀಡುತ್ತದೆ; ಬಿಡುಗಡೆಯಾಗಿರುವ ಅನುದಾನವೆಷ್ಟು? (ವಿವರ ನೀಡುವುದು)

## ಕೇಂದ್ರ ಸರ್ಕಾರದ “ಉಡಾನ್” ಯೋಜನೆಯಡಿ ಪ್ರಾದೇಶಿಕ ವಿಮಾನಯಾನ ಸೇವೆ.

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೩೪ (೨೫೬೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾದೇಶಿಕ ಸಂಪರ್ಕ ಯೋಜನೆಯಡಿ (ಆರ್‌ಸಿಎಸ್) ಪ್ರಾದೇಶಿಕ ವಿಮಾನ ನಿಲ್ದಾಣಗಳ ಅಭಿವೃದ್ಧಿ ಸಂಬಂಧ ಕೇಂದ್ರ ವಿಮಾನಯಾನ ಸಚಿವಾಲಯದೊಂದಿಗೆ ರಾಜ್ಯ ಸರ್ಕಾರ ಒಡಂಬಡಿಕೆ ಮಾಡಿಕೊಂಡಿದೆಯೇ; ಮಾಡಿಕೊಂಡಿದ್ದಲ್ಲಿ, ವಿಧಿಸಿರುವ ಷರತ್ತುಗಳೇನು;

(ಆ) ಈ ಯೋಜನೆಯಡಿ ರಾಜ್ಯದ ಯಾವ ಯಾವ ಭಾಗಗಳಿಂದ ದೇಶದ ವಿವಿಧ ಭಾಗಗಳಿಂದ ನಾಗರೀಕ ವಿಮಾನಯಾನ ಸೇವೆ ಆರಂಭಗೊಳ್ಳಲಿದೆ;

(ಇ) ಬಳ್ಳಾರಿಯ ವಿದ್ಯಾನಗರದಿಂದ ಈ ಯೋಜನೆ ಯಾವಾಗ ಕಾರ್ಯಾರಂಭಿಸಲಿದೆ?

## ನೇಕಾರರಿಗೆ ನೀಡುವ ಕೈಗಾರಿಕಾ ಜಾಗದ ಬಗ್ಗೆ.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೨೩೫ (೨೬೦೮) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಬಡ ನೇಕಾರರಿಗೆ ವೃತ್ತಿ ಆಧಾರಿತವಾಗಿ ನಡೆಯುವ ನೇಕಾರಿಕೆಗೆ ಇಲಾಖಾ ಸೌಲಭ್ಯಗಳೇನು;

(ಆ) ಕಳೆದ ನಾಲ್ಕು ವರ್ಷಗಳಲ್ಲಿ ರಾಜ್ಯದ ಬಡನೇಕಾರರಿಗೆ ಯಾವ ಯಾವ ಜಿಲ್ಲೆಗಳಲ್ಲಿ ಏನೇನು ಸೌಲಭ್ಯ ಒದಗಿಸಲಾಗಿದೆ;

(ಇ) ಕ್ಲಸ್ಟರ್ ಮೂಲಕ ನೇಕಾರಿಕೆ ನಡೆಸಲು ಯಾವ ಯಾವ ಜಿಲ್ಲೆಗಳಲ್ಲಿ ಜಾಗ ಕಾಯ್ದಿರಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಈ) ಬೆಂಗಳೂರು ನಗರದಲ್ಲಿ ಎಷ್ಟು ನೇಕಾರರಿಗೆ ಜಾಗ ಮೀಸಲು ಇಡಲಾಗಿದೆ?

## ನೂತನ ಗ್ರಾಮ ಪಂಚಾಯ್ತಿಗಳ ಕಟ್ಟಡಗಳಲ್ಲಿ ಮೂಲಭೂತ ಸೌಕರ್ಯದ ಕೊರತೆ ಬಗ್ಗೆ.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೨೩೬ (೨೬೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಈ ಬಾರಿ ರಚನೆಯಾಗಿರುವ ನೂತನ ಗ್ರಾಮ ಪಂಚಾಯ್ತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ನೂತನವಾಗಿ ರಚಿಸಲ್ಪಟ್ಟಿರುವ ಎಷ್ಟು ಗ್ರಾಮ ಪಂಚಾಯತ್ತಿಗಳಿಗೆ ಕಟ್ಟಡ, ಶೌಚಾಲಯ, ಸಿಬ್ಬಂದಿ ಮೊದಲಾದ ಮೂಲಭೂತ ಸೌಕರ್ಯಗಳ ಕೊರತೆ ಇದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಸಂಬಂಧ ಮೂಲಭೂತ ಸೌಕರ್ಯವನ್ನು ಒದಗಿಸಲು ವಿಶೇಷವಾಗಿ ಹಣ ಬಿಡುಗಡೆ ಮಾಡಲಾಗಿದೆಯೇ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿಯ ನೌಕರರ ಕನಿಷ್ಟ ವೇತನ ಜಾರಿಗೊಳಿಸುವ ಬಗ್ಗೆ.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೨೩೭ (೨೬೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತಿ ನೌಕರರಿಗೆ ಸರ್ಕಾರವು ಕನಿಷ್ಟ ವೇತನ ಜಾರಿ ಮಾಡುವುದಾಗಿ ಘೋಷಣೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ನೌಕರರಿಗೆ ಕನಿಷ್ಟ ವೇತನ ಯೋಜನೆಯನ್ನು ಜಾರಿಗೊಳಿಸುವುದು ಯಾವಾಗ;

(ಆ) ಸರ್ಕಾರದಿಂದ ಕನಿಷ್ಠ ವೇತನ ನೀಡಲು ಅನುದಾನ ನೀಡಲಾಗಿದೆಯೇ; ಯಾವಾಗ ನೀಡಲಾಗುತ್ತದೆ;

(ಇ) ರಾಜ್ಯದಲ್ಲಿ ಸರ್ಕಾರ ನಿಗಧಿಪಡಿಸಿದ ಕನಿಷ್ಟ ವೇತನಕ್ಕಾಗಿ ಪ್ರತ್ಯೇಕ ಅನುದಾನ ನೀಡಲಾಗಿದೆಯೇ;

(ಈ) ಕಳೆದ ಸುಮಾರು ವರ್ಷಗಳಿಂದ ಇದುವರೆವಿಗೂ ಪಂಚಾಯತಿ ನೌಕರರಾಗಿ ಕೆಲಸ ಮಾಡುತ್ತಿರುವ ಪಂಪ್ ಆಪರೇಟರ್ ಹುದ್ದೆಗೆ ಈ ಮೊದಲು ೭ನೇ ತರಗತಿ ವ್ಯಾಸಂಗ ನಿಗಧಿಪಡಿಸಿದ್ದು ನೂತನ ಕಾನೂನು ಪ್ರಕಾರ ಸದರಿ ಹುದ್ದೆಗೆ ಎಸ್.ಎಸ್.ಎಲ್.ಸಿ. ನಿಗಧಿಪಡಿಸಿದ್ದು ಸರಿಯಿಲ್ಲದ ಕಾರಣ ೭ನೇ ತರಗತಿಯನ್ನು ಮುಂದುವರೆಸಿ ನೌಕರರಿಗೆ ಅನುಕೂಲ ಮಾಡಲಾಗುವುದೇ?

## ರಾಜ್ಯದ ಬಡ ನೇಕಾರರಿಗೆ ವಸತಿ ನೀಡುವ ಬಗ್ಗೆ.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿದೇಶನ ಹೊಂದಿದವರು):–**

೨೨೩೮ (೨೬೦೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬಡ ನೇಕಾರರು ಮನೆ ಇಲ್ಲದೇ ಹಲವಾರು ವರ್ಷಗಳಿಂದ ಬೇಡಿಕೆ ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ನಾಲ್ಕು ವರ್ಷಗಳಲ್ಲಿ ಸಂಘಟಿತ ಹಾಗೂ ಅಸಂಘಟಿತ ನೇಕಾರರಿಗೆ ಸರ್ಕಾರ ನೀಡಲಾದ ಮನೆಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ನೇಕಾರಿಕೆ ಮಾಡಲು ವರ್ಕ್‌ಷೆಡ್ ಸಮೇತ ನೀಡಿರುವ ಮನೆಗಳೆಷ್ಟು;

(ಈ) ನೇಕಾರರಿಗೆ ಮನೆ ನೀಡಲು ಇರುವ ನಿಯಮ ಹಾಗೂ ಮಾನ ದಂಡವೇನು? (ವಿವರ ನೀಡುವುದು)

## ಕಂಪ್ಯೂಟರ್ ಶಿಕ್ಷಕರ ಸಮಸ್ಯೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೨೪ (೨೬೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ಥಗಿತಗೊಂಡಿರುವ ಐ.ಸಿ.ಟಿ. ಫೇಸ್ ೨ ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಆ ಶಾಲಾ ಕಾಲೇಜು ವಿದ್ಯಾರ್ಥಿಗಳ ಕಂಪ್ಯೂಟರ್ ಶಿಕ್ಷಣ ಕಲಿಕೆ ಮತ್ತು ಲಕ್ಷಾಂತರ ಮೌಲ್ಯದ ಲ್ಯಾಬ್ ಸ್ಥಿತಿಗತಿಗಳೇನು ;

(ಇ) ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಹೊಸದಾಗಿ ಐ.ಟಿ. @ ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಯಾವ ಯಾವ ಶಾಲಾ ಕಾಲೇಜುಗಳಲ್ಲಿ ನೀಡಲಾಗುತ್ತದೆ ; (ಜಿಲ್ಲಾವಾರು ಪಟ್ಟಿ ಒದಗಿಸುವುದು)

(ಈ) ಐ.ಟಿ. @ ಶಾಲಾ ಕಾಲೇಜುಗಳಲ್ಲಿ ವಿಷಯ ಬೋಧಕರೇ ಕಂಪ್ಯೂಟರ್ ಶಿಕ್ಷಣ ಬೋಧಿಸುವಂತೆ ಸರ್ಕಾರ ತಿಳಿಸಿರುವುದರಿಂದ ವಿಷಯ ಬೋಧಕರಿಗೆ ಆಗುತ್ತಿರುವ ತೊಂದರೆ (ಎರಡೂ ವಿಷಯಗಳಲ್ಲಿ ಬೋಧಿಸಲು ಕಷ್ಟ ಸಾಧ್ಯ) ಮತ್ತು ಇದರಿಂದ ಕ್ರಮಬದ್ಧವಾದ ಕಂಪ್ಯೂಟರ್ ಶಿಕ್ಷಣದ ಪ್ರಯೋಜನ ವಿದ್ಯಾರ್ಥಿಗಳಿಗೆ ಸಿಗುತ್ತಿದೆಯೇ ;

(ಉ) ಐ.ಸಿ.ಟಿ. ಫೇಸ್ ೨ ಕಂಪ್ಯೂಟರ್ ಶಿಕ್ಷಣ ಯೋಜನೆಯಲ್ಲಿ ೫ ವರ್ಷ ಕಂಪ್ಯೂಟರ್ ಶಿಕ್ಷಣ ಬೋಧಿಸಿ ಅನುಭವ ಇರುವ ಮತ್ತು ಈಗ ನಿರುದ್ಯೋಗಿಗಳಾಗಿ ಕಷ್ಟದ ಜೀವನ ನಡೆಸುತ್ತಿರುವ ಈ ಶಿಕ್ಷಕರನ್ನೇ ಅತಿಥಿ ಶಿಕ್ಷಕರನ್ನಾಗಿ ಮಾನವೀಯತೆಯ ದೃಷ್ಠಿಯಿಂದ ಪರಿಗಣಿಸಿ ಕ್ರಮಬದ್ಧವಾದ ಕಂಪ್ಯೂಟರ್ ಶಿಕ್ಷಣ ನೀಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಜೂರಾಗಿರುವ ಮನೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೪೦ (೨೬೪೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ರಿಂದ ೨೦೧೬–೧೭ನೇ ಸಾಲಿನವರೆಗೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ಯೋಜನೆವಾರು ವಿವರ ನೀಡುವುದು)

(ಆ) ಸದರಿ ಮಂಜೂರಾದ ಮನೆಗಳ ಪೈಕಿ ಹಂಚಿಕೆ ಮಾಡಿರುವ ಮನೆಗಳ ಸಂಖ್ಯೆ ಎಷ್ಟು ;

(ಇ) ಎಷ್ಟು ಮನೆಗಳನ್ನು ಹಂಚಿಕೆ ಮಾಡದೇ, ರದ್ದುಗೊಳಿಸಲಾಗಿದೆ ; ರದ್ದುಗೊಳ್ಳಲು ಕಾರಣವೇನು ;

(ಈ) ಮಂಜೂರಾದ ಮನೆಗಳಲ್ಲಿ ಎಷ್ಟು ಮನೆಗಳು ಪೂರ್ಣಗೊಂಡಿವೆ ; ಪೂರ್ಣಗೊಳ್ಳದ ಮನೆಗಳ ಸಂಖ್ಯೆ ಎಷ್ಟು ; ಪೂರ್ಣಗೊಳ್ಳದೆ ಇರುವುದಕ್ಕೆ ಕಾರಣಗಳೇನು ? (ಪೂರ್ಣ ವಿವರ ಒದಗಿಸುವುದು)

## ಪದವಿ ಕಾಲೇಜು ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೨೪೧ (೨೬೨೫೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದಿಂದ ಮಂಜೂರಾದ ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿಲ್ಲದೆ ಖಾಸಗಿ ಕಟ್ಟಡಗಳಲ್ಲಿ ಅಥವಾ ಬೇರೆ ಬೇರೆ ವ್ಯವಸ್ಥೆಯಲ್ಲಿ ಎಷ್ಟು ಕಾಲೇಜುಗಳು ನಡೆಯುತ್ತಿವೆ ; (ವಿವರ ನೀಡುವುದು)

(ಆ) ಈ ರೀತಿಯಾಗಿ ಸ್ವಂತ ಕಟ್ಟಡಗಳು ಇಲ್ಲದಿರುವ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ಶೀಘ್ರವಾಗಿ ಸ್ವಂತ ಕಟ್ಟಡ ನಿರ್ಮಾಣ ಮಾಡಿ ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರ ಯಾವ ಯಾವ ಕ್ರಮ ಜರುಗಿಸುತ್ತಿದೆ ; (ವಿವರ ನೀಡುವುದು)

(ಉ) ಇದರಿಂದಾಗಿ ವಿದ್ಯಾರ್ಥಿಗಳ ಶಿಕ್ಷಣ ಕುಂಠಿತವಾಗಿ ವಿದ್ಯಾರ್ಥಿಗಳು ಆತಂಕದಲ್ಲಿರುವುದು ನಿಜವೇ ?

## ೨೦೧೭–೧೮ರಲ್ಲಿ ಪದವಿ ಪೂರ್ವ ಕಾಲೇಜು ಮುಚ್ಚುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೨೪೨ (೨೬೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ೨೦೧೭–೧೮ರಲ್ಲಿ ಮುಚ್ಚುವ ವಿಚಾರವನ್ನು ಸರ್ಕಾರ ಕೈಗೊಂಡಿದ್ದು, ಇದರಿಂದಾಗಿ ವಿದ್ಯಾರ್ಥಿಗಳು ತೊಂದರೆಯನ್ನು ಅನುಭವಿಸಬೇಕಾಗುತ್ತದೆ ; ಅಲ್ಲದೆ ಇದರಿಂದಾಗಿ ಶಿಕ್ಷಣದಿಂದ ವಿದ್ಯಾರ್ಥಿಗಳು ವಂಚಿತರಾಗಬೇಕಾಗುತ್ತದೆ ; ಇವುಗಳನ್ನು ಮುಚ್ಚುವ ಬದಲು ವ್ಯವಸ್ಥಿತವಾಗಿ ನಡೆಸಲು ಸರ್ಕಾರ ಚಿಂತಿಸುವುದೇ ;

(ಆ) ಎಲ್ಲಾ ಮೂಲಭೂತ ಸೌಕರ್ಯ ಮತ್ತು ಶಿಕ್ಷಕರನ್ನು ಒದಗಿಸಿದಲ್ಲಿ ಕಾಲೇಜುಗಳಿಗೆ ಮಕ್ಕಳ ಸಂಖ್ಯೆ ಹೆಚ್ಚುತ್ತದೆ ; ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ತೆಗೆದುಕೊಂಡ ಕ್ರಮಗಳೇನು ?

## ಪಿ.ಯು. ಬೋರ್ಡ್ ಅಧಿಕಾರಿಗಳ ಬೇಜವಾಬ್ದಾರಿತನ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೨೪೩ (೨೬೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪದವಿ ಪೂರ್ವ ನಿರ್ದೇಶಕರ ಕಛೇರಿಯಲ್ಲಿ ಅಧಿಕಾರಿಗಳ ಸಿಬ್ಬಂದಿ ವರ್ಗದವರು ಬೇಜವಾಬ್ದಾರಿತನದಿಂದ ಕಾರ್ಯನಿರ್ವಹಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು ;

(ಇ) ಕಳೆದ ನಾಲ್ಕು ವರ್ಷಗಳಿಂದ ಯಾವ ಯಾವ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರ ಮೇಲೆ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರತಿಯೊಬ್ಬ ಅಧಿಕಾರಿಯು ಮತ್ತು ಸಿಬ್ಬಂದಿ ವರ್ಗದವರು ಕುಳಿತುಕೊಳ್ಳುವ ಆಸನದಲ್ಲಿ ಅವರ ಮೊಬೈಲ್ ನಂಬರನ್ನು ಬರೆದಿಡುವಂತೆ ಸೂಚಿಸಲಾಗಿದೆಯೇ ?

## ಕುಡಿಯುವ ನೀರಿನ ಘಟಕದ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೨೪೪ (೨೫೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇವುಗಳ ನಿರ್ವಹಣೆಗೆ ತಗಲುವ ವೆಚ್ಚವನ್ನು ಗ್ರಾಮ ಪಂಚಾಯಿತಿಯ ಯಾವ ಅನುದಾನದಲ್ಲಿ ನೀಡಲಾಗುತ್ತಿದೆ ; ಇವುಗಳ ನಿರ್ವಹಣೆಗೆ ಖರ್ಚು ಮಾಡಲು ಗ್ರಾಮ ಪಂಚಾಯಿತಿಯಲ್ಲಿ ವ್ಯವಸ್ಥೆ ಇದೆಯೇ ; ಇದ್ದರೆ ಯಾವ ವ್ಯವಸ್ಥೆಯಲ್ಲಿ ಇವುಗಳ ನಿರ್ವಹಣೆ ಮಾಡುತ್ತಿದೆ ; (ವಿವರ ನೀಡುವುದು)

(ಆ) ಬಹುಹಳ್ಳಿ ಕುಡಿಯುವ ನೀರಿನ ಯೋಜನೆಯ ನೀರು ಶುದ್ಧೀಕರಣ ಘಟಕಗಳ ನಿರ್ವಹಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ; ಇವುಗಳ ನಿರ್ವಹಣೆ ವೆಚ್ಚವನ್ನು ಯಾವ ಅನುದಾನದಲ್ಲಿ ನೀಡಲಾಗುತ್ತದೆ ; ಇವುಗಳ ನಿರ್ವಹಣೆಗೆ ಪ್ರತಿ ವರ್ಷ ತಗಲುವ ವೆಚ್ಚ ಎಷ್ಟು ? (ವಿವರ ನೀಡುವುದು)

## ಕುಡಚಿ ರೈಲು ಮಾರ್ಗದ ಕಾಮಗಾರಿ ವಿಳಂಬದ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೨೪೫ (೨೫೨೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟ–ಕುಡಚಿ ರೈಲು ಮಾರ್ಗದ ಕಾಮಗಾರಿಯು ನಿಧಾನಗತಿಯಿಂದ ನಡೆಯುತ್ತಿದ್ದು, ಇದರಿಂದ ಬಾಗಲಕೋಟ–ಕುಡಚಿ ಮಾರ್ಗದ ಮಧ್ಯೆ ರೈಲಿನಲ್ಲಿ ಪ್ರಯಾಣ ಮಾಡುವ ಪ್ರಯಾಣಿಕರಿಗೆ ತೀವ್ರ ತೊಂದರೆಯಾಗುತ್ತಿದೆ ಎಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಾಮಗಾರಿಯು ಇಷ್ಟೊಂದು ವಿಳಂಬವಾಗಲು ಕಾರಣವೇನು ;

(ಇ) ಈ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಿ ಈ ಭಾಗದ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಲಾಗುವುದು ; (ವಿವರವಾದ ಮಾಹಿತಿ ಒದಗಿಸುವುದು)

(ಈ) ಈ ಕಾಮಗಾರಿಗೆ ಮಂಜೂರಾದ ಅನುದಾನ ಎಷ್ಟು ? (ವಿವರವಾದ ಮಾಹಿತಿ ಒದಗಿಸುವುದು)

## ಪದವಿ ಪೂರ್ವ ಕಾಲೇಜು ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೨೪೬ (೨೬೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದಿಂದ ಮಂಜೂರಾದ ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿಲ್ಲದೆ ಖಾಸಗಿ ಕಟ್ಟಡಗಳಲ್ಲಿ ಅಥವಾ ಬೇರೆ ಬೇರೆ ವ್ಯವಸ್ಥೆಯಲ್ಲಿ ಎಷ್ಟು ಕಾಲೇಜುಗಳು ನಡೆಯುತ್ತಿವೆ ; (ವಿವರ ನೀಡುವುದು)

(ಆ) ಈ ರೀತಿಯಾಗಿ ಸ್ವಂತ ಕಟ್ಟಡಗಳು ಇಲ್ಲದಿರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ಶೀಘ್ರವಾಗಿ ಸ್ವಂತ ಕಟ್ಟಡ ನಿರ್ಮಾಣ ಮಾಡಿ ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರ ಯಾವ ಯಾವ ಕ್ರಮ ಜರುಗಿಸುತ್ತಿದೆ ; (ವಿವರ ನೀಡುವುದು)

(ಉ) ಇದರಿಂದಾಗಿ ವಿದ್ಯಾರ್ಥಿಗಳ ಶಿಕ್ಷಣ ಕುಂಠಿತವಾಗಿ ವಿದ್ಯಾಥಿಗಳು ಆತಂಕದಲ್ಲಿರುವುದು ನಿಜವೇ ?

## ಶುದ್ಧ ಕುಡಿಯುವ ನೀರಿನ ಕಾಮಗಾರಿಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೪೭ (೨೫೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು/ ಗ್ರಾಮವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಕಾಮಗಾರಿ ಮುಗಿದ ಘಟಕಗಳ ಸಂಖ್ಯೆ ಎಷ್ಟು ಹಾಗೂ ಮುಗಿಯದೇ ಇರುವ ಘಟಕಗಳ ಸಂಖ್ಯೆ ಎಷ್ಟು ; ಕಾಮಗಾರಿ ಮುಗಿದ ಘಟಕಗಳ ಪೈಕಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಕಾರ್ಯನಿರ್ವಹಿಸದೆ ಇರುವ ಘಟಕಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು/ಗ್ರಾಮವಾರು ಮಾಹಿತಿ ನೀಡುವುದು)

(ಇ) ಕಾರ್ಯನಿರ್ವಹಿಸದೆ ಇರಲು ಕಾರಣಗಳೇನು ; ಕುಡಿಯುವ ನೀರಿನ ಘಟಕ ನಿರ್ಮಿಸಿ ಜನರಿಗೆ ಉಪಯೋಗವಾಗದೆ ಸರ್ಕಾರಿ ಹಣ ಪೋಲು ಮಾಡಿರುವವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಯಾವ ಕಂಪನಿಯವರಿಗೆ ಟೆಂಡರ್ ನೀಡಲಾಗಿದೆ ; ಯಾವ ಮಾನದಂಡನೆಗಳ ಆಧಾರದ ಮೇಲೆ ಟೆಂಡರ್ ನೀಡಲಾಗಿದೆ ; ಒಟ್ಟಾರೆ, ಯೋಜನೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ? (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ಮಾಹಿತಿ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಿಕ್ಷಕರ ಮತ್ತು ಕಂಪ್ಯೂಟರ್ ತರಬೇತಿ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೪೮ (೨೬೦೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಿಕ್ಷಕರಿಗೆ ಇಂದಿನ ಶಿಕ್ಷಣ ಗುಣಮಟ್ಟಕ್ಕೆ ತಕ್ಕಂತೆ ಪಾಠ ಪ್ರವಚನಗಳನ್ನು ಮಾಡಲು ಹೆಚ್ಚಿನ ತರಬೇತಿಯನ್ನು ನೀಡಲಾಗುತ್ತಿದೆಯೇ ; ಈ ಬಗ್ಗೆ ತರಬೇತಿ ಪಡೆದ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ವ್ಯಾಪ್ತಿಗೆ ಒಳಪಡುವ ಶಿಕ್ಷಕರಿಗೆ ಕಂಪ್ಯೂಟರ್ ತರಬೇತಿಯನ್ನು ನೀಡಲಾಗುತ್ತಿದೆಯೇ ; ತರಬೇತಿ ಪಡೆದ ಶಿಕ್ಷಕರೆಷ್ಟು ; (ವಿವರ ನೀಡುವುದು) ಮತ್ತು ಎಲ್ಲಾ ಖಾಸಗಿ ಮತ್ತು ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೋಸ್ಕರ ಕಂಪ್ಯೂಟರ್ ತರಬೇತಿ ನೀಡಲು ಕಂಪ್ಯೂಟರ್‌ಗಳನ್ನು ಸರ್ಕಾರದ ವತಿಯಿಂದ ಒದಗಿಸಲಾಗಿದೆಯೇ ? (ಜಿಲ್ಲಾವಾರು ವಿವರ ನೀಡುವುದು)

## ಪ್ರಥಮ ದರ್ಜೆ ಕಾಲೇಜಿನ ಸರ್ಕಾರಿ/ಖಾಸಗಿ ಉಪನ್ಯಾಸಕರ ಶೈಕ್ಷಣಿಕ ಗುಣಮಟ್ಟ ಮತ್ತು ಚಟುವಟಿಕೆಗಳ ವಿದ್ಯಾರ್ಥಿಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೪೯ (೨೬೦೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸರ್ಕಾರಿ/ ಖಾಸಗಿ ಉಪನ್ಯಾಸಕರುಗಳು ಕರ್ತವ್ಯಕ್ಕೆ ಹಾಜರಾಗಿ ಸಮಯಕ್ಕೆ ಸರಿಯಾಗಿ ವಿದ್ಯಾರ್ಥಿಗಳಿಗೆ ಪಾಠ ಪ್ರವಚನವನ್ನು ಮಾಡಲು CCTV ಅಳವಡಿಸುವ ಯೋಜನೆ ಸರ್ಕಾರದ ಮುಂದಿದೆಯೇ;

(ಆ) ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕರ ಶೈಕ್ಷಣಿಕ ಗುಣಮಟ್ಟ ಸುಧಾರಿಸಲು ಇಲಾಖಾ ವತಿಯಿಂದ ಕ್ರಮ ಕೈಗೊಳ್ಳಲಾಗುತ್ತಿದೆಯೇ;

(ಇ) ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪಠ್ಯೇತರ ಚಟುವಟಿಕೆಗಳಿಗೆ ಕಾಲೇಜು ನಡೆಯುವ ಪ್ರತಿ ದಿನ ಎಷ್ಟು ಸಮಯ ನಿಗಧಿಪಡಿಸಿದೆ;

(ಈ) ಪ್ರತಿಯೊಬ್ಬ ಪದವಿ ಪೂರ್ವ ಕಾಲೇಜು ಉಪನ್ಯಾಸಕರಿಗೆ ಪ್ರತಿದಿನ ಪಾಠ ಮಾಡುವ ಸಮಯವನ್ನು ಎಷ್ಟು ಗಂಟೆಗಳಿಗೆ ನಿಗದಿಪಡಿಸಲಾಗಿದೆ? (ವಿವರ ನೀಡುವುದು)

## ಬೃಹತ್ ಕೈಗಾರಿಕೆಗಳ ವಿವರಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೫೦ (೨೬೦೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬೃಹತ್ ಕೈಗಾರಿಕೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು) ಕೇಂದ್ರ ಮತ್ತು ರಾಜ್ಯ ಸಂಪರ್ಕಗಳ ವತಿಯಿಂದ ನಡೆಸಲ್ಪಡುತ್ತಿರುವ ಬೃಹತ್ ಕೈಗಾರಿಕೆಗಳೆಷ್ಟು; (ಸಂಪೂರ್ಣ ವಿವರವನ್ನು ನೀಡುವುದು)

(ಆ) ಈಗಾಗಲೇ ಖಾಸಗಿ ಕಂಪನಿಯವರು ಕೈಗಾರಿಕೆಗಳನ್ನು ಸ್ಥಾಪಿಸಲು ಪಡೆದಿರುವ ಭೂಮಿ ಎಷ್ಟು; (ವಿವರ ಹಾಗೂ ಕಂಪನಿಯ ಉದ್ದೇಶದೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೇಂದ್ರ/ರಾಜ್ಯ ಸರ್ಕಾರದ ವತಿಯಿಂದ ನಡೆಸಲ್ಪಡುತ್ತಿರುವ ಬೃಹತ್ ಉದ್ದಿಮೆಗಳು ಲಾಭದಲ್ಲಿ ನಡೆಯುತ್ತಿವೆಯೇ; ಇಲ್ಲದಿದ್ದಲ್ಲಿ, ನಷ್ಟದಲ್ಲಿ ನಡೆಯುತ್ತಿರುವ ಉದ್ದಿಮೆಗಳೆಷ್ಟು; (ವಿವರಗಳನ್ನು ಜಿಲ್ಲಾವಾರು ನೀಡುವುದು)

(ಈ) KIADB ವತಿಯಿಂದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಉದ್ದಿಮೆಗಳನ್ನು ಸ್ಥಾಪಿಸಲು ಭೂಮಿಯನ್ನು (ಜಮೀನು) ಪಡೆದಿರುವ ಕಂಪನಿಗಳೆಷ್ಟು ; (ಸಂಪೂರ್ಣ ವಿವರ ನೀಡುವುದು) ಈಗಾಗಲೇ ಕೈಗಾರಿಕೆಗಳನ್ನು ಸ್ಥಾಪಿಸುವ ಸಂಬಂಧ ಭೂಮಿಯನ್ನು ಪಡೆದು ಇದುವರೆವಿಗೂ ಉದ್ದಿಮೆಗಳನ್ನು ಸ್ಥಾಪಿಸದೆ ಇರುವ ಕಂಪನಿಗಳೆಷ್ಟು ; (ವಿವರಗಳನ್ನು ಜಿಲ್ಲಾವಾರು ನೀಡುವುದು)

## ಪಿಡಿಓ ಹುದ್ದೆಯನ್ನು "ಗ್ರೂಪ್ ಬಿ" ಹುದ್ದೆಗೆ ಉನ್ನತೀಕರಿಸುವ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೫೧ (೨೪೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಓ) "ಗ್ರೂಪ್ ಬಿ" ಗೆಜೆಟೆಡ್ ಹುದ್ದೆಗೆ ಉನ್ನತೀಕರಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ;

(ಆ) ಹಾಗಿದ್ದಲ್ಲಿ, ಈ ಕುರಿತು ಘನ ಆಯೋಗಕ್ಕೆ ಶಿಫಾರಸ್ಸು ಮಾಡಲಾಗಿದೆಯೇ; ಇಲ್ಲವಾದಲ್ಲಿ ಯಾವಾಗ ಮಾಡಲಾಗುವುದು;

(ಇ) ಪಿಡಿಓ ಹುದ್ದೆಯನ್ನು "ಗ್ರೂಪ್ ಬಿ" ಹುದ್ದೆಗೆ ಉನ್ನತೀಕರಿಸಲು ಸರ್ಕಾರ ತೀರ್ಮಾನ ಕೈಗೊಂಡಿದ್ದು, ಯಾವ ಕಾಲಮಿತಿಯಲ್ಲಿ ಅಧಿಕೃತ ಆದೇಶ ಹೊರಡಿಸಿ ಪಿಡಿಓ ಹುದ್ದೆಯನ್ನು "ಗ್ರೂಪ್ ಬಿ" ಹುದ್ದೆಗೆ ಉನ್ನತೀಕರಿಸಲಾಗುವುದು ? (ವಿವರ ನೀಡುವುದು)

## ಖಾಸಗಿಯಾಗಿ ಮನೆ ಪಾಠ ಮಾಡುತ್ತಿರುವ ಬಗ್ಗೆ ಮಾಹಿತಿ ನೀಡುವುದು

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೨೨೫೨ (೨೫೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಹಂತದಿಂದ ಪದವಿ ಪೂರ್ವ ಶಿಕ್ಷಣದವರೆಗೆ ಶಿಕ್ಷಕರು ವಿದ್ಯಾರ್ಥಿಗಳಿಗೆ ಮನೆ ಪಾಠ ಮಾಡುತ್ತಿರುವುದು ಶಿಕ್ಷಣ ಇಲಾಖೆಯ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಅಧಿಕೃತವಾಗಿ ಮತ್ತು ಅನಧಿಕೃತವಾಗಿ ಮನೆ ಪಾಠ ಮಾಡುತ್ತಿರುವ ಸಂಸ್ಥೆಗಳೆಷ್ಟು ; (ವಿವರ ನೀಡುವುದು)

(ಇ) ಮನೆ ಪಾಠ ಮಾಡಲು ಅನುಮತಿ ನೀಡುವ ಬಗ್ಗೆ ಶಿಕ್ಷಣ ಇಲಾಖೆಯಿಂದ ನಿಯಮಗಳನ್ನು ರೂಪಿಸಲಾಗಿದೆಯೇ; (ವಿವರ ನೀಡುವುದು)

(ಈ) ಕಾನೂನುಬದ್ಧವಾಗಿ ಮನೆ ಪಾಠ ಮಾಡಲು ಅನುಮತಿ ನೀಡುವ ಬಗ್ಗೆ ಶಿಕ್ಷಣ ಇಲಾಖೆಯ ನಿಯಮಗಳಲ್ಲಿ ಅವಕಾಶ ಮಾಡಲಾಗಿದೆಯೇ; (ವಿವರ ನೀಡುವುದು)

(ಉ) ಅನುಮತಿ ಪಡೆಯದೆ ಇದ್ದಲ್ಲಿ ಮನೆ ಪಾಠ ಮಾಡಲು ಅನುಮತಿ ನೀಡಲಾಗುವುದೇ; ಶಿಕ್ಷಣ ಇಲಾಖೆಯಿಂದ ನಿಯಮ ರೂಪಿಸಿ ಅನುಮತಿ ನೀಡಲಾಗುವುದೇ ? (ವಿವರ ನೀಡುವುದು)

# ಲೋಕ ಶಿಕ್ಷಣ ಇಲಾಖೆಯ ಕಾರ್ಯಕ್ರಮಗಳ ಮಾಹಿತಿ ವಿವರ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೨೨೫೩ (೨೫೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಲೋಕ ಶಿಕ್ಷಣ ಇಲಾಖೆಗೆ ಕಳೆದ ೫ ವರ್ಷಗಳಿಂದ ಮಂಜೂರಾಗಿರುವ ರಾಜ್ಯ ಮತ್ತು ಕೇಂದ್ರ ಸರ್ಕಾರದ ಅನುದಾನವೆಷ್ಟು; (ಜಿಲ್ಲಾವಾರು ಕಾರ್ಯಕ್ರಮಗಳಿಗೆ ಬಳಕೆಯಾಗಿರುವ ಹಣದ ಬಗ್ಗೆ ವಿವರ ನೀಡುವುದು)

(ಆ) ೨೦೧೭–೧೮ನೇ ಸಾಲಿನಲ್ಲಿ ಜಿಲ್ಲಾ ವಲಯದಡಿ ಜಿಲ್ಲಾ ಪಂಚಾಯ್ತಿಯ ಲಿಂಕ್ ಡಾಕ್ಯುಮೆಂಟ್ ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ಕಾರ್ಯಕ್ರಮವಾರು ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯ ವಲಯದಿಂದ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಸ್ಥಗಿತಗೊಳಿಸಲಾಗಿದೆಯೇ; (ಕಾರಣ ನೀಡುವುದು)

(ಈ) ಲೋಕ ಶಿಕ್ಷಣ ಇಲಾಖೆ ವ್ಯಾಪ್ತಿಯ ನವಸಾಕ್ಷರ ಪುರುಷ ಮಹಿಳೆಯರಿಗೆ ನೀಡಲಾಗುತ್ತಿರುವ ವೃತ್ತಿ ಕೌಶಲ್ಯ ತರಬೇತಿಗಳನ್ನು ಸ್ಥಗಿತಗೊಳಿಸಲಾಗಿದೆಯೇ; ಇದಕ್ಕೆ ಕಾರಣಗಳೇನು ; (ಆದೇಶ ಸಹಿತ ವಿವರ ನೀಡುವುದು)

(ಉ) ಲೋಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿರುವ ವಿದ್ಯಾಪೀಠಗಳೆಷ್ಟು; ವಿದ್ಯಾಪೀಠಗಳ ಹೆಸರಿನಲ್ಲಿರುವ ಚರಾಸ್ತಿ ಮತ್ತು ಸ್ಥಿರಾಸ್ತಿಯ ವಿವರ ನೀಡುವುದು; ಸದರಿ ಆಸ್ತಿಗಳು ಯಾರ ಅಧೀನದಲ್ಲಿವೆ; ಅವುಗಳ ವಾಸ್ತವಿಕ ಸ್ಥಿತಿಗತಿಯ ಬಗ್ಗೆ ಮಾಹಿತಿ ನೀಡುವುದು ? (ಹೆಸರು ವಿಳಾಸ ಸಹಿತ ವಿವರ ನೀಡುವುದು)

## ಅನುದಾನಿತ ಶಾಲಾ ಕಾಲೇಜುಗಳ ಮಾಹಿತಿ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೨೨೫೪ (೨೫೧೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಉತ್ತರ ಜಿಲ್ಲೆ, ದಕ್ಷಿಣ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ರಾಮನಗರ ಜಿಲ್ಲೆಗಳಲ್ಲಿರುವ ಅನುದಾನಿತ ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಹೆಸರು ವಿಳಾಸದೊಡನೆ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವಿಷಯವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಶಾಲಾ ಕಾಲೇಜುಗಳಲ್ಲಿ ನಿವೃತ್ತಿ, ಮರಣ ಇತ್ಯಾದಿ ಕಾರಣಗಳಿಂದ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಸದರಿ ಹುದ್ದೆಗಳು ಖಾಲಿ ಇರುವುದರಿಂದ ಸದರಿ ಶಾಲೆಗಳಲ್ಲಿ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಾದರೆ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡುವುದೇ ; ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುವುದು ?

## ಸ್ಥಾನೀಕರಣ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

*೨೨೫೫* (೨೫೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುಪ್ರೀಂ ಕೋರ್ಟ್, ಹೈಕೋರ್ಟ್ ಹಾಗೂ ಕೆ.ಎ.ಟಿ. ಆದೇಶದಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸಿ ಖಾಯಂಗೊಂಡ ಉಪನ್ಯಾಸಕರು ಹಾಗೂ ಪ್ರಾಂಶುಪಾಲರಿಗೆ ಸ್ಥಾನೀಕರಣ ಸೌಲಭ್ಯ ಇದುವರೆಗೆ ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಆ) ಸುಪ್ರೀಂ ಕೋರ್ಟ್, ಹೈಕೋರ್ಟ್ ಹಾಗೂ ಕೆ.ಎ.ಟಿ. ಆದೇಶದಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದಲ್ಲಿ ಖಾಯಂಗೊಂಡ ಉಪನ್ಯಾಸಕರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸ್ಥಾನೀಕರಣ ಸೌಲಭ್ಯ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸ್ಥಾನೀಕರಣ ಸೌಲಭ್ಯ ನೀಡಲು ಆರ್ಥಿಕ ಇಲಾಖೆ ಒಪ್ಪಿಗೆ ನೀಡಿದ್ದು, ಸರ್ಕಾರಿ ಪದವಿ ಕಾಲೇಜುಗಳಿಗೆ ವಿಸ್ತರಿಸಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರಿಗೆ ವಿಸ್ತರಿಸದಿರಲು ಇರುವ ಸಮಸ್ಯೆಗಳೇನು;

(ಈ) ಸದರಿ ಉಪನ್ಯಾಸಕರಿಗೆ ಸ್ಥಾನೀಕರಣ ಸೌಲಭ್ಯವನ್ನು ನೀಡಲಾಗುವುದೇ; ಯಾವ ಕಾಲಮಿತಿಯಲ್ಲಿ ಸೌಲಭ್ಯ ನೀಡಲಾಗುವುದು? (ವಿವರ ನೀಡುವುದು)

## ೧೯೯೪-೯೫ನೇ ಸಾಲಿನವರೆಗಿನ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೨೨೫೬ (೨೫೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೧೯೮೬-೮೭ ರಿಂದ ೧೯೯೪-೯೫ನೇ ಸಾಲಿನಲ್ಲಿ ಪ್ರಾರಂಭವಾಗಿರುವ ಅನುದಾನರಹಿತ ಪ್ರಾಥಮಿಕ ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳೆಷ್ಟು ; (ಹೆಸರು ವಿಳಾಸ ಸಹಿತ ವಿವರ ನೀಡುವುದು)

(ಆ) ಈ ಅವಧಿಯಲ್ಲಿ ಪ್ರಾರಂಭವಾಗಿರುವ ಅನುದಾನರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರದಿಂದ ಎಷ್ಟು ಆದೇಶಗಳಾಗಿವೆ; (ಆದೇಶಗಳೊಡನೆ ವಿವರ ನೀಡುವುದು)

(ಇ) ಸದರಿ ಸಾಲಿನಲ್ಲಿ ಪ್ರಾರಂಭವಾಗಿರುವ ಶಾಲಾ ಕಾಲೇಜುಗಳಲ್ಲಿ ಇದುವರೆಗೆ ಎಷ್ಟು ಶಾಲೆಗಳನ್ನು ವೇತನಾನುದಾನಕ್ಕೊಳಪಡಿಸಲಾಗಿದೆ; (ಹೆಸರು ವಿಳಾಸ ಸಹಿತ ವಿವರ ನೀಡುವುದು)

(ಈ) ವೇತನಾನುದಾನಕ್ಕೆ ಒಳಪಡಿಸದೇ ಇರುವ ಶಾಲಾ ಕಾಲೇಜುಗಳೆಷ್ಟು; ಇದುವರೆಗೆ ವೇತನಾನುದಾನಕ್ಕೆ ಒಳಪಡಿಸದೆ ಇರಲು ಕಾರಣಗಳೇನು; (ವಿವರ ನೀಡುವುದು)

(ಉ) ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಇರುವ ಕಾಲಮಿತಿಯೇನು?

## ಕೊಳಚೆ ಪ್ರದೇಶಗಳ ಅಭಿವೃದ್ಧಿ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೫೭ (೨೫೪೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನಲ್ಲಿ ಕೊಳಚೆ ಸುಧಾರಣೆ ಯೋಜನೆಯಡಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಗುರುತಿಸಲಾಗಿರುವ ಕೊಳಚೆ ಪ್ರದೇಶಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪೂರ್ಣ ವಿವರ ನೀಡುವುದು)

(ಆ) ಸದರಿ ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ ನೀಡಲಾಗಿರುವ ಅನುದಾನ ಎಷ್ಟು; ಯಾವ ಲೆಕ್ಕಶೀರ್ಷಿಕೆಯಡಿ ನೀಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಈ ಮೂರು ಜಿಲ್ಲೆಗಳಲ್ಲಿ ಕೊಳಚೆ ಪ್ರದೇಶ ಮುಕ್ತ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ನಿಗಧಿಪಡಿಸಿರುವ ಕಾಲಮಿತಿ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ವಸತಿ ಯೋಜನೆಗಳು ವಿಳಂಬವಾಗುತ್ತಿರುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೫೮ (೨೫೫೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಪ್ರದೇಶದ ಜನರಿಗೆ ಸರ್ಕಾರ ಗ್ರಾಮ ಪಂಚಾಯತ್‌ಗಳಿಂದ ನೀಡಲಾಗುತ್ತಿರುವ ವಿವಿಧ ವಸತಿ ಯೋಜನೆಯ ಮನೆಗಳನ್ನು ನಿರ್ಮಿಸಿಕೊಳ್ಳಲು ಮರಳಿನ ತೊಂದರೆಯಾಗುತ್ತಿರುವುದು ವಸತಿ ಇಲಾಖೆಯ ಗಮನಕ್ಕೆ ಬಂದಿದೆಯೇ;

(ಆ) ಈ ಸಮಸ್ಯೆ ಪರಿಹರಿಸಲು ವಸತಿ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳೇನು;

(ಇ) ವಸತಿ ಯೋಜನೆಗಳ ನಿರ್ಮಾಣ ಕಾರ್ಯ ವಿಳಂಬವಾಗಿರುವ ಕಾರಣ ಇದರ ಕಾಲಮಿತಿಯನ್ನು ವಿಸ್ತರಿಸಲಾಗಿದೆಯೇ;

(ಈ) ಆಗಿದ್ದಲ್ಲಿ, ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು?

## ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಯೋಜನೆಯ ಕಾಮಗಾರಿಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೫೯ (೨೫೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಯೋಜನೆಯಡಿ ಪೂರ್ಣಗೊಂಡ ಹಾಗೂ ಚಾಲ್ತಿಯಲ್ಲಿರುವ ಕಾಮಗಾರಿಗಳು ಯಾವುವು ? (ಜಿಲ್ಲಾ, ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕೆ ಅಭಿವೃದ್ಧಿಗಾಗಿ ಕ್ರಿಯಾ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೦ (೨೫೪೭) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಸರ್ಕಾರವು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಭಾಗದ ಸಣ್ಣ ಕೈಗಾರಿಕಾ ವಲಯಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಂಜೂರು ಮಾಡಿರುವ ಅನುದಾನದ ಮೊತ್ತವೆಷ್ಟು ; (ಜಿಲ್ಲಾ, ವರ್ಷವಾರು ವಿವರ ನೀಡುವದು)

(ಇ) ಹಾಗಿದ್ದಲ್ಲಿ, ಈ ಭಾಗದ ಸಣ್ಣ ಕೈಗಾರಿಕೆಗಳ ಪ್ರಮಾಣವನ್ನು ಹೆಚ್ಚಿಸುವ ಕುರಿತು ಸರ್ಕಾರದ ಕ್ರಿಯಾ ಯೋಜನೆಗಳಾವುವು ; ಈಗಾಗಲೇ ಚಾಲ್ತಿಯಲ್ಲಿರುವ ಯೋಜನೆಗಳು ಯಾವುವು ? (ಸಂಪೂರ್ಣ ವಿವರ ನೀಡುವುದು)

## ವಸತಿ ಯೋಜನೆಯ ಫಲಾನುಭವಿಗಳ ಆಯ್ಕೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೧ (೨೫೫೧) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿ ಆಧಾರದ ಮೇಲೆ ವಸತಿ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತಿದ್ದು, ಈ ಪ್ರಕ್ರಿಯೆ ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಹಾಲಿ ಯಾವ ಹಂತದಲ್ಲಿದೆ ? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ಮರಳು ಗಣಿಗಾರಿಕೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೨ (೨೫೬೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಮರಳು ಗಣಿಗಾರಿಕೆಯನ್ನು ಲೋಕೋಪಯೋಗಿ ಇಲಾಖಾಯಿಂದ ಗಣಿ ಭೂವಿಜ್ಞಾನ ಇಲಾಖೆಗೆ ಹಸ್ತಾಂತರಿಸಲಾಗಿದೆ ಎಂದು ತಿಳಿದು ಬಂದಿದ್ದು; ಇದರ ಆದೇಶ ಪ್ರತಿ ಮತ್ತು ಸಂಪೂರ್ಣ ಕ್ರಮಗಳ ಬಗ್ಗೆ ವಿವರ ನೀಡುವುದು ;

(ಆ) ರಾಜ್ಯಾದಾದ್ಯಂತ ಲೊಕೋಪಯೋಗಿ ಇಲಾಖೆಯಲ್ಲಿ ಕಳೆದ ೦೪ ವರ್ಷಗಳಲ್ಲಿ ಮರಳು ಗಣಿಗಾರಿಕೆಯಿಂದ ವಸೂಲಾಗಿರುವ ರಾಜಸ್ವ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬಸವನಹಳ್ಳಿ ಸರ್ಕಾರಿ ಪದವಿಪೂರ್ವ ಕಾಲೇಜು ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೩ (೨೬೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ನಗರದ ಬಸವನಹಳ್ಳಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೆ, ಯಾವ ಯಾವ ಹುದ್ದೆಗಳಿಗೆ ಉಪನ್ಯಾಸಕರ ಕೊರತೆ ಇದೆ ; ಈ ಕುರಿತು ಸರ್ಕಾರದ ಕ್ರಮವೇನು ;

(ಆ) ಚಿಕ್ಕಮಗಳೂರು ನಗರದ ಬಸವನಹಳ್ಳಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಹಾಸನ ಜಿಲ್ಲೆಯ ಅರಸೀಕೆರೆ ನಗರದ ಪದವಿ ಪೂರ್ವ ಕಾಲೇಜಿನಲ್ಲಿ ಇರುವ ಹೆಚ್ಚುವರಿ ಹುದ್ದೆಯ ಉಪನ್ಯಾಸಕರನ್ನು ವರ್ಗಾವಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಸರ್ಕಾರ ಈ ಕುರಿತು ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಮಿಷಿನ್ ಅಳವಡಿಸುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೪ (೨೬೩೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಯೋಜನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಆ) ಇಲ್ಲಿಯವರೆಗೆ ಚಿಕ್ಕಮಗಳೂರು ಜಿಲ್ಲೆಯ ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ ; (ವಿವರ ನೀಡುವುದು)

(ಇ) ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಬಗ್ಗೆ ಗ್ರಾಮೀಣಾಭಿವೃದ್ಧಿ ಇಲಾಖೆ ಯಾವುದಾದರೂ ಆದೇಶ ಮಾಡಿದೆಯೇ ? (ವಿವರ ನೀಡುವುದು)

## ರಾಜ್ಯದ ಮಸೀದಿ ಮತ್ತು ಚರ್ಚ್‌ಗಳಿಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೫ (೨೬೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಸಂಗ್ರಹಿಸಿದ ರಾಜ್ಯಸ್ವ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ನಾಲ್ಕು ವರ್ಷಗಳಲ್ಲಿ ರಾಜ್ಯದ ಎಷ್ಟು ಮಸೀದಿಗಳಿಗೆ, ಚರ್ಚ್‌ಗಳಿಗೆ ಅನುದಾನ ನೀಡಲಾಗಿದೆ ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ನಾಲ್ಕು ವರ್ಷಗಳಲ್ಲಿ ರಾಜ್ಯದ ಎಷ್ಟು ಹೊಸ ಮಸೀದಿ ಮತ್ತು ಹೊಸ ಚರ್ಚ್‌ಗಳ ಸ್ಥಾಪನೆಗೆ ಅನುದಾನ ನೀಡಲಾಗಿದೆ? (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

## ಗ್ರಾಮ ಠಾಣಾಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೬ (೨೬೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಆ) ರಾಜ್ಯದಲ್ಲಿ ಗ್ರಾಮ ಠಾಣಾ ವ್ಯಾಪ್ತಿಯನ್ನು ನಿಗಧಿಪಡಿಸಿದ್ದು ಯಾವಾಗ;

(ಆ) ಗ್ರಾಮಗಳ ವ್ಯಾಪ್ತಿಯ ಬಹಳಷ್ಟು ವಿಸ್ತರಿಸಿರುವುದರಿಂದ ಹಳೆಯ ಗ್ರಾಮ ಠಾಣಾ ವ್ಯಾಪ್ತಿಯನ್ನು ಮಾನದಂಡವನ್ನಾಗಿಟ್ಟುಕೊಂಡ ಗ್ರಾಮ ಪಂಚಾಯಿತಿಗಳಲ್ಲಿ ಆಸ್ತಿ ದಾಖಲೆಗಳನ್ನು ವಿತರಿಸಬೇಕಾಗಿರುವುದರಿಂದ ಜನರಿಗೆ ತುಂಬಾ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಗ್ರಾಮ ಠಾಣಾ ವ್ಯಾಪ್ತಿಯನ್ನು ಮರುನಿಗಧಿಪಡಿಸಲು ಕ್ರಮ ಕೈಗೊಳ್ಳಲಾಗುವುದೆ ಹಾಗಿದ್ದರೆ, ಈ ಬಗ್ಗೆ ಯಾವಾಗ ಕ್ರಮ ಕೈಗೊಳ್ಳಲಾಗುವುದು ? (ವಿವರ ಒದಗಿಸುವುದು)

## ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದ ಬಗ್ಗೆ

**ಶ್ರೀ ಬಿ.ಜೆ.ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೬೭ (೨೬೩೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ “ಇನ್ವೆಸ್ಟ್ ಕರ್ನಾಟಕ” ನಡೆದಿರುವುದು ನಿಜವೇ ;

(ಆ) ಹಾಗಿದ್ದರೆ, ರಾಜ್ಯದಲ್ಲಿ ನಡೆದಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶಗಳಲ್ಲಿ ಆದಂತಹ ಒಪ್ಪಂದಗಳು ಯಾವುವು ; ಹೂಡಿಕೆಯ ಮೊತ್ತ ಎಷ್ಟು ; ಉದ್ಯೋಗ ಎಷ್ಟು ; (ವಲಯವಾರು ಪ್ರತ್ಯೇಕ ವಿವರ ನೀಡುವುದು)

(ಇ) ಸದರಿ ಬಂಡವಾಳ ಹೂಡಿಕೆಯ ಸಮಾವೇಶದಿಂದ ರಾಜ್ಯಕ್ಕೆ ಆದಂತಹ ಪ್ರಗತಿ ಏನು ; (ಬಂಡವಾಳ ಹೂಡಿಕೆ, ಉದ್ಯೋಗ ಎಷ್ಟು ; ವಲಯಗಳ ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಇನ್ವೆಸ್ಟ್ ಕರ್ನಾಟಕ ಮುಖಾಂತರ ರಾಜ್ಯದಲ್ಲಿ ನೂತನವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಸ್ಥಾಪನೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರವನ್ನು ನೀಡುವುದು)

## ವಸತಿ ರಹಿತರಿಗೆ ಕೇಂದ್ರ ಸರ್ಕಾರ ಅನುದಾನ ಮಂಜೂರು ಮಾಡಿರುವ ಬಗ್ಗೆ

**ಶ್ರೀ ಬಿ.ಜೆ.ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೬೮ (೨೬೩೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಸತಿ ರಹಿತರಿಗೆ ಕೇಂದ್ರ ಸರ್ಕಾರ ೮.೬ ಲಕ್ಷ ಮನೆಗಳ ನಿರ್ಮಾಣಕ್ಕೆ ಮಂಜೂರಾತಿ ನೀಡಿ ಸುಮಾರು ₹. ೨.೧೬೯ ಕೋಟಿ ಅನುದಾನ ಮಂಜೂರು ಮಾಡಿರುವುದು ನಿಜವೇ ;

(ಆ) ಹಾಗಿದ್ದರೆ, ಅದರಲ್ಲಿ ವರ್ಷಾವಾರು ನಿಗಧಿಪಡಿಸಿದ ಮನೆಗಳ ಸಂಖ್ಯೆ ಎಷ್ಟು ನಿರ್ಮಾಣ ಮಾಡಿದ ಮನೆಗಳ ಸಂಖ್ಯೆ ಎಷ್ಟು ; ಖರ್ಚು ಮಾಡಿದ ಹಣ ಎಷ್ಟು ? (ವರ್ಷವಾರು, ಮನೆಗಳ ಸಂಖ್ಯೆ, ಖರ್ಚು ಮಾಡಿದ ಹಣದ ವಿವರ ನೀಡುವುದು)

## ಕ್ಷೀರ ಭಾಗ್ಯದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೪೯ (೨೫೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕ್ಷೀರಭಾಗ್ಯ ಯೋಜನೆಯಡಿಯಲ್ಲಿ ಮಕ್ಕಳಿಗೆ ಉಚಿತ ಹಾಲು ನೀಡುವ ಮೂಲಕ ಪೌಷ್ಠಿಕಾಂಶ ಕೊರತೆ ನಿವಾರಣೆ ಮಾಡುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ೨೦೧೩–೧೪ ರಿಂದ ೨೦೧೬–೧೭ರವರೆಗೆ ರಾಜ್ಯದಲ್ಲಿ ಪೌಷ್ಠಿಕಾಂಶ ಕೊರತೆಯಿಂದ ಮಕ್ಕಳು ಮರಣ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವರ್ಷಾವಾರು ಮರಣ ಹೊಂದಿದ ಮಕ್ಕಳ ವಿವರ ನೀಡುವುದು)

(ಇ) ಪೌಷ್ಠಿಕಾಂಶ ಕೊರತೆಯನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಸ್ವಚ್ಛ ಭಾರತ ಯೋಜನೆಯಡಿಯಲ್ಲಿನ ಗ್ರಾಮೀಣ ಶೌಚಾಲಯದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೭೦ (೨೬೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ವಚ್ಛ ಭಾರತ ಯೋಜನೆಯಡಿ ಗ್ರಾಮೀಣ ಪ್ರದೇಶದಲ್ಲಿ ಮನೆಗೊಂದು ಶೌಚಾಲಯ ಯೋಜನೆ ಜಾರಿಯಲ್ಲಿರುವುದು ನಿಜವೇ ;

(ಆ) ಹಾಗಿದ್ದರೆ, ಈ ಯೋಜನೆಯಡಿ ೨೦೧೩-೧೪ ರಿಂದ ಇದುವರೆವಿಗೆ ನಿರ್ಮಾಣ ಮಾಡಿರುವ ಶೌಚಾಲಯಗಳ ಸಂಖ್ಯೆ ಎಷ್ಟು ; ಖರ್ಚು ಮಾಡಿರುವ ಹಣದ ಮೊತ್ತ ಎಷ್ಟು ? (ವರ್ಷಾವಾರು ವಿವರ ನೀಡುವುದು)

(ಇ) ಈ ಯೋಜನೆಗೆ ಕೇಂದ್ರ ಸರ್ಕಾರದ ಪಾಲು ಎಷ್ಟು ; ರಾಜ್ಯ ಸರ್ಕಾರದ ಪಾಲು ಇದ್ದರೆ ಅದರ ಪಾಲು ಎಷ್ಟು ; ೨೦೧೩-೧೪ ರಿಂದ ಇದುವರೆವಿಗೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣ ಎಷ್ಟು ; ಖರ್ಚು ಮಾಡಿರುವ ಹಣ ಎಷ್ಟು ; ಬಾಕಿ ಉಳಿದಿರುವ ಹಣ ಎಷ್ಟು ? (ಪೂರ್ಣ ವಿವರ ನೀಡುವುದು)

**ವಸತಿ ರಹಿತರಿಗೆ ಸರ್ಕಾರ ಮನೆಗಳ ನಿರ್ಮಾಣ ಮಾಡುವ ಬಗ್ಗೆ**

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೭೧ (೨೬೩೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಸತಿ ರಹಿತರಿಗೆ ಸರ್ಕಾರ ಮನೆಗಳನ್ನು ನಿರ್ಮಾಣ ಮಾಡುತ್ತಿರುವುದು ಹಾಗೂ ಮನೆಗಳ ನಿರ್ಮಾಣಕ್ಕೆ ಅನುದಾನ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದರೆ, ೨೦೧೩-೧೪ ರಿಂದ ಇದುವರೆವಿಗೆ ಸರ್ಕಾರ ಈ ಉದ್ದೇಶಕ್ಕೆ ವಿವಿಧ ಯೋಜನೆಗಳಡಿ ಆಯವ್ಯಯದಲ್ಲಿ ನಿಗಧಿ ಮಾಡಿದ ಹಣ ಎಷ್ಟು ; ಖರ್ಚು ಮಾಡಿರುವ ಹಣ ಎಷ್ಟು ; ಇದರಲ್ಲಿ ಕೇಂದ್ರ ಸರ್ಕಾರದ ಪಾಲು ಎಷ್ಟು ? (ವರ್ಷಾವಾರು ವಿವರ ನೀಡುವುದು)

# ಸರ್ಕಾರಿ ಕಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಅಭಿವೃದ್ಧಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೭೨ (೨೬೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷದಲ್ಲಿ ಪ್ರಾರಂಭಿಸಲಾದ ಸರ್ಕಾರಿ ಹಾಗೂ ಖಾಸಗಿ ಕನ್ನಡ ಮತ್ತು ಆಂಗ್ಲ ಮಾಧ್ಯಮ ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಮಾಧ್ಯಮವಾರು, ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಸರ್ಕಾರಿ ಪ್ರೌಢ ಶಾಲೆಗಳಿಗೆ ಆಂಗ್ಲ ಮಾಧ್ಯಮ ಶಿಕ್ಷಣಕ್ಕೆ ಅನುಮತಿ ನೀಡಲು ಇರುವ ಮಾನದಂಡ ಮತ್ತು ಮಾರ್ಗಸೂಚಿಗಳಾವುವು ; (ಆದೇಶದ ಪ್ರತಿ ಒದಗಿಸುವುದು)

(ಇ) ರಾಜ್ಯದಲ್ಲಿ ಸರ್ಕಾರಿ ಪ್ರೌಢ ಶಾಲೆಗಳಿಗೆ ಆಂಗ್ಲ ಮಾಧ್ಯಮ ಶಿಕ್ಷಣಕ್ಕೆ ಅನುಮತಿ ನೀಡದಂತೆ ಅನುದಾನಿತ ಪ್ರೌಢ ಶಾಲೆಗಳಿಗೂ ಆಂಗ್ಲ ಮಾಧ್ಯಮ ಶಿಕ್ಷಣಕ್ಕೆ ಅನುಮತಿ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ನೀಡಲಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ;

(ಈ) ಸರ್ಕಾರಿ ಆಂಗ್ಲ ಮಾಧ್ಯಮ ಪ್ರೌಢ ಶಾಲೆಗಳಿಗೆ ನೀಡಲಾಗುವ ವಿಶೇಷ ಸವಲತ್ತು ಮತ್ತು ಸೌಲಭ್ಯಗಳು ಯಾವುವು ?

# ಬೋರ್‌ವೆಲ್ ಕೊರೆಯುವ ಯಂತ್ರಗಳ ಮೇಲೆ ನಿಯಂತ್ರಣ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೭೩ (೨೬೩೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೋರ್‌ವೆಲ್ ಕೊರೆಯುವ ಯಂತ್ರಗಳ ಸಂಖ್ಯೆ ಎಷ್ಟು; ಅವುಗಳನ್ನು ನೋಂದಣಿ ಮಾಡಿದ್ದಲ್ಲಿ ಯಾವ ಇಲಾಖೆಯಲ್ಲಿ ನೋಂದಾಯಿಸಲಾಗಿರುತ್ತದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯಂತ್ರಗಳ ಮೇಲೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ನಿಯಂತ್ರಣವೇನು ; ನಿಯಂತ್ರಣವಿಲ್ಲದಿದ್ದರೆ, ನಿಯಂತ್ರಣದ ಅವಶ್ಯಕತೆಯಿದೆಯೇ ; ಈ ಬಗ್ಗೆ ಕ್ರಮವೇನು ;

(ಇ) ಬರಗಾಲವನ್ನು ಬಂಡವಾಳವಾಗಿಸಿಕೊಂಡು ಜಲಮೂಲವನ್ನು ವೈಜ್ಞಾನಿಕವಾಗಿ ಗುರುತಿಸದೇ ರೈತರನ್ನು ಲೂಟಿ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ ; ಹೌದಾದರೆ, ಕೈಗೊಳ್ಳುವ ಕ್ರಮವೇನು ;

(ಈ) ಕಳೆದ ಒಂದು ವರ್ಷದಲ್ಲಿ, ರಾಜ್ಯದಲ್ಲಿ ಕೊರೆಯಲಾದ ಕೊಳವೆ ಬಾವಿಗಳ ಸಂಖ್ಯೆಗಳೆಷ್ಟು ; ಅವುಗಳಲ್ಲಿ ನಿರುಪಯುಕ್ತ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಅನುಮತಿ ಪಡೆದು ಕೊರೆಯಲಾದ ಮತ್ತು ಅನುಮತಿ ಪಡೆಯದೆ ಕೊರೆಯಲಾದ ಕೊಳವೆಬಾವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದ ಕೊಳವೆ ಬಾವಿಗಳ ನಿಯಂತ್ರಣದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೭೪ (೨೬೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಕೊರೆಯಲಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಅನುಮತಿಯನ್ನು ಪಡೆದ ಮತ್ತು ಅನುಮತಿಯನ್ನು ಪಡೆಯದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ನಿರುಪಯುಕ್ತಗೊಂಡ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

(ಆ) ಅನುಮತಿಯನ್ನು ಪಡೆಯದೇ ಕೊಳವೆ ಬಾವಿ ತೋಡಿಸುವುದನ್ನು ತಪ್ಪಿಸಲು ಮತ್ತು ಕೊಳವೆ ಬಾವಿಗೆ ಬಿದ್ದು ಜೀವಹಾನಿ ತಪ್ಪಿಸಲು ಸರ್ಕಾರದ ಮಾರ್ಗ ಸೂಚಿಯೇನು ;

(ಇ) ಕೊಳವೆ ಬಾವಿ ತೋಡುವ ಏಜೆನ್ಸಿಗಳು ಅನುಮತಿ ಪಡೆಯದೇ ತೋಡುವುದನ್ನು ತಪ್ಪಿಸಲು ಕಠಿಣ ಕಾಯಿದೆಯನ್ನು ರೂಪಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಬಾಪೂಜಿ ಸೇವಾ ಕೇಂದ್ರಗಳ ಸೇವಾ ನಿರ್ವಹಣೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೭೫ (೨೬೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಬಾಪೂಜಿ ಸೇವಾ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು) ಅವುಗಳಲ್ಲಿ ನೀಡಲಾಗುತ್ತಿರುವ ಸೇವೆಗಳು ಯಾವುವು ಮತ್ತು ನಿಗದಿಪಡಿಸಲಾದ ಶುಲ್ಕವೆಷ್ಟು ;

(ಆ) ಬಾಪೂಜಿ ಸೇವಾ ಕೇಂದ್ರಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಡಾಟಾ ಆಪರೇಟರ್ ಅವಶ್ಯಕತೆಯನ್ನು ಸರ್ಕಾರ ಗುರುತಿಸಿದೆಯೇ ; ಉಡುಪಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಚ್ಚುವರಿ ಡಾಟಾ ಆಪರೇಟರ್‌ಗಳ ಸಂಖ್ಯೆ ಎಷ್ಟು ; ಅವರ ಸೇವಾ ಭದ್ರತೆಗೆ ಸರ್ಕಾರದ ಕ್ರಮವೇನು;

(ಇ) ಬಾಪೂಜಿ ಸೇವಾ ಕೇಂದ್ರದ ಸರ್ವರ್ ಸಮಸ್ಯೆಯು ಪರಿಹಾರವಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ಕಾಲಮಿತಿಯೊಳಗೆ ಪರಿಹರಿಸಲಾಗುವುದು ;

(ಈ) ಬಾಪೂಜಿ ಸೇವಾ ಕೇಂದ್ರದಲ್ಲಿ ದಿನನಿತ್ಯ ಸಂಗ್ರಹವಾದ ಮೊತ್ತವನ್ನು ಜಮೆ ಮಾಡಲು ಸ್ಟೇಟ್ ಬ್ಯಾಂಕ್‌ನಲ್ಲಿ ಖಾತೆ ತೆರೆಯುವ ಬಗ್ಗೆ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ ; ಸ್ಟೇಟ್ ಬ್ಯಾಂಕ್ ಶಾಖೆಯನ್ನು ಹೊಂದಿರದ ಗ್ರಾಮ ಪಂಚಾಯಿತಿಗಳಿಗೆ ಇದರಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರವು ಸ್ಥಳೀಯ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಖಾತೆ ತೆರೆಯಲು ಪಂಚಾಯಿತಿಗಳಿಗೆ ಅವಕಾಶ ನೀಡಿ ಆದೇಶ ಹೊರಡಿಸುವುದೇ ;

(ಉ) ಶೂನ್ಯ, ಆದಾಯ ಶೂನ್ಯ ನಷ್ಟದ ಪರಿಕಲ್ಪನೆಯಲ್ಲಿ ಕಾರ್ಯನಿರ್ವಹಿಸಲು ಸೇವಾ ಕೇಂದ್ರದಲ್ಲಿ ಸಂಗ್ರಹವಾದ ಪೂರ್ಣ

ಮೊತ್ತವನ್ನು ಉಪಯೋಗಿಸಲು ಆದೇಶ ನೀಡಲಾಗುವುದೇ ; ಇಲ್ಲವಾದಲ್ಲಿ, ಲಾಭವಿಲ್ಲದೆ ನಷ್ಟವನ್ನು ಮಾಡುವ ಈ ಸೇವೆಗಳನ್ನು ನೀಡಲು ಪಂಚಾಯಿತಿಗಳು ಆಸಕ್ತಿಯನ್ನು ತೋರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು ?

## ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ದೊರೆಯುವ ಸವಲತ್ತುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೭೬ (೨೬೭೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಶಾಲಾ ವಿದ್ಯಾರ್ಥಿಗಳಿಗೆ ಅಂಗವಿಕಲರಿಗೆ ಹಿರಿಯ ನಾಗರಿಕರಿಗೆ ದೊರೆಯುವ ಸವಲತ್ತುಗಳು ಯಾವುವು ; ಇವುಗಳನ್ನು ಪಡೆಯಲು ಇರುವ ಮಾನದಂಡವೇನು; ಇವುಗಳನ್ನು ಪಡೆಯುವ ವಿಧಾನ ಯಾವುದು ;

(ಆ) ಉಡುಪಿ ಜಿಲ್ಲೆಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್‌ಗಳ ಬಗ್ಗೆ ಜನರು ಆಕರ್ಷಿತರಾಗಲು ಯಾವ ಯಾವ ಕ್ರಮಗಳನ್ನು ಅನುಸರಿಸಲಾಗಿದೆ; ಇಲಾಖೆಯಿಂದ ದೊರೆಯುವ ಸವಲತ್ತುಗಳ ಬಗ್ಗೆ ಎಲ್ಲಾ ಶಾಲಾ ಕಾಲೇಜುಗಳು ಗ್ರಾಮ ಪಂಚಾಯಿತಿಗಳ ಎದುರು ಸಾರ್ವಜನಿಕ ಫ್ಲೆಕ್ಸ್ ಅಳವಡಿಕೆಗೆ ಕ್ರಮ ವಹಿಸಲಾಗಿದೆಯೇ ; ಇಲ್ಲವಾದಲ್ಲಿ, ಈ ಬಗ್ಗೆ ಕ್ರಮ ವಹಿಸಲಾಗುವುದೇ ;

(ಇ) ಉಡುಪಿ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಸಂಚರಿಸುತ್ತಿರುವ ಕೆ.ಎಸ್.ಆರ್.ಟಿ.ಸಿ. ಬಸ್‌ಗಳ ಸಂಖ್ಯೆ ಎಷ್ಟು ; ಅವು ಸಂಚರಿಸುತ್ತಿರುವ ಮಾರ್ಗಗಳು ಯಾವುವು ; ಈ ಬಸ್ಸುಗಳು ಲಾಭದಲ್ಲಿ ಸಂಚರಿಸುತ್ತಿದೆಯೇ ಅಥವಾ ನಷ್ಟದಲ್ಲಿ ಸಂಚರಿಸುತ್ತಿದೆಯೇ ; (ಬಸ್ ಮಾರ್ಗವಾರು ವಿವರ ನೀಡುವುದು)

(ಈ) ನೂತನವಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರು ಆಯ್ಕೆಯಾದ ನಂತರ ನೂತನವಾಗಿ ಓಡಿಸುತ್ತಿರುವ ಬಸ್‌ಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

## ವಿ.ಟಿ.ಯು ದಿಂದ ಫಲಿತಾಂಶ ಪ್ರಕಟಿಸಲು ವಿಳಂಬವಾಗಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೨೭೭ (೨೪೫೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ವಿವಿಧ ಸೆಮಿಸ್ಟರ್‌ಗಳ ಫಲಿತಾಂಶ ನೀಡಿಕೆಯಲ್ಲಿ ವಿಳಂಬವಾಗಿರುವುದು ನಿಜವೇ ;

(ಆ) ಪ್ರತಿ ವರ್ಷ ಫೆಬ್ರವರಿ ತಿಂಗಳಿನಲ್ಲಿ ಫಲಿತಾಂಶ ಪ್ರಕಟವಾಗುತ್ತಿದ್ದು ನಿಜವೇ ; ಈ ಬಾರಿ ಯಾವ ತಿಂಗಳಲ್ಲಿ ಫಲಿತಾಂಶ ಪ್ರಕಟವಾಯಿತು ; ಈ ರೀತಿಯ ವಿಳಂಬಕ್ಕೆ ಕಾರಣವೇನು ;

(ಇ) ಇನ್ನೂ ಯಾವ ಯಾವ ಸೆಮಿಸ್ಟರ್‌ಗಳ ಹಾಗೂ ಯಾವ ಯಾವ ವಿಭಾಗದ ಫಲಿತಾಂಶಗಳು ಬಾಕಿ ಇವೆ ? (ವಿವರ ನೀಡುವುದು)

## ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೨೭೮ (೨೪೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ದೇವನಹಳ್ಳಿ ತಾಲ್ಲೂಕು ಚನ್ನರಾಯಪಟ್ಟಣ ಹೋಬಳಿ ಕೊಂಡೇನಹಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠ ಶಾಲೆಯ ಕೊಠಡಿಯು ಶಿಥಿಲಗೊಂಡಿರುವುದು ನಿಜವೇ ; (ವಿವರ ನೀಡುವುದು)

(ಆ) ಸದರಿ ಶಾಲಾಭಿವೃದ್ಧಿ ಸಮಿತಿಯವರು ಸಹ ಕೊಠಡಿಯು ಬೀಳುವ ಸ್ಥಿತಿಯಲ್ಲಿದ್ದು, ರಾತ್ರಿವೇಳೆ ಅನೈತಿಕ ಚಟುವಟಿಕೆಗಳು ನಡೆಯುತ್ತಿರುವ ಬಗ್ಗೆ ದೂರು ನೀಡಿರುವುದು ನಿಜವೇ ;

(ಇ) ಸದರಿ ಕೊಠಡಿಯನ್ನು ತೆರವುಗೊಳಿಸುವ ಕುರಿತು ಸರ್ಕಾರದ ನಿಲುವೇನು ; ಇದಕ್ಕೆ ಬೇಕಾಗುವ ಕಾಲಾವಧಿ ಎಷ್ಟು ?

## ಉಪನ್ಯಾಸಕರಿಗೆ ವೇತನ ಸಹಿತ ರಜೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) :–**

೨೨೭೯ (೨೪೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಪದವಿ (ಬಿ.ಎಡ್.) ಪೂರ್ಣಗೊಳಿಸಲು ಮುಂದಾಗಿರುವ ಬಿ.ಎಡ್ ಪೂರ್ಣಗೊಳಿಸದ ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ ವೇತನ ಸಹಿತ ರಜೆ ಮಂಜೂರು ಮಾಡದೆ ಶಿಷ್ಯವೇತನ ಮಾತ್ರ ನೀಡಲು ಮುಂದಾಗಿರುವುದು ನಿಜವೇ ;

(ಆ) ೨೦೦೯ ರಲ್ಲಿ ೧೩೦೦ ಉಪನ್ಯಾಸಕರುಗಳಿಗೆ ಸರ್ಕಾರವು ವೇತನ ಸಹಿತ ರಜೆ ನೀಡಿ ಬಿ.ಎಡ್‌ಗೆ ಅವಕಾಶ ಕಲ್ಪಿಸಿದ್ದು ನಿಜವೇ ;

(ಇ) ಈ ಬಾರಿಯೂ ಅದೇ ರೀತಿಯ ಅವಕಾಶ ಕಲ್ಪಿಸದಿರಲು ಕಾರಣವೇನು ?

## ಕೆ.ಐ.ಎ.ಡಿ.ಬಿ. ಮೂಲಕ ಐ.ಟಿ. ಮತ್ತು ಬಿ.ಟಿ. ಕಂಪನಿಗಳಿಗೆ ಜಮೀನು ಮಂಜೂರಾತಿ ಬಗ್ಗೆ

**ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೮೦ (೨೪೬೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೧೦ ವರ್ಷಗಳಿಂದ ಕೆ.ಐ.ಎ.ಡಿ.ಬಿ ಮೂಲಕ ಐ.ಟಿ. ಮತ್ತು ಬಿ.ಟಿ. ಕಂಪನಿಗಳಿಗೆ ರಾಜ್ಯದಲ್ಲಿ ಮಂಜೂರು ಮಾಡಿರುವ ಜಮೀನು ಎಷ್ಟು ;

(ಆ) ಇದರಿಂದ ಉದ್ಯೋಗಾವಕಾಶ ಲಭ್ಯವಾಗಿರುವ ಜನರ ಒಟ್ಟು ಸಂಖ್ಯೆ ಎಷ್ಟು ;

(ಇ) ರಾಜ್ಯದ ಕನ್ನಡಿಗರಿಗೆ ಲಭ್ಯವಾಗಿರುವ ಉದ್ಯೋಗ ಸಂಖ್ಯೆ ಎಷ್ಟು ;

(ಈ) ಕನ್ನಡಿಗರಿಗೆ ಉದ್ಯೋಗ ನೀಡಲು ಒತ್ತಾಯ ತರಲು ಸರ್ಕಾರ ನಿಯಮಗಳನ್ನು ರೂಪಿಸಲಾಗಿದೆಯೇ ?

## ಹೈದ್ರಾಬಾದ್–ಕರ್ನಾಟಕ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣಕ್ಕೆ ಉತ್ತೇಜನ ನೀಡುವ ಕುರಿತು

**ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೮೧ (೨೪೬೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣದಲ್ಲಿ ಬಹಳ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಿಂದುಳಿದ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣಕ್ಕೆ ಉತ್ತೇಜನ ನೀಡಲು ಸರ್ಕಾರ ಹಲವು ಕಾರ್ಯಕ್ರಮಗಳನ್ನು ರೂಪಿಸಲು ಕ್ರಮ ಕೈಗೊಳ್ಳುವುದೇ ;

(ಇ) ಸರ್ಕಾರ ಇದಕ್ಕಾಗಿ ವಿಶೇಷ ಅನುದಾನ ನೀಡುವ ಮೂಲಕ ಹಿಂದುಳಿದ ಜಿಲ್ಲೆಯ ಬಡ ವಿದ್ಯಾರ್ಥಿಗಳಿಗೆ ನೆರವಾಗಬಹುದಲ್ಲವೇ ;

(ಈ) ಈ ಜಿಲ್ಲೆಗಳಲ್ಲಿ ಹೆಣ್ಣುಮಕ್ಕಳಿಗೆ ಪದವಿ ವ್ಯಾಸಂಗದವರೆಗೆ ಉಚಿತ ಶಿಕ್ಷಣ ನೀಡಲು ಸರ್ಕಾರದ ಚಿಂತನೆ ಇದೆಯೇ ?

## K.S.R.T.C ಮತ್ತು B.M.T.C ಬಸ್ಸುಗಳ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೮೨ (೨೪೯೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ನಿಗಮಗಳು ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹೊಸ ಬಸ್‌ಗಳನ್ನು ತಯಾರಿಸಲಾಗಿರುತ್ತದೆ ; ನಿಗಮದ ಗುರಿಯಂತೆ ಬಸ್ಸುಗಳನ್ನು ನಿಗಧಿತ ಸಮಯದಲ್ಲಿ ತಯಾರು ಮಾಡಲಾಗಿದೆಯೇ ;

(ಆ) ಸಾರಿಗೆ ಸಂಸ್ಥೆಯ ನಾಲ್ಕು ನಿಗಮಗಳು ಕಳೆದ ಮೂರು ವರ್ಷಗಳಿಂದ ಲಾಭವನ್ನು ಗಳಿಸಿವೆಯೇ ; ಗಳಿಸದೇ ಇದ್ದಲ್ಲಿ, ಕಾರಣಗಳೇನು ; ರಾಜ್ಯ ಸಾರಿಗೆ ಸಂಸ್ಥೆಯು ಕಳೆದ ಮೂರು

ವರ್ಷಗಳಲ್ಲಿ ಬಸ್ ನಿರ್ಮಾಣಕ್ಕಾಗಿ ಎಷ್ಟು ಚಾಸಿಸ್‌ಗಳನ್ನು ಖರೀದಿ ಮಾಡಿರುತ್ತದೆ ; ರಾಜ್ಯ ಸಾರಿಗೆ ಸಂಸ್ಥೆಯಲ್ಲಿ ವಯೋಮಿತಿ ಮೀರಿದ ಎಷ್ಟು ಬಸ್ಸುಗಳು ಇರುತ್ತವೆ ; ಇವುಗಳನ್ನು ಯಾವ ರೀತಿ ಸಾರಿಗೆ ಸಂಸ್ಥೆ ವಿಲೇವಾರಿ ಮಾಡುತ್ತದೆ ;

(ಇ) ಸಾರಿಗೆ ಸಂಸ್ಥೆಯು ಕಳೆದ ಮೂರು ವರ್ಷಗಳಲ್ಲಿ ಹೊರಗುತ್ತಿಗೆ ಮೇಲೆ ಎಷ್ಟು ಬಸ್ಸುಗಳನ್ನು ಪಡೆದಿರುತ್ತದೆ ; ಅವುಗಳಿಗೆ ನೀಡುತ್ತಿರುವ ಕಿ.ಮೀ. ದರ ಎಷ್ಟು ; ಹೊರಗುತ್ತಿಗೆ ಮೂಲಕ ಸಾರಿಗೆ ಸಂಸ್ಥೆಗೆ ಲಾಭವಾಗಿದೆಯೇ ;

(ಈ) ಸಾರಿಗೆ ಸಂಸ್ಥೆಯು ರಾಜ್ಯದ ಸಾರಿಗೆ ವ್ಯವಸ್ಥೆಗೆ ಅವಶ್ಯಕವಾಗಿರುವ ಬಸ್ಸುಗಳನ್ನು ಖರೀದಿ ಮಾಡಲು ಯಾವುದಾದರೂ ಯೋಜನೆ ರೂಪಿಸಿದೆಯೇ ; ಯೋಜನೆ ರೂಪಿಸಿದ್ದಲ್ಲಿ, ಎಷ್ಟು ವರ್ಷಗಳ ಅವಧಿಗೆ ಮತ್ತು ಸುರಕ್ಷಾ ವ್ಯವಸ್ಥೆಗೆ ರೂಪಿಸಲಾಗಿದೆ ?

## KIADB ಕೈಗಾರಿಕಾ ನಿವೇಶನದ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೮೩ (೨೯೪೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕೈಗಾರಿಕಾ ನಿವೇಶನಗಳನ್ನು ಅಭಿವೃದ್ಧಿ ಪಡಿಸಿ ಹಂಚಿಕೆ ಮಾಡಿರುತ್ತದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಂಡಳಿಯ ಮುಖಾಂತರ ರಾಜ್ಯ ಉನ್ನತ ಮಟ್ಟದ ತೀರುವಳಿ ಸಮಿತಿಗೆ ಕಳೆದ ಮೂರು ವರ್ಷಗಳಲ್ಲಿ ಕೈಗಾರಿಕಾ ನಿವೇಶನಗಳನ್ನು ಕೋರಿ ಎಷ್ಟು ಅರ್ಜಿ ಸಲ್ಲಿಕೆ ಆಗಿರುತ್ತದೆ ; ಸಲ್ಲಿಕೆಯಾದ ಅರ್ಜಿಗಳಲ್ಲಿ ಎಷ್ಟು ಮಂದಿಗೆ ಕೈಗಾರಿಕಾ ನಿವೇಶನಗಳನ್ನು ನೀಡಲಾಗಿದೆ ; ಇವುಗಳಲ್ಲಿ ಒಂದೇ ಸಂಸ್ಥೆ ಅಥವಾ ಕಂಪನಿಗೆ ಒಂದಕ್ಕಿಂತ ಹೆಚ್ಚು ಕೈಗಾರಿಕಾ ನಿವೇಶನಗಳು ಮಂಜೂರಾಗಿರುವ ಪ್ರಕರಣಗಳು ಎಷ್ಟು ;

(ಇ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಭೂ ಅಧಿಸೂಚನೆಯ ಹಿಂಪಡೆಯುವಿಕೆಯ ಮೂಲಕ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಎಕರೆ ಪ್ರದೇಶವನ್ನು ಭೂ ಮಾಲೀಕರಿಗೆ ಹಿಂದಕ್ಕೆ ನೀಡಲಾಗಿದೆ ; ಅಧಿಸೂಚನೆಯನ್ನು ಹಿಂಪಡೆದ ಪ್ರಕರಣಗಳಲ್ಲಿ ಭೂ ಮಾಲೀಕರಿಗೆ ಪಾವತಿಯಾಗಿರುವ ಹಣವನ್ನು ವಾಪಸ್ಸು ಪಡೆಯಲಾಗಿದೆಯೇ ; ಪಡೆಯದೇ ಇದ್ದಲ್ಲಿ, ಬಾಕಿಯಿರುವ ಹಣ ಎಷ್ಟು ;

(ಈ) ರಾಜ್ಯ ಉನ್ನತಮಟ್ಟ ತೀರುವಳಿ ಸಮಿತಿಯ ಮೇ॥ ಕೆ.ಎ.ಪಿ.ಸಿ.ಐ ಕೋಟಿಂಗ್ ಇಂಡಿಯಾ ಲಿಮಿಟೆಡ್ ಕಂಪನಿಗೆ ಹಂಚಿಕೆಯಾದ ಕೈಗಾರಿಕಾ ನಿವೇಶನವನ್ನು ಬದಲಾವಣೆ ಮಾಡಿ ಹಳೆಯ ದರದಲ್ಲಿ ಒಭಡೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಕೈಗಾರಿಕಾ ನಿವೇಶನವನ್ನು ಹಂಚಿಕೆ ಮಾಡಿದೆಯೇ ; ಹಂಚಿಕೆ ಮಾಡಿದ್ದಲ್ಲಿ ಬದಲಾವಣೆಯ ನಿವೇಶನದಲ್ಲಿ ಹೆಚ್ಚುವರಿ ಮಾರುಕಟ್ಟೆ ದರವನ್ನು ಪಡೆಯಲಾಗಿದೆಯೇ ; ಇಲ್ಲದೆ ಹೋದಲ್ಲಿ, ಸದರಿ ನಷ್ಟಕ್ಕೆ ಯಾರನ್ನು ಹೊಣೆ ಮಾಡಲಾಗಿದೆ ?

# ಗೃಹ ಮಂಡಳಿ ನಿವೇಶನಗಳ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೮೪ (೨೪೯೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗೃಹ ಮಂಡಳಿಯು ಕಳೆದ ಮೂರು ವರ್ಷಗಳಲ್ಲಿ ಎಷ್ಟು ನಿವೇಶನಗಳನ್ನು ಹರಾಜು ಮೂಲಕ ವಿಲೇವಾರಿ ಮಾಡಿರುತ್ತದೆ ; ಮಧ್ಯಂತರ ನಿವೇಶನಗಳನ್ನು ಹರಾಜು ಮೂಲಕ ವಿಲೇವಾರಿ ಮಾಡಲು ಗೃಹ ಮಂಡಳಿಯ ಕಾಯ್ದೆಯಲ್ಲಿ ಅವಕಾಶವಿದೆಯೇ ;

(ಆ) ಕರ್ನಾಟಕ ಗೃಹ ಮಂಡಳಿಯಲ್ಲಿ ಎಷ್ಟು ನಾಗರಿಕ ನಿವೇಶನಗಳು ಲಭ್ಯವಿರುತ್ತದೆ ; ಕಳೆದ ಮೂರು ವರ್ಷಗಳಲ್ಲಿ ನಾಗರಿಕ ನಿವೇಶನ ಕೋರಿ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿರುತ್ತದೆ ; ಎಷ್ಟು ಸಂಘ ಸಂಸ್ಥೆಗಳಿಗೆ ನಾಗರಿಕ ನಿವೇಶನಗಳನ್ನು ನೀಡಲಾಗಿರುತ್ತದೆ ;

(ಇ) ಕರ್ನಾಟಕ ಗೃಹ ಮಂಡಳಿಯಲ್ಲಿ ನಿವೇಶನ ಕೋರಿ ಗ್ರಾಹಕರು ಸಲ್ಲಿಸಿರುವ ಠೇವಣಿ ಹಣ ಎಷ್ಟು ಇರುತ್ತದೆ ; ನಿವೇಶನ ದೊರೆಯದವರಿಗೆ ಸಕಾಲದಲ್ಲಿ ಠೇವಣಿ ಹಿಂತಿರುಗಿಸಲಾಗಿದೆಯೇ ; ಇಲ್ಲದೇ ಹೋದಲ್ಲಿ, ಗ್ರಾಹಕರ ಠೇವಣಿ ಮೇಲೆ ಬಡ್ಡಿಯನ್ನು ಪಾವತಿ ಮಾಡಲಾಗುತ್ತಿದೆಯೇ ;

(ಈ) ಶಿವಮೊಗ್ಗ ಜಿಲ್ಲೆ ಶಿಕಾರಿಪುರದಲ್ಲಿ ಗೃಹ ಮಂಡಳಿ ಕಾಮಗಾರಿ ನಡೆಸದೇ ಒಳ ಚರಂಡಿ ಕಾಮಗಾರಿಗೆ ಹಣ ಪಾವತಿ ಮಾಡಿರುತ್ತದೆಯೇ ; ಸದರಿ ಕಾಮಗಾರಿಯ ಕುರಿತು ಲೆಕ್ಕ ಪರಿಶೋಧನಾ ಆಕ್ಷೇಪಣೆ ಬಂದಿರುತ್ತದೆಯೇ ; ಆಕ್ಷೇಪಣೆ ಬಂದಿದ್ದಲ್ಲಿ, ನಷ್ಟ ವಸೂಲಾತಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಕೇಂದ್ರ ಮಾಹಿತಿ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೮೫ (೨೪೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಷಯ ಪರಿವೀಕ್ಷಕರು, ಸಹಾಯಕ ನಿರ್ದೇಶಕರು (ಅಕ್ಷರ ದಾಸೋಹ ಮತ್ತು ಪರೀಕ್ಷಾ ಮಂಡಳಿ) ಪ್ರೌಢ ಶಾಲಾ ಶಿಕ್ಷಕ ಸಂಯೋಜಕರು (ಕ್ಷೇತ್ರ ಶಿಕ್ಷಣಾಧಿಕಾರಿಯವರ ಕಛೇರಿ), ಬಿ.ಆರ್.ಸಿ. ಕೇಂದ್ರಗಳಲ್ಲಿರುವ ಪ್ರೌಢ ಶಾಲಾ ಸಂಪನ್ಮೂಲ ಶಿಕ್ಷಕರು, ಪದವೀಧರ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಹುದ್ದೆಗಳಿಗೆ ಹೆಚ್ಚುವರಿ ವಿಶೇಷ ವೇತನ ಬಡ್ತಿ ನೀಡಲಾಗಿದೆಯೇ ; ನೀಡದೇ, ಇದ್ದಲ್ಲಿ, ಎಂದಿನಿಂದ ನೀಡಲಾಗುವುದು ;

(ಆ) ರಾಜ್ಯದ ಪ್ರೌಢಶಾಲಾ ಶಿಕ್ಷಣ ಮಂಡಳಿಯ ಈ ಸಾಲಿನಲ್ಲಿ ಕಡಿಮೆ ಫಲಿತಾಂಶ ಬಂದಿರುವ ಕಾರಣಕ್ಕೆ ಶಿಕ್ಷಕರ ವೇತನ ತಡೆಹಿಡಿಯಲು ಸರ್ಕಾರ ಯಾವುದಾದರೂ ಆದೇಶ ನೀಡಿದೆಯೇ ; ಇಲ್ಲದೇ ಹೋದಲ್ಲಿ ಫಲಿತಾಂಶದ ಕಾರಣಕ್ಕೆ ಶಿಕ್ಷಕರ ವೇತನ ನೀಡದಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುತ್ತದೆ ;

(ಇ) ರಾಜ್ಯ ಸರ್ಕಾರವು ಯೋಜನೇತರ ಅಡಿಯಲ್ಲಿ ಬರುವ ಶಾಲೆಗಳ ಶಿಕ್ಷಕರಿಗೆ ಸಕಾಲದಲ್ಲಿ ವೇತನ ಪಾವತಿ ಮಾಡುತ್ತಿದೆಯೇ ; ಮಾಡದೇ ಇದ್ದಲ್ಲಿ, ಎಲ್ಲಿ ಲೋಪವಾಗುತ್ತಿದೆ ಮತ್ತು ಸರಿಪಡಿಸಲು ಕ್ರಮ ಜರುಗಿಸಲಾಗಿದೆಯೇ ;

(ಈ) ರಾಜ್ಯದ ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಅನುಮತಿ ನೀಡಿರುತ್ತದೆಯೇ ; ನೀಡದೇ ಇದ್ದಲ್ಲಿ, ಯಾವಾಗ ಅನುಮತಿ ನೀಡಲಾಗುವುದು ;

(ಉ) ಅನುದಾನಕ್ಕೆ ಒಳಪಟ್ಟಿರುವ ಖಾಸಗಿ ಶಾಲೆಗಳಲ್ಲಿ ಸಮವಸ್ತ್ರ, ಬ್ಯಾಗ್, ಶೂ, ಹಾಗೂ ಸೈಕಲ್ ವಿತರಣೆ ಮಾಡಲು ಸರ್ಕಾರ ಉದ್ದೇಶ ಹೊಂದಿದೆಯೇ ; ಅನುದಾನಿತ ಶಾಲೆಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲಾಗುವುದೇ ?

## ಕಾಲೇಜು ಶಿಕ್ಷಣದ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೮೬ (೨೪೯೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಲೇಜು ಶಿಕ್ಷಣ ಇಲಾಖೆಯ ರೂಸ (RUSA) ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಎಷ್ಟು ಅನುದಾನವನ್ನು ಪಡೆದಿರುತ್ತದೆ ; ಸದರಿ ಅನುದಾನದಲ್ಲಿ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಎಷ್ಟು ಉಪನ್ಯಾಸಕರಿಗೆ ಲ್ಯಾಪ್‌ಟ್ಯಾಪ್‌ಗಳನ್ನು ನೀಡಲಾಗಿದೆ ;

(ಆ) ರೂಸ (RUSA) ಯೋಜನೆಯಡಿ ಕಾಲೇಜು ಶಿಕ್ಷಣ ಇಲಾಖೆಯಿಂದ ಲ್ಯಾಪ್‌ಟ್ಯಾಪ್ ಸರಬರಾಜಿಗೆ ಟೆಂಡರ್ ಕರೆಯಲಾಗಿತೇ ; ಸದರಿ ಟೆಂಡರ್‌ನಲ್ಲಿ ಎಷ್ಟು ಜನ ಭಾಗವಹಿಸಿದ್ದರು ; ಇಡೀ ರಾಜ್ಯದಲ್ಲಿ ಲ್ಯಾಪ್‌ಟ್ಯಾಪ್ ಸರಬರಾಜಿಗೆ ಒಂದೇ ವ್ಯಕ್ತಿಗೆ ಗುತ್ತಿಗೆ ನೀಡಲಾಗಿತ್ತೇ ; ನೀಡಿದ್ದಲ್ಲಿ, ಅವರಿಗೆ ಎಷ್ಟು ಹಣ ಪಾವತಿ ಮಾಡಲಾಗಿದೆ ; ಮತ್ತು ಎಷ್ಟು ಲ್ಯಾಪ್‌ಟ್ಯಾಪ್ ಗುತ್ತಿಗೆದಾರರಿಂದ ಪಡೆಯಲಾಗಿದೆ ; ಪ್ರತಿ ಲ್ಯಾಪ್‌ಟ್ಯಾಪ್‌ನ ಬೆಲೆ ಮಾರುಕಟ್ಟೆ ದರಕ್ಕೆ ಅನುಗುಣವಾಗಿದೆಯೇ ;

(ಇ) ರಾಷ್ಟ್ರೀಯ ಉಚ್ಛತಾ ಶಿಕ್ಷಣ ಅಭಿಯಾನ ಅಡಿಯಲ್ಲಿ ವಿಶ್ವವಿದ್ಯಾನಿಲಯಗಳಿಗೆ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಹಣವನ್ನು ಪಡೆದಿರುವ ವಿಶ್ವವಿದ್ಯಾನಿಲಯಗಳು ವಿನಿಯೋಗ ದೃಢೀಕರಣ ಪತ್ರವನ್ನು ನೀಡಿರುತ್ತಾರೆಯೇ ;

(ಈ) ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸಲಾಗಿದೆಯೇ ; ಇಲ್ಲದೇ ಹೋದಲ್ಲಿ, ಕಟ್ಟಡಗಳನ್ನು ಒದಗಿಸಲು ರಾಜ್ಯ ಸರ್ಕಾರ ಕ್ರಿಯಾ ಯೋಜನೆ ರೂಪಿಸಿದೆಯೇ ;

(ಉ) ಕರ್ನಾಟಕ ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ರಾಜ್ಯ ಸರ್ಕಾರ ಯೋಜನೆಯನ್ನು ರೂಪಿಸಿದೆಯೇ ; ಇಲ್ಲದೇ ಹೋದಲ್ಲಿ, ಖಾಯಂಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ ?

## ರೈಲ್ವೆಯಲ್ಲಿ ಕಳ್ಳತನವಾಗುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೮೭ (೨೫೬೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಶವಂತಪುರ–ಬೀದರ್ ವಿತಾರಾಬಾದ ಮಾರ್ಗವಾಗಿ ಬೀದರ್‌ಗೆ ತಲುಪುವ ರೈಲ್ವೆಯಲ್ಲಿ ತುಂಬಾ ಕಳ್ಳತನವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಾರ್ವಜನಿಕರ ಹಿತದೃಷ್ಟಿಯಿಂದ ಸರ್ಕಾರವು ಕಳ್ಳತನ ತಡೆಗಟ್ಟಲು ಕೈಗೊಂಡ ಮಹತ್ವದ ಕ್ರಮಗಳೇನು ; (ಸ್ಪಷ್ಟವಾದ ಮಾಹಿತಿ ನೀಡುವುದು)

(ಇ) ಯಶವಂತಪುರ ಬೀದರ್ ರೈಲ್ವೆಗೆ ಜನ ಪ್ರತಿನಿಧಿಗಳು ಹಾಗೂ ಗಣ್ಯ ವ್ಯಕ್ತಿಗಳು ದೂರು ಕೊಟ್ಟಿದ್ದರೂ ರೈಲ್ವೆ ಇಲಾಖೆಯು ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲದಿರುವುದಕ್ಕೆ ಕಾರಣಗಳೇನು ;

(ಈ) ಬೀದರ್–ಯಶವಂತಪುರ ರೈಲ್ವೆ ಪ್ರಾರಂಭವಾದ ದಿನದಿಂದ ಇಲ್ಲಿಯ ವರೆಗೆ ಎಷ್ಟು ಕಳ್ಳತನ ಪ್ರಕರಣಗಳು ದಾಖಲಿಸಲಾಗಿದೆ ? (ದಿನಾಂಕದೊಂದಿಗೆ ಮಾಹಿತಿ ಒದಗಿಸುವುದು)

## ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೮೮ (೨೫೭೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇರುವ ಅನುದಾನಿತ ಹಾಗೂ ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಅನುದಾನಿತ ಹಾಗೂ ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಮತ್ತು ಉಪನ್ಯಾಸಕರ ಹುದ್ದೆಗಳೆಷ್ಟು ;

(ಇ) ಪ್ರಾಂಶುಪಾಲರ ಮತ್ತು ಉಪನ್ಯಾಸಕರ ಹುದ್ದೆಗಳು ಎಷ್ಟು ; ವರ್ಷಗಳಿಂದ ಖಾಲಿ ಇವೆ ; (ತಾಲ್ಲೂಕುವಾರು ಜಿಲ್ಲಾವಾರು ವಿವರ ನೀಡುವುದು)

(ಈ) ಪ್ರಾಂಶುಪಾಲರ ಮತ್ತು ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ? (ಸ್ಪಷ್ಟ ಮಾಹಿತಿ ಒದಗಿಸುವುದು)

## ಆಯಾ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೮೯ (೨೫೭೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಶಾನ್ಯ ಸಾರಿಗೆ ಸಂಸ್ಥೆಯಡಿ ಬೀದರ್ ಜಿಲ್ಲೆಯ ಎಲ್ಲಾ ಬಸ್ ಘಟಕಗಳಲ್ಲಿ/ಡಿಸಿ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ಸಿಬ್ಬಂದಿ ಹಾಗೂ ಚಾಲಕ/ನಿರ್ವಾಹಕರ ಸಂಖ್ಯೆ ಎಷ್ಟು; (ನೌಕರವಾರು ಸೇವಾ ವಿವರಗಳನ್ನು ಒದಗಿಸುವುದು)

(ಆ) ಆಯಾ ವೃಂದಗಳಲ್ಲಿ ಖಾಲಿ ಇರುವ ಹುದೆಗಳು ಎಷ್ಟು ; (ವೃಂದವಾರು ವಿವರ ಒದಗಿಸುವುದು) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಳ್ಳಲಾಗುವ ಕ್ರಮಗಳೇನು;

(ಇ) ಒಂದೇ ಹುದ್ದೆಯಲ್ಲಿ ಅಥವಾ ಒಂದೇ ಸ್ಥಳದಲ್ಲಿ ೫ ಹಾಗೂ ೧೦ ವರ್ಷಗಳಿಗಿಂತ ಹೆಚ್ಚಿನ ಅವಧಿಗೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಈ) ಅಂತಹ ನೌಕರರನ್ನು ಸ್ಥಳಾಂತರಿಸಲು ಅಥವಾ ವರ್ಗಾಯಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಕೈಗೊಳ್ಳಲಾಗುವ ಕ್ರಮಗಳ ಹಾಗೂ ಕಾಲಮಿತಿ ಏನು ? (ವಿವರ ನೀಡುವುದು)

## ಅಭಿವೃದ್ಧಿ ಕಾರ್ಯಗಳಿಗೆ ತಗಲಿದ ವೆಚ್ಚ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೯೦ (೨೫೭೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಅಭಿವೃದ್ಧಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳೆಷ್ಟು ; (ಹೆಸರು ಮತ್ತು ಅವರು ಕಾರ್ಯನಿರ್ವಹಿಸಿದ ಅವಧಿಯ ಬಗ್ಗೆ ವಿವರಗಳನ್ನು ಒದಗಿಸುವುದು)

(ಆ) ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಆಯಾ ಪಂಚಾಯತ್‌ಗಳಲ್ಲಿ ನೇಮಕಗೊಂಡ ದಿನಾಂಕದಿಂದ ಅವರು ಕಾರ್ಯನಿರ್ವಹಿಸಿದ ಅವಧಿ ಅಥವಾ ಏಪ್ರಿಲ್ ೨೦೧೭ರ ವರೆಗೆ ಅವರು ಕೈಗೊಂಡ ಅಭಿವೃದ್ಧಿ ಕಾರ್ಯಗಳು ಯಾವುವು ; (ವಿವರಗಳನ್ನು ಒದಗಿಸುವುದು)

(ಇ) ಹಾಗಿದ್ದಲ್ಲಿ, ಅಭಿವೃದ್ಧಿ ಕಾರ್ಯಗಳಿಗೆ ಆಯಾ ಪಂಚಾಯತ್ ವಾರು ತಗುಲಿದ ವೆಚ್ಚಗಳೆಷ್ಟು ; ( ವಿವರ ನೀಡುವುದು)

(ಈ) ಅಭಿವೃದ್ಧಿ ಕಾರ್ಯಗಳ ಅನುಷ್ಠಾನ ಹಾಗೂ ಸರ್ಕಾರದ ಅನುದಾನದ ವಿನಿಯೋಗಕ್ಕೆ ಸಂಬಂಧಿಸಿದಂತೆ ಸರ್ಕಾರ ನಿಗಧಿಪಡಿಸಿದ ಗುರಿ ತಲುಪಲು ವಿಫಲರಾದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ಕುಡಿಯುವ ನೀರಿನ ಸೌಲಭ್ಯಕ್ಕೆ ಬಿಡುಗಡೆ ಮಾಡಿದ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧ (೨೫೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬. ೨೦೧೬–೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಗ್ರಾಮ ಪಂಚಾಯ್ತಿಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಎಷ್ಟು ಅನುದಾನವನ್ನು ಒದಗಿಸಲಾಗಿದೆ ; (ಗ್ರಾಮ ಪಂಚಾಯತ್ ವಾರು ವಿವರ ನೀಡುವುದು)

(ಆ) ೨೦೧೫–೧೬, ೨೦೧೬–೧೭ ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಗ್ರಾಮಪಂಚಾಯ್ತಿ ವತಿಯಿಂದ ಆಶ್ರಯ ಯೋಜನೆಯಡಿ ನೀಡಲಾಗಿರುವ ಮನೆಗಳೆಷ್ಟು ; (ಗ್ರಾಮ ಪಂಚಾಯ್ತಿವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಆಶ್ರಯ ಯೋಜನೆಯಡಿ ನೀಡಲಾಗುವ ಅನುದಾನವನ್ನು ಮಂಜೂರು ಮಾಡುವ ಸಂದರ್ಭದಲ್ಲಿ ಪಂಚಾಯಿತಿ ಸಿಬ್ಬಂದಿಗಳು ಮತ್ತು ಕಂಪ್ಯೂಟರ್ ಆಪರೇಟರ್‌ಗಳು ವಿನಾಕಾರಣ ಫಲಾನುಭವಿಗಳಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇಂತಹ ಸಿಬ್ಬಂದಿಗಳನ್ನು ಕರ್ತವ್ಯದಿಂದ ತೆಗೆದು ಹಾಕಲು ಯಾವ ಕ್ರಮಕೈಗೊಳ್ಳಲಾಗಿದೆ ? (ಸ್ಪಷ್ಟ ಮಾಹಿತಿ ಒಸಗಿಸುವುದು)

## ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ ಸಿಬ್ಬಂದಿಗಳಿಗೆ ಪಿ.ಎಫ್ ಮತ್ತು ಎಲ್.ಐ.ಸಿ ಹಣವನ್ನು ಕಟ್ಟದಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೯೨ (೨೫೩೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ ಯಲ್ಲಿರುವ ಸಿಬ್ಬಂದಿಗಳಿಗೆ ವೇತನದಲ್ಲಿ ಕಡಿತಗೊಳಿಸಿರುವ ಪಿ.ಎಫ್ ಮತ್ತು ಎಲ್.ಐ.ಸಿ.ಗೆ ಕಟಾವು ಹಣವನ್ನು ಆಯಾ ಸಂಸ್ಥೆಗಳಿಗೆ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯಾಗಲು ಕಾರಣವೇನು ; (ವಿವರ ನಿಡುವುದು)

(ಆ) ಹಣ ಕಟ್ಟಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಈ ಸಂಸ್ಥೆಗಳಿಗೆ ಕಟ್ಟಿರುವ ಹಣವೆಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿ ಯಲ್ಲಿರುವ ಸಿಬ್ಬಂದಿಗಳ ಆರೋಗ್ಯದ ವಿಷಯವಾಗಿ ರಾಜ್ಯದ ಆಸ್ಪತ್ರೆಗಳೊಂದಿಗೆ ಮಾಡಿಕೊಂಡಿರುವ ಯೋಜನೆಗಳು ಯಾವುವು ? (ವಿವರ ನೀಡುವುದು)

## ಬಸವ ವಸತಿ ಯೋಜನೆಯಡಿ ನಿರ್ಮಾಣ ಮಾಡಲಾದ ಮನೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೯೩ (೨೪೬೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೬-೧೭ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿ ನಿರ್ಮಾಣ ಮಾಡಲಾದ ಮನೆಗಳ ಸಂಖ್ಯೆ ಎಷ್ಟು;

(ಆ) ಸದರಿ ಯೋಜನೆಯಡಿ ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಸಾಲಿನಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು;

(ಇ) ಇದಕ್ಕಾಗಿ ಬಿಡುಗಡೆ ಮಾಡಿರುವ ಮೊತ್ತ ಎಷ್ಟು ; ಪ್ರಸ್ತುತ ಸಾಲಿನಲ್ಲಿ ಮನೆ ನಿರ್ಮಾಣದ ಗುರಿ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೯೪ (೨೫೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೬-೧೭ ನೇ ಸಾಲಿನಲ್ಲಿ ಕೊಡಗು ಜಿಲ್ಲೆಯ ಗ್ರಾಮ ಪಂಚಾಯಿತಿಗಳಿಗೆ ಉದ್ಯೋಗ ಖಾತ್ರಿಯಡಿ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಆ) ೨೦೧೬-೧೭ ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಉದ್ಯೋಗ ಖಾತ್ರಿಯಡಿ ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; ಬಿಡುಗಡೆ ಮಾಡದಿದ್ದಲ್ಲಿ, ಕಾರಣಗಳೇನು ? (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು) ;

# ಹಾವೇರಿ ಜಿಲ್ಲೆಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೫೫ (೨೪೯೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಹಾವೇರಿ ಜಿಲ್ಲೆಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗೆ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು; (ವರ್ಷವಾರು, ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಪ್ರಸ್ತುತ ಈ ಯೋಜನೆಯಡಿಯಲ್ಲಿ ಎಷ್ಟು ಕೂಲಿ ಕಾರ್ಮಿಕರಿಗೆ ಉದ್ಯೋಗ ನೀಡಲಾಗಿದೆ ;

(ಈ) ಈ ಯೋಜನೆಯಿಂದ ನೀಡಲಾಗುತ್ತಿರುವ ಒಟ್ಟು ಕೂಲಿಯ ದಿನಗಳು, ಕೂಲಿಯ ಮೊತ್ತ ಹಾಗೂ ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಉ) ಪ್ರಸ್ತುತ ಯೋಜನೆಯಡಿ ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಕೂಲಿ ಕಾರ್ಮಿಕರಿಗೆ ಅನುಕೂಲವಾಗಿದೆ ? (ವಿವರ ನೀಡುವುದು)

## ಹಾವೇರಿ ಜಿಲ್ಲೆಯ ಗಣಿಗಾರಿಕೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೯೬ (೨೪೯೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಗೆ ಒಳಪಡುವ ತಾಲ್ಲೂಕುಗಳಲ್ಲಿ ಎಷ್ಟು ವಿಧವಾದ ಗಣಿಗಾರಿಕೆಗಳಿವೆ ;

(ಆ) ಸದರಿ ತಾಲ್ಲೂಕುಗಳಲ್ಲಿ ಚಾಲ್ತಿಯಲ್ಲಿರುವ ಗಣಿಗಾರಿಕೆಗಳ ಸಂಖ್ಯೆ ಎಷ್ಟು ; (ಗಣಿಗಾರಿಕೆಗಳ ಕಂಪನಿಗಳ ಹೆಸರು, ಮಾಲೀಕರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಇ) ಇಲ್ಲಿ ಅನಧಿಕೃತವಾಗಿ (ಅಕ್ರಮವಾಗಿ) ನಡೆಯುತ್ತಿರುವ ಗಣಿಗಾರಿಕೆಗಳು ಎಷ್ಟು? (ವಿವರ ನೀಡುವುದು)

## ಗ್ರಾಮ ಪಂಚಾಯತ್‌ಗಳಲ್ಲಿ ಹಳ್ಳಿ ಸಂತೆ ಏರ್ಪಡಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೯೭ (೨೫೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ದೊಡ್ಡ ಗ್ರಾಮ ಪಂಚಾಯತ್‌ಗಳಲ್ಲಿ ಹಳ್ಳಿ ಸಂತೆ ಏರ್ಪಡಿಸಲು ಮೂಲಭೂತ ಸೌಲಭ್ಯ ಕಲ್ಪಿಸಲು ಬಿಡುಗಡೆ ಮಾಡಿರುವ ಹಣ ಎಷ್ಟು ; ಖರ್ಚಾಗಿರುವ ಹಣ ಎಷ್ಟು ; (ತಾಲ್ಲೂಕುವಾರು, ಪಂಚಾಯಿತಿವಾರು ವಿವರ ನೀಡುವುದು)

(ಆ) ಯಾವ ಯಾವ ಗ್ರಾಮ ಪಂಚಾಯ್ತಿಗಳಿಗೆ ಹಣ ಬಿಡುಗಡೆ ಮಾಡಿದೆ ; (ವಿವರ ನಿಡುವುದು)

(ಇ) ಈ ಗ್ರಾಮ ಪಂಚಾಯತ್‌ಗಳು ತೆಗೆದುಕೊಂಡಿರುವ ಮೂಲಭೂತ ಸೌಕರ್ಯಗಳಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಲು ನಿಗಧಿಪಡಿಸಿರುವ ಮಾನದಂಡಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿನ ಉರ್ದು ಶಾಲೆಗಳಲ್ಲಿ ಕನ್ನಡ ಶಿಕ್ಷಕರ ಹುದ್ದೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೯೮ (೨೫೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಉರ್ದು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಸರ್ಕಾರಿ ಅನುದಾನಿತ/ಅನುದಾನ ರಹಿತ ಶಾಲೆಗಳು ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಶಾಲೆಗಳಲ್ಲಿ ಕನ್ನಡ ಶಿಕ್ಷಕರು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಹುದ್ದೆಗಳು ಎಷ್ಟು ; ಖಾಲಿ ಇರುವ ಹುದ್ದೆಗಳು ಎಷ್ಟು ; (ಸರ್ಕಾರಿ ಅನುದಾನಿತ/ಅನುದಾನ ರಹಿತ ಶಾಲೆಗಳ ಜಿಲ್ಲಾವಾರು, ತಾಲ್ಲೂಕುವಾರು, ಶಾಲಾವಾರು ವಿವರ ನೀಡುವುದು)

(ಈ) ಎಷ್ಟು ವರ್ಷಗಳಿಂದ ಈ ಶಾಲೆಗಳಲ್ಲಿ ಕನ್ನಡ ಶಿಕ್ಷಕರ ಹುದ್ದೆ ಖಾಲಿ ಇವೆ ; ಇಲ್ಲಿಯವರೆಗೆ ಭರ್ತಿ ಮಾಡದಿರಲು ಕಾರಣಗಳೇನು;

(ಉ) ಈಗ ಅನುದಾನಕ್ಕೆ ಒಳಪಡುತ್ತಿರುವ ಉರ್ದು ಶಾಲೆಗಳು ಎಷ್ಟು ಮತ್ತು ಅವು ಯಾವುವು ; ಇದರಲ್ಲಿ ಕನ್ನಡ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಶಾಲಾವಾರು ವಿವರ ನೀಡುವುದು)

(ಊ) ಉರ್ದು ಶಾಲೆಗಳಲ್ಲಿ ಕನ್ನಡ ಶಿಕ್ಷಕರಿಗೆ ಹುದ್ದೆ ತುಂಬುವುದಿಲ್ಲ ಎಂಬ ಕೂಗು ಕೇಳಿ ಬರುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಈ ಶಾಲೆಗಳಿಗೆ ನೇಮಕಾತಿಯನ್ನು ಮಾಡಿಕೊಳ್ಳಲು ಸರ್ಕಾರ ರೂಪಿಸಿರುವ ನಿಯಮಗಳೇನು ?

## ಗ್ರಾಮ ಮಟ್ಟದಲ್ಲಿ ಸಕಾಲ ಸೇವೆಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೯ (೨೫೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮಪಂಚಾಯ್ತಿ ವ್ಯಾಪ್ತಿಗಳಲ್ಲಿಯೆ ಸಾರ್ವಜನಿಕರ ಸೇವೆಗೆ ಅನುವು ಮಾಡಿಕೊಡುವ ಉದ್ದೇಶದಿಂದ ತಾಲ್ಲೂಕು ಕೇಂದ್ರಕ್ಕೆ ಅಲೆಯುವ ಬದಲಿಗೆ ಗ್ರಾಮ ಮಟ್ಟದಲ್ಲೆ ಸಕಾಲದಲ್ಲಿ ಸೇವೆಗಳು ಲಭ್ಯವಾಗುವಂತೆ ಮಾಡಿರುವ ಬದಲಾವಣೆಗಳೇನು ;

(ಆ) ಇದರ ನಿರ್ವಹಣೆಯನ್ನು ಯಾವ ಇಲಾಖೆಯ ವ್ಯಾಪ್ತಿಗೆ ತರಲಾಗುವುದು ; ಈ ನಿಟ್ಟಿನಲ್ಲಿ ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಈ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲು ಪಂಚಾಯತ್ ರಾಜ್ ಇಲಾಖೆ ಸಿದ್ಧವಾಗಿದೆಯೇ ; ಹಾಗಿದ್ದಲ್ಲಿ, ಜಾರಿಯಾಗುವುದು ಯಾವಾಗ ;

(ಈ) ಇದಕ್ಕೆ ಹೆಚ್ಚುವರಿ ಸಿಬ್ಬಂದಿಗಳ ನೇಮಕವನ್ನು ಯಾರಿಗೆ ವಹಿಸಲಾಗುತ್ತದೆ; ಅಥವಾ ಈ ಸೇವೆಗಳ ಅನುಕೂಲವನ್ನು ಖಾಸಗಿ ಕಂಪನಿಗಳಿಗೆ ಗುತ್ತಿಗೆ ನೀಡಲು ಸರ್ಕಾರ ಮುಂದಾಗಿದೆಯೇ ? (ವಿವರಗಳನ್ನು ಒದಗಿಸುವುದು)

## ಪಂಚಾಯಿತಿ ಸದಸ್ಯರಿಗೆ ನೀಡುತ್ತಿರುವ ಭತ್ಯೆ ಮತ್ತು ಗೌರವಧನ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)** :–

೨೩೦೦ (೨೫೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳ ಸದಸ್ಯರಿಗೆ ರಾಜ್ಯ ಸರ್ಕಾರ ಒದಗಿಸುತ್ತಿರುವ ಸೌಲಭ್ಯ–ಯೋಜನೆಗಳು ಯಾವುವು ; ಅವರಿಗೆ ನೀಡುತ್ತಿರುವ ಸಂಭಾವನೆ/ಗೌರವಧನ–ಸಭಾಭತ್ಯೆಗಳ ವಿವರ ನೀಡುವುದು ;

(ಆ) ಪರಿಷ್ಕೃತ ಭತ್ಯೆಗಳನ್ನು ಇದುವರೆಗೂ ನೀಡದಿರುವ ಪ್ರಕರಣಗಳು ರಾಜ್ಯದಲ್ಲಿ ಕಂಡುಬಂದಿವೆಯೇ ; ಅವು ಎಲ್ಲೆಲ್ಲಿವೆ; ವಿವರ ನೀಡುವುದು;

(ಇ) ಈ ತನಕ ನೀಡದಿರಲು ಕಾರಣಗಳೇನು ; ಇದರಿಂದ ರಾಜ್ಯಕ್ಕೆ ಬರುವ ವೆಚ್ಚವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಅದೇ ರೀತಿ ಈ ಸದಸ್ಯರುಗಳು ತಮ್ಮ ಆಸ್ತಿ ವಿವರ ಸಲ್ಲಿಸಲು ಕಡ್ಡಾಯ ಮಾಡಿರುವುದು ನಿಜವೇ ; ಇದು ಯಾವಾಗಿನಿಂದ ಜಾರಿಗೆ ಬಂದಿದೆ ;

(ಉ) ಇದನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿರುವ ಪಂಚಾಯ್ತಿಗಳು ಯಾವುವು? (ವಿವರಗಳನ್ನು ಜಿಲ್ಲಾವಾರು ಹಾಗೂ ಆಸ್ತಿ ವಿವರಗಳನ್ನು ಸಲ್ಲಿಸದ ಪಂಚಾಯಿತಿಗಳ ವಿವರಗಳನ್ನು ಜಿಲ್ಲಾವಾರು ಒದಗಿಸುವುದು)

## ಬಿ.ಎಡ್. ವಿದ್ಯಾಭ್ಯಾಸದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೦೧ (೨೫೭೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚಿನ ವರ್ಷಗಳಲ್ಲಿ ಬಿ.ಎಡ್. ಬೇಡಿಕೆ ಕುಸಿತ ಕಾಣಲು ಕಾರಣವೇನು ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಸೀಟ್‌ಗಳು ಉಳಿಯುತ್ತಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಒಟ್ಟು ಬಿ.ಎಡ್. ಕಾಲೇಜುಗಳ ಸಂಖ್ಯೆ ಎಷ್ಟು ; ಪ್ರತಿ ಬಿ.ಎಡ್. ಕಾಲೇಜಿನಲ್ಲಿ ಎಷ್ಟು ಸೀಟುಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ವರ್ಷದಿಂದ ವರ್ಷಕ್ಕೆ ಸೀಟುಗಳು ಉಳಿಕೆ ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಪ್ರಾಧ್ಯಾಪಕರ ಹುದ್ದೆಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೦೨ (೨೫೭೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವವಿದ್ಯಾಲಯಗಳಲ್ಲಿ ಮಂಜೂರಾದ ಬೋಧಕರ, ಪ್ರಾಧ್ಯಾಪಕರ ಮತ್ತು ಸಹ ಪ್ರಾಧ್ಯಾಪಕರ ಹುದ್ದೆಗಳೆಷ್ಟು ಹಾಗೂ ಭರ್ತಿ ಮಾಡಲಾದ ಮತ್ತು ಖಾಲಿ ಹುದ್ದೆಗಳು ಎಷ್ಟು ; (ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಆ) ವಿಶ್ವವಿದ್ಯಾಲಯಗಳಿಂದ ಅನ್ಯ ಇಲಾಖೆಗಳಿಗೆ ನಿಯೋಜನೆಗೊಂಡಿರುವ ಬೋಧಕರ ಸಂಖ್ಯೆ ಎಷ್ಟು ; (ವಿವರವನ್ನು ವಿಶ್ವವಿದ್ಯಾಲಯವಾರು ನೀಡುವುದು)

(ಇ) ವಿಶ್ವವಿದ್ಯಾಲಯಗಳಲ್ಲಿ ಅನೇಕ ಬೋಧಕರ ಹುದ್ದೆಗಳು ಖಾಲಿ ಇದ್ದರೂ, ಯು.ಜಿ.ಸಿ. ನಿಯಮ ಉಲ್ಲಂಘಿಸಿ ಅನ್ಯ ಇಲಾಖೆಗಳಿಗೆ ನಿಯೋಜನೆ ಮಾಡಲು ಕಾರಣಗಳೇನು ; ಇವರನ್ನು ಯಾವಾಗ ಹಿಂಪಡೆಯಲಾಗುವುದು ?

## ಖಾಸಗಿ ಶಾಲೆಗಳ ಪಠ್ಯ ಪುಸ್ತಕಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೦೩(೨೫೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಖಾಸಗಿ ಶಾಲೆಗಳಲ್ಲಿ ಮಕ್ಕಳ ಶಿಕ್ಷಣ ಕಾಯಿದೆ ಅಡಿಯಲ್ಲಿ ದಾಖಲಾಗುವ ಮಕ್ಕಳಿಗೆ ವಿದ್ಯಾ ಸಂಸ್ಥೆಯವರೆ ಪಠ್ಯ ಪುಸ್ತಕ, ನೋಟ್ ಬುಕ್ ಮತ್ತು ಸಮವಸ್ತ್ರ ಹಾಗೂ ಇತರೆ ಲೇಖನ ಸಾಮಗ್ರಿಗಳನ್ನು ಖರೀದಿಸಲು ವ್ಯಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ಕೆಲವು ಖಾಸಗಿ ಶಾಲೆಗಳು ಪುಸ್ತಕ ಹಾಗೂ ಸಮವಸ್ತ್ರದ ಹೆಸರಿನಲ್ಲಿ ವಿದ್ಯಾರ್ಥಿಗಳಿಂದ ದುಬಾರಿ ಹಣ ಸಂಗ್ರಹಿಸುತ್ತಿರುವುದು ನಿಜವೇ; ಹೌದಾದರೆ, ಇಲ್ಲಿಯವರೆಗೆ ಕಳೆದ ನಾಲ್ಕು ವರ್ಷದಲ್ಲಿ ಎಷ್ಟು ಪ್ರಕರಣ ದಾಖಲಾಗಿವೆ ; ಅವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಸಾರಿಗೆ ಇಲಾಖೆಯ ವೋಲ್ವೋ ಬಸ್ಸುಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೦೪ (೨೫೭೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರಿಗೆ ಇಲಾಖೆಯಲ್ಲಿರುವ ಒಟ್ಟು ವೋಲ್ವೋ ಬಸ್‌ಗಳ ಸಂಖ್ಯೆ ಎಷ್ಟು ; ಅವುಗಳನ್ನು ಯಾವ ಯಾವ ವರ್ಷ ಖರೀದಿಸಲಾಗಿದೆ; (ವಿವರ ನೀಡುವುದು)

(ಆ) ಈ ಬಸ್ಸುಗಳಲ್ಲಿ ಎಷ್ಟು ಬಸ್ಸುಗಳು ಚಾಲನೆಯಲ್ಲಿವೆ ; ಎಷ್ಟು ಬಸ್ಸುಗಳು ದೋಷದಿಂದಿವೆ ; (ವಿವರ ನೀಡುವುದು) ಯಾವ ಯಾವ ಡಿಪೋನಲ್ಲಿ ಎಷ್ಟೆಷ್ಟು ಬಸ್ಸುಗಳು ಕಾರ್ಯ ನಿರ್ವಹಿಸುತ್ತಿವೆ;

(ಇ) ಹಲವು ತಿಂಗಳಿನಿಂದ ಬಸ್ಸುಗಳು ತಾಂತ್ರಿಕ ದೋಷದಿಂದ ಕೆಟ್ಟು ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕಠಿಣ ಕ್ರಮವೇನು ?

## ಕಾಮಗಾರಿಗಳು ಅಪೂರ್ಣಗೊಂಡಿರುವ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೦೫ (೨೬೪೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನಲ್ಲಿ ಬರುವ ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ಮಂಡಳಿಯಲ್ಲಿ (ನಿ) ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಆ) ಪೂರ್ಣ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳಾವುವು; (ಸ್ಥಳ ಸಮೇತ ವಿವರ ನೀಡುವುದು)

(ಇ) ಬಾಕಿ ಇರುವ ಕಾಮಗಾರಿಗಳು ಪೂರ್ಣಗೊಳ್ಳಲಿರುವುದು ಯಾವಾಗ?

## ಬೀದರ್ ಜಿಲ್ಲೆಗೆ ಅಂಬೇಡ್ಕರ್ ವಸತಿ ಯೋಜನೆ ಆಶ್ರಯ ಯೋಜನೆ ಮಂಜೂರು ನೀಡುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೦೬(೨೫೧೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಗೆ ಅಂಬೇಡ್ಕರ್ ವಸತಿ ಯೋಜನೆ, ಇಂದಿರಾಗಾಂಧಿ ಅವಾಜ್ ವಸತಿ ಯೋಜನೆ, ಆಶ್ರಯ ಯೋಜನೆಗಳಿಂದ ಎಷ್ಟು ಮನೆಗಳು ಮಂಜೂರಾಗಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದುವರೆಗೆ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮನೆಗಳ ಹಂಚಿಕೆ ವಿಳಂಬವಾಗಲು ಕಾರಣಗಳೇನು ? (ವಿವರ ನೀಡುವುದು)

## ಹೈದರಾಬಾದ್ ಕರ್ನಾಟಕದ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಫಲಿತಾಂಶದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೦೭ (೨೫೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್ ಕರ್ನಾಟಕ ಜಿಲ್ಲೆಗಳಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಫಲಿತಾಂಶ ಕಡಿಮೆ ಬರಲು ಕಾರಣಗಳೇನು ;

(ಆ) ೨೦೧೭–೧೮ನೇ ಸಾಲಿನ ಫಲಿತಾಂಶ ಹೆಚ್ಚಿಸಲು ಯಾವ ಕ್ರಮ ಕೈಗೊಂಡಿದೆ ;

(ಇ) ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದರಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯುತ್ತಿಲ್ಲವಾದ ಕಾರಣ ಶಿಕ್ಷಕರ ನೇಮಕಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿರುವ ಸಾರಿಗೆ ಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೦೮ (೨೫೧೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಾರಿಗೆ ಸೌಲಭ್ಯದಿಂದ ಸಾರ್ವಜನಿಕರು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಬೀದರ್ ಜಿಲ್ಲೆಯ ತಾಲ್ಲೂಕು ಕೇಂದ್ರಗಳಿಂದ ಹಳ್ಳಿಗಳಿಗೆ ಬಸ್ಸುಗಳ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸಾರಿಗೆ ಸೌಲಭ್ಯವನ್ನು ಈ ಹಳ್ಳಿಗಳಿಗೆ ಒದಗಿಸದಿರಲು ಕಾರಣಗಳೇನು ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೦೯ (೨೫೧೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ಸರ್ಕಾರದಿಂದ ಎಷ್ಟು ಅನುದಾನ ಮಂಜೂರಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದುವರೆಗೆ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲಾಗಿದೆ ; ಈ ಘಟಕಗಳಿಗೆ ಎಷ್ಟು ಅನುದಾನ ಖರ್ಚಾಗಿದೆ ; (ವಿವರ ನೀಡುವುದು)

(ಇ) ಬೀದರ್ ಜಿಲ್ಲೆಗೆ ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲು ಸರ್ಕಾರದಿಂದ ಅನುಮೋದನೆ ದೊರಕಿದೆಯೆ ? (ತಾಲ್ಲೂಕುವಾರು ವಿವರ ನೀಡುವುದು)

## K.S.R.T.C/B.M.T.C ಗಳಲ್ಲಿ ನೌಕರರ ಸಂಘಟನೆಗಳ ಮಾನ್ಯತೆ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧೦ (೨೫೩೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) K.S.R.T.C/B.M.T.C ಗಳಲ್ಲಿ ಅಸ್ತಿತ್ವದಲ್ಲಿರುವ ಕಾರ್ಮಿಕ ಸಂಘಟನೆಗಳು ಎಷ್ಟು ;

(ಆ) ಈ ಕಾರ್ಮಿಕ ಸಂಘಟನೆಗಳಲ್ಲಿ ಯಾವ ಯಾವ ಸಂಘಟನೆಗಳಿಗೆ ಮಾನ್ಯತೆ ನೀಡಲಾಗಿದೆ ; ಯಾವ ಯಾವ ಸಂಘಟನೆಗಳಿಗೆ ಮಾನ್ಯತೆ ನೀಡಲಾಗಿಲ್ಲ ;

(ಇ) ಈ ಎರಡು ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಂಘ ಸಂಸ್ಥೆಗಳು ಅಸ್ತಿತ್ವದಲ್ಲಿ ಇವೆಯೇ ; ಅವುಗಳಿಗೆ ಮಾನ್ಯತೆ ನೀಡಲಾಗಿದೆಯೇ ?

## ಕೈಗಾರಿಕಾ ನಿವೇಶನದ ಹಂಚಿಕೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧೧ (೨೫೩೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) KIADB ವತಿಯಿಂದ ಕೈಗಾರಿಕಾ ನಿವೇಶನಗಳನ್ನು ಇದುವರೆವಿಗೆ ಎಲ್ಲೆಲ್ಲಿ ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಎಲ್ಲಾ ಕೈಗಾರಿಕಾ ಪ್ರದೇಶಗಳಲ್ಲಿ ಒಟ್ಟು ಎಷ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಯಾವ ಯಾವ ಅಳತೆಯ ಹಾಗೂ ಎಷ್ಟೆಷ್ಟು ಮೊತ್ತಕ್ಕೆ ನಿವೇಶನ ನೀಡಲಾಗಿದೆ ; (ಕೈಗಾರಿಕಾ ಪ್ರದೇಶಾವಾರು ವಿವರ ನೀಡುವುದು)

(ಇ) KIADB ಯಲ್ಲಿ ಕೆಲಸ ಮಾಡುತ್ತಿರುವ ಒಟ್ಟು ಅಧಿಕಾರಿಗಳ ಸಂಖ್ಯೆ ಎಷ್ಟು; ನೌಕರರ ಸಂಖ್ಯೆ ಎಷ್ಟು ;

(ಈ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ನೇಮಕಾತಿ ಮತ್ತು ಬಡ್ತಿಯಲ್ಲಿ ನಿಗಧಿತ ಶೇಕಡಾವಾರು ಹುದ್ದೆಗಳನ್ನು ನೀಡಲಾಗಿದೆಯೇ;

(ಉ) ನೀಡಿದ್ದಲ್ಲಿ, ವೃಂದವಾರು ಹೆಸರು ಮತ್ತು ಯಾವ ದಿನಾಂಕದಿಂದ ನೀಡಲಾಗಿದೆ ; ಯಾವ ಯಾವ ಹಂತದಲ್ಲಿ ಬಡ್ತಿ ನೀಡಲಾಗಿದೆ? (ವಿವರ ಒದಗಿಸುವುದು)

## ಮಡಿಕೇರಿಗೆ ಸ್ಲೀಪರ್ ಬಸ್ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧೨ (೨೬೯೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸಿ ಕೇಂದ್ರವಾದ ಮಡಿಕೇರಿಗೆ ಬೆಂಗಳೂರಿನಿಂದ ಸ್ಲೀಪರ್ ಬಸ್ ಸೌಲಭ್ಯವಿಲ್ಲದೆ ಇರುವುದರಿಂದ ಮಹಿಳೆಯರಿಗೆ ವೃದ್ಧರಿಗೆ ಪ್ರಯಾಣಕ್ಕೆ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಯಾವ ಕಾಲಮಿತಿಯೊಳಗೆ ಮಡಿಕೇರಿಗೆ ಸ್ಲೀಪರ್ ಬಸ್ ಸೌಲಭ್ಯ ಕಲ್ಪಿಸಲಾಗುವುದು ?

## ಕುಶಾಲನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಸಿವಿಲ್ ವಿಭಾಗದ ಪ್ರಯೋಗಾಲಯದಲ್ಲಿ ಸಾಮಗ್ರಿಗಳ ಕೊರತೆ ಇರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧೩ (೨೬೯೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ, ಕುಶಾಲನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಸಿವಿಲ್ ವಿಭಾಗದಲ್ಲಿ ಪ್ರಯೋಗಾಲಯ ಸಾಮಗ್ರಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಯಾವ ಕಾಲಮಿತಿಯೊಳಗೆ ಕೊರತೆಯಾಗಿರುವ ಪ್ರಯೋಗಾಲಯ ಸಾಮಗ್ರಿಗಳನ್ನು ಪೂರೈಸಿ, ಪ್ರಯೋಗಾಲಯದ ಸಂಪೂರ್ಣ ಉಪಯೋಗವನ್ನು ವಿದ್ಯಾರ್ಥಿಗಳು ಪಡೆಯುವಂತೆ ಮಾಡಲಾಗುವುದು ?

## ಗ್ರಾಮಸ್ವರಾಜ್ ೨ನೇ ಹಂತದ ಜಾರಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧೪ (೨೫೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮಸ್ವರಾಜ್ ಯೋಜನೆಯ ೨ನೇ ಹಂತವು ಯಾವಾಗ ಪ್ರಾರಂಭವಾಗುವುದು ;

(ಆ) ಸದರಿ ಯೋಜನೆಯಲ್ಲಿ ಒಳಗೊಂಡಿರುವ ಕಾರ್ಯಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಯೋಜನೆಯಲ್ಲಿ ಹೆಚ್ಚಿನ ಮೊತ್ತದ ಅನುದಾನ ಬಿಡುಗಡೆಯಾಗುವುದರಿಂದ ಹೋಬಳಿ ಮತ್ತು ತಾಲ್ಲೂಕು ಮಟ್ಟದಲ್ಲಿ ಸಮರ್ಪಕ ಹಾಗೂ ಪರಿಣಾಮಕಾರಿ ಉಸ್ತುವಾರಿಗಾಗಿ ಹೋಬಳಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಅಧಿಕಾರಿಗಳನ್ನು ನೇಮಕ ಮಾಡಲಾಗುವುದೇ ;

(ಈ) ಸದರಿ ನೇಮಕಾತಿಗಳಲ್ಲಿ ಈಗಾಗಲೇ ಸಾಕಷ್ಟು ಸೇವಾನುಭವ ಹೊಂದಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಮುಂಬಡ್ತಿ ನೀಡಲಾಗುವುದೇ ?

## ಅಂತರ್ಜಲ ಮಟ್ಟ ಹೆಚ್ಚಿಸುವ ಕಾಮಗಾರಿಗಳಿಗೆ ನೀಡುತ್ತಿರುವ ಪ್ರೋತ್ಸಾಹ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧೫ (೨೪೯೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಜಮೀನಿನಲ್ಲಿ ಕೊರೆದಿರುವ ಕೊಳವೆ ಬಾವಿಗಳಿಗೆ, ಇಂಗುಗುಂಡಿ ಮಾಡಿ ಅಂತರ್ಜಲ ಮಟ್ಟ ಹೆಚ್ಚಿಸುವಂತೆ ಮಾಡಲು MGNREGA ಯೋಜನೆಯಲ್ಲಿ ಅವಕಾಶ ಕಲ್ಪಿಸಲಾಗಿದೆಯೇ;

(ಆ) ಇಲ್ಲದಿದ್ದಲ್ಲಿ, ಈ ರೀತಿ ಅಂತರ್ಜಲ ಮಟ್ಟ ಹೆಚ್ಚಿಸುವ ಕಾಮಗಾರಿಗಳಿಗೆ ಆದ್ಯತೆ ನೀಡಿ, ಈ ಕಾಮಗಾರಿಗಳನ್ನು ಕೈಗೊಳ್ಳಲು ಸಾರ್ವಜನಿಕರು/ರೈತರನ್ನು ಪ್ರೇರೇಪಿಸಲಾಗುವುದೇ ;

(ಇ) ಸದರಿ ದಿನಗಳಲ್ಲಿ ಅಂತರ್ಜಲ ಮಟ್ಟ ದಿನೇ ದಿನೇ ಕುಸಿಯುತ್ತಿದ್ದು, ಅಂತರ್ಜಲ ಹೆಚ್ಚಿಸುವ ಸಲುವಾಗಿ ಇರುವ ಸರ್ಕಾರದ ಯೋಜನೆಗಳು ಯಾವುವು ; ಅವುಗಳಿಗೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹವೇನು ?

## ತಾಲ್ಲೂಕು ಪಂಚಾಯತಿಯಲ್ಲಿ ಎರಡು ಹೆಚ್ಚುವರಿ ಸಹಾಯಕ ನಿರ್ದೇಶಕರ ಹುದ್ದೆ ಸೃಜಿಸುವ ಪ್ರಸ್ತಾವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧೬ (೨೪೯೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಾಲ್ಲೂಕು ಪಂಚಾಯತಿ ಮಟ್ಟದಲ್ಲಿ ಎರಡು ಹೆಚ್ಚುವರಿ ಸಹಾಯಕ ನಿರ್ದೇಶಕರ ಹುದ್ದೆಯನ್ನು ಸೃಜಿಸುವ ಪ್ರಸ್ತಾವ ಯಾವ ಹಂತದಲ್ಲಿದೆ;

(ಆ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಹಲವು ಯೋಜನೆಗಳ ಸೂಕ್ತ ಮೇಲ್ವಿಚಾರಣೆ ನಡೆಸಲು ಕಾರ್ಯನಿರ್ವಾಹಕ ಅಧಿಕಾರಿ

ಒಬ್ಬರಿಂದ ಸಾಧ್ಯವಾಗದ ಕಾರಣವನ್ನು ಗಮನದಲ್ಲಿಟ್ಟುಕೊಂಡು ಯಾವ ಕಾಲಮಿತಿಯೊಳಗೆ ನೇಮಕ ಮಾಡಲಾಗುವುದು ;

(ಇ) ಸದರಿ ಪ್ರಸ್ತಾವವು ಬಹಳ ವಿಳಂಬವಾಗಲು ಕಾರಣವೇನು ?

## ಹುಲ್ಲಹಳ್ಳಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೧೭ (೨೫೧೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಲ್ಲಹಳ್ಳಿ ಬಳಿ ಹರಿಯುವ ಕಬಿನಿ ನದಿಯಿಂದ ೧೨೩ ಹಳ್ಳಿಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸುವ ಕುಡಿಯುವ ನೀರಿನ ಯೋಜನೆ ಯಾವಾಗ ಆರಂಭವಾಯಿತು ; ಇದರ ಅಂದಾಜು ವೆಚ್ಚ ಎಷ್ಟು ; ಕಾಮಗಾರಿ ಯಾವಾಗ ಮುಕ್ತಾಯವಾಗಲಿದೆ ;

(ಆ) ಈ ಯೋಜನೆಯಲ್ಲಿ ಇದುವರೆಗೆ ಆಗಿರುವ ಕಾಮಗಾರಿಗಳು ಯಾವುವು ; ಶೇಕಡಾವಾರು ಎಷ್ಟು ಕಾಮಗಾರಿ ಮುಕ್ತಾಯವಾಗಿದೆ; ಇನ್ನೂ ಆಗಬೇಕಾಗಿರುವ ಕಾಮಗಾರಿಗಳು ಯಾವುವು ; ನಿಗದಿತ ಅವಧಿಯಲ್ಲಿ ಕಾಮಗಾರಿ ಮುಗಿಯಲಿದೆಯೇ ?

## ಕಂದಹಳ್ಳಿ ಗ್ರಾಮದಲ್ಲಿ ಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೧೮ (೨೫೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿ ೨೦೯ರ ಎರಡೂ ಬದಿಗಳಲ್ಲಿರುವ ಯಳಂದೂರು ತಾಲ್ಲೂಕು ದುಗ್ಗಹಟ್ಟಿ ಗ್ರಾಮ ಪಂಚಾಯ್ತಿಯ

ವ್ಯಾಪ್ತಿಗೆ ಬರುವ ಕಂದಹಳ್ಳಿ ಗ್ರಾಮದಲ್ಲಿ ಚರಂಡಿ ವ್ಯವಸ್ಥೆ ಸರಿ ಇಲ್ಲದೆ, ಮಳೆಗಾಲದಲ್ಲಿ ಗ್ರಾಮದ ಮನೆಗಳಿಗೆ ನೀರುನುಗ್ಗಿ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಂದಹಳ್ಳಿ ಗ್ರಾಮದ ಒಂದು ಬದಿಯಲ್ಲಿ ನಿರ್ಮಿಸಿರುವ ದೊಡ್ಡ ಚರಂಡಿಯಲ್ಲಿ ಹೂಳು ತುಂಬಿದ್ದು, ಗ್ರಾಮದ ಇನ್ನೊಂದು ಬದಿಯಲ್ಲಿ ಚರಂಡಿ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಗ್ರಾಮದ ಚರಂಡಿ ವ್ಯವಸ್ಥೆಯನ್ನು ಸರಿಪಡಿಸಿ, ಮಳೆ ನೀರು ಯರಿಯೂರು ಹಳ್ಳಕ್ಕೆ ಸರಾಗವಾಗಿ ಹರಿದು ಹೋಗಲು ವ್ಯವಸ್ಥೆ ಮಾಡಲಾಗುವುದೇ ; ಇದಕ್ಕಾಗಿ ಅಗತ್ಯವಾದ ವಿಶೇಷ ಅನುದಾನವನ್ನು ಒದಗಿಸಲು ಕ್ರಮ ಜರುಗಿಸಲಾಗುವುದೇ?

## ಕೂರ್ಗಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಡಂಪಿಂಗ್ ಯಾರ್ಡ್ ಸ್ಥಾಪಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೮೯ (೨೫೧೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೂರ್ಗಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಕೈಗಾರಿಕಾ ತ್ಯಾಜ್ಯಗಳನ್ನು ಸುರಿಯಲು, ಸಂಸ್ಕರಿಸಲು ವಿಲೇವಾರಿ ಮಾಡಲು ಒಂದು ಡಂಪಿಂಗ್ ಯಾರ್ಡ್ ಮತ್ತು ತ್ಯಾಜ್ಯ ನಿರ್ವಹಣಾ ಘಟಕ ಸ್ಥಾಪನೆಗೆ ಕ್ರಮ ಜರುಗಿಸಲಾಗುವುದೇ;

(ಆ) ಹೆಬ್ಬಾಳು ಕೈಗಾರಿಕಾ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಬೊಮ್ಮೇನಹಳ್ಳಿ ಕೆರೆಯ ವಿಸ್ತೀರ್ಣ ಎಷ್ಟು; ಈ ಕೆರೆಯಲ್ಲಿ ಹೂಳು ತೆಗೆದು ಆಳ

ಮಾಡಿ, ಅಭಿವೃದ್ಧಿಪಡಿಸುವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ; ಇದುವರೆಗೆ ಇದಕ್ಕೆ ಮಾಡಿರತಕ್ಕ ವೆಚ್ಚ ಎಷ್ಟು; ಇನ್ನೂ ಅಗತ್ಯವಿರುವ ಅನುದಾನವೆಷ್ಟು; ಯಾವ ಮೂಲದಿಂದ ಅನುದಾನವನ್ನು ಭರಿಸಲಾಗಿದೆ; ಭರಿಸಲಾಗುವುದು;

(ಇ) ಈ ಕೆರೆಯನ್ನು ಅಭಿವೃದ್ಧಿಪಡಿಸಿ, ನೀರು ನಿಲ್ಲಿಸಿ, ಇದೇ ನೀರನ್ನು ಕೈಗಾರಿಕೆಗಳ ಉಪಯೋಗಕ್ಕಾಗಿ ಬಳಸಿಕೊಳ್ಳುವ ಯೋಜನೆ ರೂಪಿಸಲಾಗುವುದೇ?

## ಚಾಮರಾಜನಗರದಲ್ಲಿರುವ ಸರ್ಕಾರಿ ಶಾಲೆಗಳಲ್ಲಿನ ಅವ್ಯವಸ್ಥೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೨೦ (೨೫೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದ ವಿವಿಧ ಬಡಾವಣೆಗಳಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳು ಯಾವುವು; ಯಾವ ಯಾವ ಶಾಲೆಗಳಲ್ಲಿ ಶಿಕ್ಷಕರ ಕೊರತೆ, ಕೊಠಡಿಗಳ ಕೊರತೆ, ಶೌಚಾಲಯ, ಕುಡಿಯುವ ನೀರು, ಕಾಂಪೌಂಡ್ ಮೊದಲಾದ ಕುಂದುಕೊರತೆಗಳು ಕಂಡು ಬಂದಿವೆ;

(ಆ) ಚಾಮರಾಜನಗರದ ಸೋಮವಾರಪೇಟೆ ಬಡಾವಣೆಯ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದು, ಕಾಂಪೌಂಡ್ ಇಲ್ಲದೆ ಭದ್ರತೆ ಇಲ್ಲದಿರುವುದು, ಹೆಚ್ಚುವರಿ ಕೊಠಡಿಯ ಅವಶ್ಯಕತೆ ಇರುವುದು ಗಮನಕ್ಕೆ ಬಂದಿದೆಯೇ; ಈ ಸಮಸ್ಯೆಗಳನ್ನು ಪರಿಹರಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

(ಇ) ಭಗೀರಥ ಬಡಾವಣೆಯಲ್ಲಿರುವ ಸರ್ಕಾರಿ ಶಾಲೆಗೆ ಹೋಗಲು ರಸ್ತೆ ಸರಿ ಇಲ್ಲದಿರುವುದು, ಚಂಡಿಪುರ ಶಾಲೆಯಲ್ಲಿ ೮ನೇ ತರಗತಿಯವರೆಗೆ ಮಾತ್ರ ಇದ್ದು ೯ನೇ ತರಗತಿಗೆ ವಿದ್ಯಾರ್ಥಿಗಳು ಬೇರೆ ಶಾಲೆಗೆ ಹೋಗಬೇಕಾಗಿರುವುದು ಗಮನಕ್ಕೆ ಬಂದಿದೆಯೇ; ಈ ಕೊರತೆಗಳನ್ನು ನಿವಾರಿಸಲು ಕ್ರಮ ಜರುಗಿಸಲಾಗುವುದೇ?

## ಕೆ.ಐ.ಎ.ಡಿ.ಬಿ. ಯಿಂದ ಸ್ವಾಧೀನಪಡಿಸಿಕೊಂಡಿರುವ ಭೂಮಿಯ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೨೧ (೨೫೨೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಇದುವರೆವಿಗೂ ಕೈಗಾರಿಕೆಗಳ ಉಪಯೋಗಕ್ಕಾಗಿ ಸ್ವಾಧೀನಪಡಿಸಿಕೊಂಡಿರುವ ಭೂಮಿಯ ವಿಸ್ತೀರ್ಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೆ.ಐ.ಎ.ಡಿ.ಬಿ.ಯುವರು ರೈತರ ಜಮೀನನ್ನು ಸ್ವಾಧೀನಪಡಿಸಿಕೊಳ್ಳುವಾಗ ಅನುಸರಿಸಿರುವ ಮಾನದಂಡಗಳೇನು; (ವಿವರಗಳನ್ನು ನೀಡುವುದು)

(ಇ) ಕೆ.ಐ.ಎ.ಡಿ.ಬಿ.ಯುವರು ರೈತರ ಜಮೀನನ್ನು ಸ್ವಾಧೀನಪಡಿಸಿಕೊಳ್ಳುವಾಗ ಸಂಬಂಧಪಟ್ಟ ರೈತರಿಗೆ ಪ್ರತಿ ಎಕರೆಗೆ ಎಷ್ಟು ಪ್ರಮಾಣದ ಪರಿಹಾರಧನವನ್ನು ನೀಡಲಾಗಿದೆ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ರೈತರಿಂದ ಸ್ವಾಧೀನಪಡಿಸಿಕೊಂಡ ಜಮೀನನ್ನು ಇದುವರೆವಿಗೂ ಯಾವ ಯಾವ ಕಂಪನಿಗಳಿಗೆ ಎಷ್ಟು ಮೊತ್ತಕ್ಕೆ ನೀಡಲಾಗಿದೆ ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಉ) ರೈತರಿಂದ ಸ್ವಾಧೀನಪಡಿಸಿಕೊಂಡ ಜಮೀನನ್ನು ಕಂಪನಿಗಳಿಗೆ ನೀಡುವಾಗ ಸರ್ಕಾರ ಅನುಸರಿಸಿರುವ ಮಾನದಂಡಗಳೇನು? (ವಿವರಗಳನ್ನು ನೀಡುವುದು)

## ಸಾರ್ವತ್ರಿಕ ವರ್ಗಾವಣೆಯ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೨೨ (೨೫೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನ ಸಾರ್ವತ್ರಿಕ ವರ್ಗಾವಣೆಯಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಂದ ವರ್ಗಾವಣೆ ಕೋರಿ ಸಲ್ಲಿಕೆಯಾದ ಅರ್ಜಿಗಳೆಷ್ಟು; ವಿಲೇವಾರಿಯಾದ ಅರ್ಜಿಗಳೆಷ್ಟು; ಬಾಕಿ ಉಳಿದ ಅರ್ಜಿಗಳೆಷ್ಟು; ಬಾಕಿ ಉಳಿಯಲು ಕಾರಣಗಳೇನು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರವು ಪ್ರತಿವರ್ಷ ಸಾರ್ವತ್ರಿಕ ವರ್ಗಾವಣೆಯಲ್ಲಿ ಯಾವ ಅನುಪಾತದಲ್ಲಿ ವರ್ಗಾವಣೆ ಕೈಗೊಳ್ಳಲಾಗುತ್ತಿದೆ; ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿನ ಸಾರ್ವತ್ರಿಕ ವರ್ಗಾವಣೆಯಾದ ಸ್ಥಳಗಳಲ್ಲಿ ನಿಯುಕ್ತಿಗೊಳಿಸಲಾದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಯಾರು ಯಾರು ? (ಹೆಸರು ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

## ರಾಯಬಾಗ ತಾಲ್ಲೂಕಿನ ಕುಡಚಿ ಪಟ್ಟಣಕ್ಕೆ ಕನ್ನಡ ಪ್ರೌಢ ಶಾಲೆ ಮಂಜೂರಾತಿ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೨೩ (೨೫೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಬಾಗ ತಾಲ್ಲೂಕಿನ ಕುಡಚಿ ಪಟ್ಟಣಕ್ಕೆ ದಕ್ಷಿಣ ಕನ್ನಡ ಪ್ರೌಢ ಶಾಲೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದ ಎಷ್ಟು ಕಡು ಬಡವ ಮಕ್ಕಳು ಮಾಧ್ಯಮಿಕ ಶಿಕ್ಷಣದಿಂದ ವಂಚಿತರಾಗಿದ್ದಾರೆ ; (ವಿವರ ನೀಡುವುದು)

(ಇ) ಪ್ರೌಢ ಶಾಲೆ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ; ಇದ್ದರೆ ಯಾವ ವರ್ಷದಿಂದ ಕುಡಚಿ ಪಟ್ಟಣದಲ್ಲಿ ಕನ್ನಡ ಪ್ರೌಢ ಶಾಲೆ ಪ್ರಾರಂಭಿಸಲಾಗುವುದು ಹಾಗೂ ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಆರ್.ಟಿ.ಓ. ಕಛೇರಿ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೨೪ (೨೫೩೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲ್ಲೂಕಿನ ಗ್ರಾಮಗಳನ್ನು ವಿಂಗಡಿಸಿ ಚಿಕ್ಕೋಡಿ ಮತ್ತು ಗೋಕಾಕ ಎರಡು ಆರ್.ಟಿ.ಓ. ಕಛೇರಿಗಳಿಗೆ

ಹಂಚಿಕೆ ಮಾಡಿದ್ದು, ಇದರಿಂದ ಸಾರ್ವಜನಿಕರು ತುಂಬಾ ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಒಂದೇ ತಾಲ್ಲೂಕಿನ ಗ್ರಾಮಗಳನ್ನು ಎರಡು ಆರ್.ಟಿ.ಓ. ವಿಭಾಗಗಳಿಗೆ ಹಂಚಿಕೆ ಮಾಡಲು ಅನುಸರಿಸಿದ ಮಾನದಂಡಗಳೇನು;

(ಇ) ಪ್ರತಿ ತಾಲ್ಲೂಕಿಗೊಂದು ಆರ್.ಟಿ.ಓ. ಕಛೇರಿ ಆರಂಭಿಸುವ ಪ್ರಸಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಮಾಹಿತಿ ನೀಡುವುದು?

## ರಾಜೀವ್ ಗಾಂಧಿ ವಸತಿ ಯೋಜನೆಯಡಿ ಮನೆ ಮಂಜೂರಿ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೨೫ (೨೫೩೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜೀವ್ ಗಾಂಧಿ ವಸತಿ ನಿಗಮದಿಂದ ಬೆಳಗಾವಿ ಜಿಲ್ಲೆಗೆ ಸನ್ ೨೦೧೫ ರಿಂದ ೨೦೧೭ರ ಸಾಲಿನಲ್ಲಿ ವಿಶೇಷ ಘಟಕ ಯೋಜನೆಯಡಿ ವಿಕಲಚೇತನ, ವಿಧವೆಯರ ಮತ್ತು ದೇವದಾಸಿಯರಿಗೆ ಮನೆ ಮಂಜೂರು ಮಾಡಲು ಬಂದ ಅರ್ಜಿಗಳೆಷ್ಟು; ಸದರಿ ವಸತಿ ಯೋಜನೆಯಡಿ ಮನೆ ಮಂಜೂರು ಮಾಡಲು ವಿಳಂಬವಾಗಲು ಕಾರಣವೇನು;

(ಆ) ಈಗ ಮಂಜೂರು ಮಾಡಿದ ಮನೆಗಳೆಷ್ಟು; ಮಂಜೂರಾಗದೆ ಬಾಕಿ ಉಳಿದ ಅರ್ಜಿಗಳೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಗ್ರಾಮ ಪಂಚಾಯತಿಗಳಿಗೆ ಸ್ವಂತ ಕಟ್ಟಡಗಳು ಮತ್ತು ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೨೬ (೨೫೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಅಥಣಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ನದಿಇಂಗಳಗಾಂವ, ಶಿರಹಟ್ಟಿ, ಗ್ರಾಮ ಪಂಚಾಯತ್ ಹಾಗೂ ಕಾಗವಾಡ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಕೆಂಫವಾಡ, ಜಕ್ಕಾರಟ್ಟಿ, ಸವದತ್ತಿ–ಯಲ್ಲಮ್ಮ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಕೆ.ಎಮ್. ಆಲದಕಟ್ಟೆ, ಮೊಬನೂರು, ಬಂಡಾರಹಳ್ಳಿ ಹಾಗೂ ರಾಮದುರ್ಗ ವಿಧಾನ ಸಭೆ ಕ್ಷೇತ್ರ ವ್ಯಾಪ್ತಿಯ ಹನಮಸಾಗರ ಮತ್ತು ಕುಡಚಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಕಣದಾಳ ಗ್ರಾಮ ಪಂಚಾಯತ್‌ಗಳು ಸ್ವಂತ ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಗ್ರಾಮ ಪಂಚಾಯತ್‌ಗಳಿಗೆ ಸ್ವಂತ ಕಟ್ಟಡ ಮತ್ತು ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ;

(ಇ) ಕ್ರಮ ಕೈಗೊಂಡಿದ್ದಲ್ಲಿ ಯಾವ ಹಂತದಲ್ಲಿದೆ? (ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

## ಅಥಣಿ ಮತ್ತು ಕಾಗವಾಡ ವಿಧಾನಸಭಾ ಕ್ಷೇತ್ರಗಳಿಗೆ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೨೬(A) (೨೫೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಕಾಗವಾಡ ವಿಧಾನಸಭೆ ಕ್ಷೇತ್ರದ ವ್ಯಾಪ್ತಿಯ ಶಿವನೂರು, ಜಕ್ಕಾರಟ್ಟಿ, ಅರಹಟ್ಟಿ, ಬಮನಾಳ ಹಾಗೂ ಅಥಣಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಅಡಹಳ್ಳಿ, ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣಕ್ಕಾಗಿ ಸರ್ಕಾರದಿಂದ ಮಂಜೂರಾತಿ ನೀಡಲಾಗಿದೆಯೇ; ನೀಡಿದ್ದಲ್ಲಿ, ಯಾವ ಹಂತದಲ್ಲಿರುತ್ತದೆ; (ಪಂಚಾಯತ್‌ವಾರು ಮಾಹಿತಿ ನೀಡುವುದು)

(ಆ) ಕಾಗವಾಡ ವಿಧಾನಸಭೆ ಕ್ಷೇತ್ರ ಹಾಗೂ ಅಥಣಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಗೆ ಒಳಪಡುವ ಗ್ರಾಮಗಳಿಗೆ ಈಗಾಗಲೇ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ಮಂಜೂರಾತಿ ನೀಡಲಾಗಿದೆ?

## ಕಲುಬುರಗಿ ಜಿಲ್ಲೆಯ ರಸ್ತೆಗಳಿಗೆ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೨೩೨೭ (೨೫೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕಲುಬುರಗಿ ಜಿಲ್ಲೆಗೆ ವಿವಿಧ ಯೋಜನೆಗಳಡಿ ಗ್ರಾಮೀಣ ರಸ್ತೆಗಳ ಸುಧಾರಣೆಗಾಗಿ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು ;

(ಆ) ಸರ್ಕಾರವು ಜಿಲ್ಲೆಯಲ್ಲಿ ಪ್ರಸ್ತುತ ಸಾಲಿನಲ್ಲಿ ಅನುಷ್ಠಾನಕ್ಕೆ ತಂದಿರುವ ವಿವಿಧ ಯೋಜನೆಗಳು ಯಾವುವು ? (ವಿವರ ಒದಗಿಸುವುದು)

## ಕಲಬುರಗಿ ಜಿಲ್ಲೆಯ ರಸ್ತೆಗಳ ಅಭಿವೃದ್ಧಿ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೨೩೨೮ (೨೬೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಗೆ ಸೇರಿದ ಎಲ್ಲಾ ರಸ್ತೆಗಳ ವಿಸ್ತೀರ್ಣ ಎಷ್ಟು;

(ಆ) ಇವುಗಳಲ್ಲಿ ಡಾಂಬರೀಕರಣ, ಜಲ್ಲಿ ರಸ್ತೆಗಳು ಹಾಗೂ ಮಣ್ಣಿನ ರಸ್ತೆಗಳ ವಿಸ್ತೀರ್ಣ ಎಷ್ಟು ; (ವಿವರ ಒದಗಿಸುವುದು)

(ಇ) ಜಿಲ್ಲೆಯಲ್ಲಿನ ಜಲ್ಲಿ ರಸ್ತೆಗಳು ಹಾಗೂ ಮಣ್ಣಿನ ರಸ್ತೆಗಳನ್ನು ಡಾಂಬರೀಕರಣಗೊಳಿಸಿ ಅಭಿವೃದ್ಧಿಪಡಿಸಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು; ಎಷ್ಟು ಸಮಯ ಬೇಕಾಗುತ್ತದೆ ?

## ಕಲಬುರಗಿ ಜಿಲ್ಲೆಯ ಕೈಗಾರಿಕೆಗಳ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೨೩೨೯ (೨೫೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ವಿಶೇಷ ಆರ್ಥಿಕ ವಲಯದ ಯೋಜನೆಯಡಿ ಎಷ್ಟು ಎಕರೆ ಜಮೀನನ್ನು ಭೂ ಸ್ವಾಧೀನಪಡಿಸಲಾಗಿದೆ;

(ಆ) ಸ್ವಾಧೀನಪಡಿಸಿಕೊಂಡ ಜಮೀನುಗಳಲ್ಲಿ ಎಲ್ಲೆಲ್ಲಿ ಎಷ್ಟು ಕೈಗಾರಿಕೆಗಳನ್ನು ಪ್ರಾರಂಭಿಸಲಾಗಿದೆ ; (ವಿವರ ಒದಗಿಸುವುದು)

(ಇ) ಇಂತಹ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲಾಗಿದೆಯೇ; ಇಲ್ಲವಾದಲ್ಲಿ, ಸೂಕ್ತ ಕಾರಣ ತಿಳಿಸುವುದು?

## ಪರಿಹಾರ ಧನ ನೀಡುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೩೦ (೨೫೩೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರವಾನಗಿ ಹೊಂದಿರುವ ಆಟೋ ರಿಕ್ಷಾ ಚಾಲಕರು ಅಪಘಾತದಲ್ಲಿ ಮರಣ ಹೊಂದಿದಾಗ ಅವರಿಗೆ ಪರಿಹಾರ ಧನವನ್ನೇನಾದರೂ ನೀಡಲಾಗುತ್ತಿದೆಯೇ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳಿಗೆ, ಎಷ್ಟು ಮೊತ್ತದ ಪರಿಹಾರ ಧನವನ್ನು ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಹಿಂದೆ ಇಂತಹ ಪ್ರಕರಣಗಳಲ್ಲಿ ಸರ್ಕಾರವು ರೂ. ೫೦,೦೦೦/– ಗಳ ಪರಿಹಾರ ನೀಡುತ್ತಿರುವುದು ನಿಜವೇ;

(ಈ) ಹಾಗಿದ್ದಲ್ಲಿ, ಈ ಪರಿಹಾರ ಮೊತ್ತವನ್ನು ರೂ. ೫೦,೦೦೦/– ದಿಂದ ರೂ. ೨,೦೦,೦೦೦/–ಗಳಿಗೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಪರಿಹಾರ ಧನ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗಿಲ್ಲದಿದ್ದಲ್ಲಿ, ಪರಿಹಾರ ಧನ ಹೆಚ್ಚಿಸಲು ಇರುವ ತೊಂದರೆಗಳೇನು ? (ಪೂರ್ಣ ವಿವರಗಳನ್ನು ನೀಡುವುದು)

## ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೩೧ (೨೫೩೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢ ಶಾಲೆಗಳಲ್ಲಿ ೨೦೧೬–೧೭ನೇ ಶೈಕ್ಷಣಿಕ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಪರೀಕ್ಷೆಗೆ ಪ್ರವೇಶಾತಿ ಪಡೆದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಪ್ರೌಢ ಶಾಲೆಗಳಲ್ಲಿ ಬೋಧಕರು ಮತ್ತು ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜು ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಫಲಿತಾಂಶ ಸಂಪೂರ್ಣ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢ ಶಾಲೆಗಳಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಬೋಧಕರು ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಈ) ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ನಗರ ಪ್ರದೇಶದ ವಿದ್ಯಾರ್ಥಿಗಳ ಜೊತೆ ಸ್ಪರ್ಧಿಸಲು ಸಹಕಾರಿಯಾಗುವಂತೆ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಮಸೀದಿಗಳಿಗೆ ಧನ ಸಹಾಯ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೩೨ (೨೫೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ವತಿಯಿಂದ ಮದರಸ/ಮಸೀದಿಗಳಿಗೆ ಧನ ಸಹಾಯ ಮಂಜೂರು ಮಾಡಲು ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ವತಿಯಿಂದ ಮದರಸ/ಮಸೀದಿಗಳಿಗೆ ಅನುದಾನ ಬಿಡುಗಡೆ ಮಾಡಲು ಅನುಸರಿಸಲಾಗುವ ಮಾನದಂಡಗಳೇನು ? (ವಿವರ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೩೩ (೨೫೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಯಾವ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ನಿಗಧಿಪಡಿಸಿ ಬಿಡುಗಡೆ ಮಾಡಿ ವೆಚ್ಚ ಮಾಡಿರುವ ಹಣವೆಷ್ಟು ; ಈ ಯೋಜನೆಯ ಪ್ರಸ್ತುತ ಪ್ರಗತಿಯ ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯದ ಸಾರಿಗೆ ಇಲಾಖೆಯಲ್ಲಿ ಬಿಡುಗಡೆಯಾದ ಬಸ್ಸುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು) :–**

೨೩೩೪ (೨೫೪೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫, ೨೦೧೫–೧೬, ೨೦೧೬–೧೭ನೇ ಸಾಲುಗಳಲ್ಲಿ ರಾಜ್ಯದ ಸಾರಿಗೆ ಇಲಾಖೆಯಲ್ಲಿ ಎಷ್ಟು ಹೊಸ ಬಸ್ಸುಗಳನ್ನು ಖರೀದಿಸಲಾಗಿದೆ ; ಯಾವ ಯಾವ ಕಂಪೆನಿಗಳಿಂದ ಬಸ್ಸು ಖರೀದಿಸಿದೆ ; ಒಟ್ಟು ವೆಚ್ಚವೆಷ್ಟು ; (ವಿವರ ಒದಗಿಸುವುದು)

(ಆ) ಸಾರಿಗೆ ಇಲಾಖೆಯು ಪ್ರವಾಸಿಗರ ಉಪಯೋಗಕ್ಕಾಗಿ ಎಷ್ಟು ಡಬಲ್ ಡೆಕ್ಕರ್ ಬಸ್ಸುಗಳನ್ನು ಖರೀದಿಸಲಾಗಿದೆ ; ಮಂಗಳೂರಿಗೆ ಎಷ್ಟು ಡಬಲ್ ಡೆಕ್ಕರ್ ಬಸ್ಸುಗಳನ್ನು ನೀಡಲಾಗಿದೆ ; (ವಿವರ ಒದಗಿಸುವುದು)

(ಇ) ಪ್ರವಾಸಿಗರಿಗಾಗಿ ಖರೀದಿಸಿದ ಡಬಲ್ ಡೆಕ್ಕರ್ ಬಸ್ಸು ಒಂದಕ್ಕೆ ತಗಲುವ ವೆಚ್ಚವೆಷ್ಟು ; ಪ್ರಯಾಣಿಕರಿಗೆ ವಿಧಿಸಲಾಗುವ ದರವೆಷ್ಟು ; (ವಿವರ ಒದಗಿಸುವುದು)

(ಈ) ಇತ್ತೀಚೆಗೆ ನೂತನವಾಗಿ ಪ್ರಕಟಿಸಿದ ಒಂದು ರೂಪಾಯಿಗೆ ಒಂದು ಬಾಟಲ್ ನೀರು ಯೋಜನೆಗೆ ಸರ್ಕಾರ ಖರ್ಚು ಮಾಡುವ ಹಣವೆಷ್ಟು ? (ವಿವರ ಒದಗಿಸುವುದು)

## ಕರ್ನಾಟಕ ವಿಶ್ವವಿದ್ಯಾನಿಲಯ ಕಾಯ್ದೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು) :–**

೨೩೩೫ (೨೫೫೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಿಶ್ವವಿದ್ಯಾನಿಲಯ ಕಾಯ್ದೆ, ೨೦೦೦ನ್ನು ಪುನರ್ ಪರಿಶೀಲಿಸಬೇಕೆಂದು ಬೇಡಿಕೆ ಇದ್ದರೂ ಇನ್ನೂ ಪರಿಶೀಲಿಸದೇ ಇರುವುದರಿಂದ ವಿಶ್ವವಿದ್ಯಾನಿಲಯದ ಅಭಿವೃದ್ಧಿಗೆ ಹಿನ್ನಡೆಯಾಗಿರುವ ಬಗ್ಗೆ ಇಲಾಖೆ ಕ್ರಮಕೈಗೊಳ್ಳದೆ ಇರಲು ಕಾರಣಗಳೇನು ;

(ಆ) ವಿಶ್ವವಿದ್ಯಾನಿಲಯಗಳಲ್ಲಿ ನಡೆಯುವ ನೇಮಕಾತಿ ಹಾಗೂ ಕಾನೂನು ಉಲ್ಲಂಘನೆಗಳ ಬಗ್ಗೆ ಅನೇಕ ಆರೋಪಗಳಿದ್ದು, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಉಡುಪಿಯಲ್ಲಿ ಸ್ಥಾಪಿಸಲು ಉದ್ದೇಶಿಸಿದ ಪಿ.ಜಿ.ಸೆಂಟರ್ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ಮಂಗಳೂರು ವಿಶ್ವವಿದ್ಯಾನಿಲಯದ ೨೦೧೬–೧೭, ೨೦೧೭–೧೮ನೇ ಸಾಲಿನಲ್ಲಿ ಕೈಗೊಂಡ ವಿವಿಧ ಯೋಜನೆಗಳು ಯಾವುವು ; (ವಿವರ ನೀಡುವುದು)

(ಉ) ಮಂಗಳೂರು ವಿಶ್ವವಿದ್ಯಾನಿಲಯ ಜಾರಿಗೆ ತಂದ ಕ್ರೀಡಾ ನೀತಿ ಎಲ್ಲಾ ಕಾಲೇಜುಗಳಿಗೆ ಜಾರಿಗೊಳಿಸಲಾಗುವುದೇ ; ಜಾರಿಗೊಳಿಸಲು ಇಲಾಖೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ವಿಶ್ವವಿದ್ಯಾನಿಲಯಗಳಲ್ಲಿ ವಿವಿಧ ಗಣ್ಯ ವ್ಯಕ್ತಿಗಳ ಪೀಠಗಳ ಸ್ಥಾಪನೆ ಬಗ್ಗೆ

**ಶ್ರೀ ಐವನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು) :–**

೨೩೩೬ (೨೫೫೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ವಿಶ್ವವಿದ್ಯಾನಿಲಯಗಳಲ್ಲಿ ವಿವಿಧ ಗಣ್ಯ ವ್ಯಕಿಗಳ ಬಗ್ಗೆ ಪೀಠಗಳು ಸ್ಥಾಪಿಸಲಾಗಿದೆಯೇ ; (ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಆ) ಪೀಠಗಳಿಗೆ ಸರ್ಕಾರ ನೀಡಿದ ಕನಿಷ್ಠ ಮತ್ತು ಗರಿಷ್ಠ ಅನುದಾನ ಎಷ್ಟು ;

(ಇ) ಪೀಠಗಳಿಗೆ ನೀಡಿದ ಅನುದಾನದ ಬಡ್ಡಿ ಮೊತ್ತದಲ್ಲಿ ಕಾರ್ಯಕ್ರಮ ನಡೆಸಲು ಮತ್ತು ಸಿಬ್ಬಂದಿ ನೇಮಿಸಲು ಸಾಧ್ಯವೇ ಎಂದು ಇಲಾಖೆ ಪರಿಶೀಲನೆ ನಡೆಸಿದೆಯೇ ; (ವಿವರ ನೀಡುವುದು)

(ಈ) ಅನೇಕ ಪೀಠಗಳು ನಿಷ್ಕ್ರಿಯೆಗೊಂಡಿದ್ದು, ಬಡ್ಡಿ ಪೀಠವಾಗಿದೆ ಎಂಬ ಆರೋಪ ಇದ್ದು, ಈ ಬಗ್ಗೆ ಇಲಾಖೆ ಪರಿಶೀಲನೆ ನಡೆಸದೇ ಇರುವುದು, ಪೀಠದ ಮೂಲ ಉದ್ದೇಶ ಈಡೇರಿಸದಂತಾಗಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ?

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ನೀಡಿದ ಉದ್ಯೋಗಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು) :–**

೨೩೩೭ (೨೫೫೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫-೧೬, ೨೦೧೬-೧೭ ಮತ್ತು ೨೦೧೭-೧೮ನೇ ಸಾಲುಗಳಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ನೀಡಿದ ಉದ್ಯೋಗಗಳ ಸಂಖ್ಯೆ ಎಷ್ಟು ; ಕನ್ನಡಿಗರಿಗೆ ನೀಡಿದ ಉದ್ಯೋಗದ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ೨೦೧೬-೧೭ ಮತ್ತು ೨೦೧೭-೧೮ನೇ ಸಾಲಿನಲ್ಲಿ ಮೇಕ್ ಇನ್ ಕರ್ನಾಟಕ ಮತ್ತು ಇನ್ವೆಸ್ಟ್ ಇನ್ ಕರ್ನಾಟಕ ಅಡಿಯಲ್ಲಿ ಎಷ್ಟು ಉದ್ದಿಮೆಗಳು ಸ್ಥಾಪಿತವಾಗಿವೆ ;

(ಇ) ಕೈಗಾರಿಕೆಗಳಿಗೆ ಆಹ್ವಾನ ನೀಡಿದನ್ವಯ ರಾಜ್ಯದಲ್ಲಿ ೨೦೧೬-೧೭, ೨೦೧೭-೧೮ನೇ ಸಾಲಿನಲ್ಲಿ ಸ್ಥಾಪನೆಗೊಂಡ ದೊಡ್ಡ ಉದ್ದಿಮೆಗಳಾವುವು ; ಇದರಲ್ಲಿ ನೀಡಿದ ಉದ್ಯೋಗದ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಕೈಗಾರಿಕೆ ಸ್ಥಾಪನೆಯಲ್ಲಿ ಸರ್ಕಾರ ನೀಡುವ ಪ್ರೋತ್ಸಾಹಗಳೇನು ? (ವಿವರ ನೀಡುವುದು)

## ಕರಾವಳಿ ಪ್ರದೇಶಕ್ಕೆ ಪ್ರತ್ಯೇಕ ಮರಳು ನೀತಿ

**ಶ್ರೀ ಐವನ್ ಡಿ'ಸೋಜ (ನಾಮನಿರ್ದೇಶನ ಹೊಂದಿದವರು) :–**

೨೩೩೮ (೨೫೫೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಪ್ರದೇಶಕ್ಕೆ ಪ್ರತ್ಯೇಕ ಮರಳು ನೀತಿ ಜಾರಿಗೆ ತರುವುದಾಗಿ ಇಲಾಖೆ ಘೋಷಿಸಿದ್ದರೂ ಇನ್ನೂ ಜಾರಿಗೆ ತರದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಆ) ಮರಳು ಸರಿಯಾಗಿ ಒದಗಿಸದೇ ಕಟ್ಟಡ ಕಾರ್ಮಿಕರಿಗೆ ಕೆಲಸವಿಲ್ಲದಿರುವ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿದೆಯೇ ;

(ಇ) ಮರಳು ಪೂರೈಸಲು ಇಲಾಖೆ ವಿಫಲಗೊಳ್ಳಲು ಕಾರಣಗಳೇನು ; (ವಿವರ ನೀಡುವುದು)

(ಈ) ಪ್ರಸ್ತುತ ಪ್ರತಿ ಟನ್ ಒಂದಕ್ಕೆ ನಿಗಧಿಪಡಿಸಿರುವ ಮರಳಿನ ದರ ಎಷ್ಟು ; ಇಲಾಖೆ ನಿಗದಿಪಡಿಸಿದ ದರ ಎಷ್ಟು ; ಇಲಾಖೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಇಲಾಖೆ ಪ್ರಸ್ತುತ ನೀತಿಗಳಿಂದ ಅಕ್ರಮ ಮರಳುಗಾರಿಕೆಗೆ ಪ್ರೋತ್ಸಾಹ ನೀಡಲಾಗುತ್ತಿದ್ದು, ರಾಜ್ಯದಲ್ಲಿ ಅಕ್ರಮ ಮರಳು ಸಾಗಾಣಿಕೆ ಬಗ್ಗೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಉಪನ್ಯಾಸಕರ ವೇತನ ತಾರತಮ್ಯ ಬಗೆಹರಿಸುವ ಕುರಿತು

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–**

೨೩೩೯ (೨೬೪೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಏಪ್ರಿಲ್ ೨೦೧೬ರಂದು ಪಿಯುಸಿ ಉಪನ್ಯಾಸಕರು ಹಾಗೂ ಪ್ರಾಂಶುಪಾಲರು ಕುಮಾರನಾಯಕ್ ವರದಿ ಜಾರಿಮಾಡಬೇಕೆಂದು ಒತ್ತಾಯಿಸಿ ಮೌಲ್ಯಮಾಪನ ಬಹಿಷ್ಕಾರ ಮಾಡಿದಾಗ ಸರ್ಕಾರ ಎರಡು ಹೆಚ್ಚುವರಿ ವೇತನ ಬಡ್ತಿ ನೀಡುವುದಾಗಿ ಒಪ್ಪಿಕೊಂಡು , ಒಂದೇ ಒಂದು ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಿದ್ದು; ನಿಜವೇ ; (ವಿವರ ನೀಡುವುದು)

(ಆ) ಉಪನ್ಯಾಸಕರಿಗೆ ಸದ್ಯ ನೀಡಿರುವ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದೈಹಿಕ ಶಿಕ್ಷಣ ಉಪನ್ಯಾಸಕರಿಗೆ ನೀಡದೇ ಇರುವುದು ನಿಜವೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಯಾವಾಗ ನಿರ್ಣಯ ಕೈಗೊಳ್ಳಲಿರುವುದು ;

(ಇ) ಸರ್ಕಾರ ಪಿಯುಸಿ ಉಪನ್ಯಾಸಕರ ವೇತನ ತಾರತಮ್ಯ ಸಮಸ್ಯೆ ಸರಿಪಡಿಸುವಲ್ಲಿ ಯಾವ ರೀತಿಯ ಕ್ರಮವನ್ನು ಕೈಗೊಂಡಿದೆ ? (ವಿವರ ನೀಡುವುದು)

## ರಿಯಲ್ ಎಸ್ಟೇಟ್ ನಿಯಂತ್ರಣ ಕಾಯ್ದೆಯ ಅನುಷ್ಠಾನದ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೩೪೦ (೨೫೦೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಿಯಲ್ ಎಸ್ಟೇಟ್ ನಿಯಂತ್ರಣ ಕಾಯ್ದೆ (ರೇರಾ) ರಾಜ್ಯದಲ್ಲಿ ಅನುಷ್ಠಾನಗೊಂಡಿದೆಯೇ ;

(ಆ) ಸದರಿ ಕಾಯ್ದೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಇರುವ ಅಡೆತಡೆಗಳೇನು ; ಅವುಗಳನ್ನು ನಿವಾರಿಸಲು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕಾಯ್ದೆ ಜಾರಿಯಲ್ಲಿ ಒಳಗೊಂಡಿರುವ ಇಲಾಖೆಗಳಾವುವು ; ಅವುಗಳು ಕಾಯ್ದೆ ಜಾರಿಗೆ ಬೇಕಾದ ಸಿದ್ಧತೆ ಮಾಡಿಕೊಂಡಿವೆಯೇ ;

(ಈ) ರಾಜ್ಯದಲ್ಲಿ ಕಾಯ್ದೆ ಯಾವಾಗ ಅನುಷ್ಠಾನಗೊಳ್ಳಲಿದೆ ?

## ಕಿರಿಯ ಹಾಗೂ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಾಗಲು ಇರಬೇಕಾದ ಅರ್ಹತೆಗಳ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೩೪೧ (೨೫೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಿರಿಯ ಪ್ರಾಥಮಿಕ ಮತ್ತು ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಾಗಲು ಇರಬೇಕಾದ ಅರ್ಹತೆಗಳೇನು ;

(ಆ) ಅರ್ಹತೆ ಇಲ್ಲದ ಶಿಕ್ಷಕರನ್ನು ರಾಜ್ಯದ ಖಾಸಗಿ ಶಾಲೆಗಳಲ್ಲಿ ನೇಮಿಸಿಕೊಂಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಈ) ಅರ್ಹತೆ ಇದ್ದ ಶಿಕ್ಷಕರನ್ನೇ ಕಡ್ಡಾಯವಾಗಿ ನೇಮಿಸಿಕೊಳ್ಳಲು ಸರ್ಕಾರ ನಿಯಮಾವಳಿಗಳನ್ನು ತರಲು ಉದ್ದೇಶಿಸಿದೆಯೇ ; ಈ ಬಗ್ಗೆ ಕೈಗೊಳ್ಳುತ್ತಿರುವ ಕ್ರಮಗಳೇನು ;

(ಉ) ಖಾಸಗಿ ಶಾಲೆಗಳಲ್ಲಿ ಆಡಳಿತ ಮಂಡಳಿಯು ಶಿಕ್ಷಕರಿಗೆ ಕನಿಷ್ಠ ವೇತನ ಮತ್ತು ಕಾಲ ಕಾಲಕ್ಕೆ ವೇತನ ನೀಡಿಲ್ಲದಿದ್ದಲ್ಲಿ, ಇಲಾಖೆಗೆ ದೂರು ನೀಡಲು ಅವಕಾಶ ಕಲ್ಪಿಸಲಾಗುತ್ತಿದೆಯೇ ; ಹೌದಾದಲ್ಲಿ, ಈ ಬಗ್ಗೆ ವಿವರಗಳನ್ನು ನೀಡುವುದು ?

## ೧ ರಿಂದ ೧೦ನೇ ತರಗತಿಯವರೆಗೆ ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಶೂ ಮತ್ತು ಸಾಕ್ಸ್ ವಿತರಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೩೪೨ (೨೫೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧ ರಿಂದ ೧೦ನೇ ತರಗತಿ ವ್ಯಾಸಂಗ ಮಾಡುವ ಎಲ್ಲಾ ಸರ್ಕಾರಿ ಶಾಲಾ ಮಕ್ಕಳಿಗೆ ಶೂ ಮತ್ತು ಸಾಕ್ಸ್ ನೀಡುತ್ತಿರುವುದು ನಿಜವೇ ;

(ಆ) ಕಳೆದ ಶೈಕ್ಷಣಿಕ ವರ್ಷದಲ್ಲಿ ಶೂ/ಸಾಕ್ಸ್ ವಿತರಿಸಲಾಗಿದೆಯೇ/ ವಿತರಿಸದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಇ) ಈ ಶೈಕ್ಷಣಿಕ ವರ್ಷದಲ್ಲಿ ಸಕಾಲಕ್ಕೆ ಶಾಲಾ ಮಕ್ಕಳಿಗೆ ಶೂ/ಸಾಕ್ಸ್ ವಿತರಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ; ಈ ಯೋಜನೆಯು ಅನುಷ್ಠಾನಗೊಂಡಿದೆಯೇ ;

(ಈ) ಕಳೆದ ಶೈಕ್ಷಣಿಕ ವರ್ಷಗಳಲ್ಲಿ ಕಳಪೆ ಮಟ್ಟದ ಶೂ/ಸಾಕ್ಸ್ ವಿತರಣೆ ಆಗಿರುವ ಬಗ್ಗೆ ದೂರುಗಳಿವೆಯೇ ; ಇದ್ದಲ್ಲಿ, ಆ ಬಗ್ಗೆ ಕೈಗೊಂಡ ಕ್ರಮಗಳೇನು ?

## ಮುಕ್ತ ವಿಶ್ವವಿದ್ಯಾಲಯಗಳ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೩೪೩ (೨೬೪೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಭಾರತದ ಮುಕ್ತ ವಿಶ್ವವಿದ್ಯಾಲಯವು ಎಷ್ಟು ವರ್ಷಗಳಿಂದ ಬಾಗಿಲು ಮುಚ್ಚಿದೆ ;

(ಆ) ಗ್ರಾಮೀಣ ಭಾಗದ ಬಡ, ಮಧ್ಯಮ ವರ್ಗದವರಿಗೆ, ಬಡ್ತಿ ಬಯಸುವ ಸರ್ಕಾರಿ ನೌಕರರಿಗೆ ಹಾಗೂ ಉನ್ನತ ಶಿಕ್ಷಣ ಪಡೆಯಬೇಕೆಂಬ ಉತ್ಕಟ ಆಕಾಂಕ್ಷೆ ಹೊಂದಿದವರು ಇದರಿಂದ ಅವಕಾಶ ವಂಚಿತರಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ ;

(ಇ) ಮುಕ್ತ ವಿಶ್ವವಿದ್ಯಾಲಯವನ್ನು ಮತ್ತೆ ತೆರೆಯಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ಕನ್ನಡ ಪುಸ್ತಕಗಳ ಖರೀದಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೩೪೪ (೨೪೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಪ್ರಕಟವಾಗಿರುವ ಯಾವುದೇ ಕನ್ನಡ ಪುಸ್ತಕಗಳನ್ನು ಗ್ರಂಥಾಲಯು ಇಲಾಖೆಯಿಂದ ಖರೀದಿಸಲಾಗಿಲ್ಲ ಎನ್ನುವುದು ನಿಜವೇ ; (ವಿವರ ನೀಡುವುದು)

(ಆ) ಈ ರೀತಿ ಪುಸ್ತಕ ಖರೀದಿ ಸ್ಥಗಿತಗೊಳಿಸಲು ಕಾರಣವೇನು ;

(ಇ) ಪಿಯುಸಿ ನಂತರದ ಸ್ಪರ್ಧಾತ್ಮಕ ಪರೀಕ್ಷೆಗಳಾದ, ಸಿ.ಇ.ಟಿ, ಜೆ.ಇ.ಇ., ಎನ್.ಇ.ಇ.ಟಿ, ಮೊದಲಾದ ಪರೀಕ್ಷೆಗಳಿಗೆ ಸಂಬಂಧಪಟ್ಟ ಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಹೆಚ್ಚಿನ ವ್ಯಾಸಂಗಕ್ಕಾಗಿ ಕನಿಷ್ಠ ಹೋಬಳಿ ಮಟ್ಟದ ಗ್ರಂಥಾಲಯಗಳಲ್ಲಿ ಒದಗಿಸುವ ಬಗ್ಗೆ ಸರ್ಕಾರದ ನಿಲುವೇನು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 066/800 ಪ್ರತಿಗಳು/06–06–2017